₹ 4 ಪುಟ: 4 ಸಂಪುಟ: 4 ಸಂಚಿಕೆ 84 newsbelagavi@gmail.com 9900332089 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 Issue: 84 Tuesday, 16, MAY, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ಸಿಎಂ ಆಯ್ಕೆ ಬಿಕ್ಕಟ್ಟು

### ■ ಡಿಕೆ ಶಿವಕುಮಾರ್ ದೆಹಲಿ ಪ್ರವಾಸ ಕೊನೆಯ ಕ್ಷಣದಲ್ಲಿ ರದ್ದು



ಬೆಂಗಳೂರು: ಮುಖ್ಯಮಂತ್ರಿ ಸ್ಥಾನಕ್ಕೆ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಬಿಗಿಪಟ್ಟು ಹಿಡಿದಿರುವುದರಿಂದ ನೂತನ ಮುಖ್ಯಮಂತ್ರಿ ಆಯ್ಕೆ ಕಾಂಗ್ರೆಸ್ ಹೈಕಮಾಂಡ್ ಗೆ ತಲೆ ನೋವಾಗಿ ಪರಿಣಮಿಸಿದೆ. ವರಿಷ್ಠರ ಆಹ್ವಾನದ ಮೇರೆಗೆ ಸಿದ್ದರಾಮಯ್ಯ ತಮ್ಮ ಬೆಂಬಲಿಗರೊಂದಿಗೆ ದೆಹಲಿ ತಲುಪಿದ್ದು, ರಾತ್ರಿ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ಕುರಿತು ಮಾತುಕತೆ ನಡೆಸಲಿದ್ದಾರೆ ಎನ್ನಲಾಗಿದೆ.

ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಕೂಡಾ ದೆಹಲಿಗೆ ತೆರಳಬೇಕಿತ್ತು. ಸಂಜೆ 7–30ಕ್ಕೆ ಕೆಐಎಬಿಯಿಂದ ದೆಹಲಿಗೆ ತಲುಪಲು ಏರ್ ಇಂಡಿಂ–ಯಾ ವಿಮಾನದ ಟಿಕೆಟ್ ಕೂಡಾ ಬುಕ್ ಆಗಿತ್ತು. ಆದರೆ, ಕೊನೆಯ ಕ್ಷಣದಲ್ಲಿ ಅವರ ಭೇಟಿ ರದ್ದಾಗಿದೆ. ಈ ಕುರಿತು ತಮ್ಮ ಸದಾಶಿವನಗರದ ನಿವಾಸದ ಬಳಿ ಸುದ್ದಿಗಾರರಿಗೆ ತಿಳಿಸಿದ ಡಿಕೆ ಶಿವಕುಮಾರ್, ನನ್ನ ಹೊಟ್ಟೆಯಲ್ಲಿ ಸಮಸ್ಯೆಯಾಗಿದೆ, ಸ್ವಲ್ಪ ವಿಶ್ರಾಂತಿ ಬೇಕು ಎಂದರು.

ನನಗೆ ಸಮಯ ಪ್ರಜ್ಞೆ ಇದೆ. ಹೋರಾಟದ ಕಿಚ್ಚು ಇದೆ. ಹೋರಾಟದಲ್ಲಿ ಯಶಸ್ಸು ಸಿಗಬೇಕಾದರೆ ತಾಳ್ಮೆ ಇರಬೇಕು. ಧರ್ಮರಾಯರಂತೆ ತಾಳ್ಮೆ ಇರಬೇಕು, ಭೀಮನ ಬಲ ಇರಬೇಕು, ಕೃಷ್ಣನ ತಂತ್ರ ಇರಬೇಕು. ಪೂಜೆ ಪುನಸ್ಕಾರ, ಹುಟ್ಟುಹಬ್ಬ ಆಚರಣೆ ಬಳಿಕ ದೆಹಲಿಗೆ ಭೇಟಿ ನೀಡುವುದಾಗಿ ತಿಳಿಸಿದರು.

135 ಕಾಂಗ್ರೆಸ್ ಶಾಸಕರಿದ್ದಾರೆ. ನನ್ನ ಬಳಿ ಶಾಸಕರಿಲ್ಲ, ಯಾವುದೇ ನಂಬರ್ ಇಲ್ಲ, ಯಾರನ್ನು ದೆಹಲಿಗೆ ಕರೆದೊಯ್ಯಲ್ಲ ಅಂತಾ ಹೇಳುವ ಮೂಲಕ ಪರೋಕ್ಷವಾಗಿ ಡಿಕೆ ಶಿವಕುಮಾರ್ ಸಿದ್ದರಾಮಯ್ಯ ಅವರ ತಂತ್ರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

## ಶೀಘ್ರ ಸರಕಾರ ರಚನೆ: ಸುರ್ಜೇವಾಲ



ನವದೆಹಲಿ: ಶೀಘ್ರವೇ ಕರ್ನಾಟಕದಲ್ಲಿ ಸರ್ಕಾರ ರಚನೆ ಮಾಡುತ್ತೇವೆ ಎಂದು ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಹೇಳಿದ್ದಾರೆ.

ದೆಹಲಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ವೀಕ್ಷಕರು ಸೋಮವಾರ ರಾತ್ರಿಯ ಒಳಗಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ವರದಿ ಸಲ್ಲಿಸಲಿದ್ದಾರೆ. ಶೀಘ್ರವೇ ಕರ್ನಾಟಕದಲ್ಲಿ ಸರ್ಕಾರ ರಚನೆ ಮಾಡಲಿದ್ದೇವೆ' ಎಂದು ಹೇಳಿದರು.

ಭಾನುವಾರ ರಾತ್ರಿ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ, ಹೈಕಮಾಂಡ್‌ನಿಂದ ಬಂದಿದ್ದ ವೀಕ್ಷಕರು ಶಾಸಕರ ಅಭಿಪ್ರಾಯ ಪಡೆದಿದ್ದಾರೆ.

ಸೋಮವಾರ ರಾತ್ರಿ ಅದನ್ನು ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಸಲ್ಲಿಸಲಿದ್ದಾರೆ. ಸಿಎಂ ಆಯ್ಕೆಯ ಕುರಿತು ಅವರೇ ಅಂತಿಮ ನಿರ್ಧಾರ ತೆಗೆದುಕೊಳ್ಳಲಿದ್ದಾರೆ.

ಇನ್ನು ಈ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿರುವ ವೀಕ್ಷಕರಲ್ಲಿ ಓರ್ವರಾದ, ಭನ್ವರ್ ಜಿತೇಂದ್ರ ಸಿಂಗ್, ಕಳೆದ ರಾತ್ರಿ ನಾವು ಶಾಸಕರೊಂದಿಗ 4–5 ಗಂಟೆಗಳ ಕಾಲ ಚರ್ಚೆ ಮಾಡಿ ಅವರ, ಅಭಿಪ್ರಾಯ ಪಡೆದಿದ್ದೇವೆ. ಸಂಜೆಯೊಳಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವ–ರಿಗೆ ವರದಿ ಸಲ್ಲಿಸುತ್ತೇವೆ' ಎಂದು ಹೇಳಿದರು.

### 18 ರಂದು ನೂತನ ಮುಖ್ಯಮಂತ್ರಿ ಪ್ರಮಾಣ ವಚನ ಸ್ವೀಕಾರ

ನವದೆಹಲಿ : ಕರ್ನಾಟಕದ ನೂತನ ಮುಖ್ಯಮಂತ್ರಿ ಹಾಗೂ ಸಂಪುಟ ಗುರುವಾರ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಪಾಲ್ಗೊಳ್ಳುವಂತೆ ಎಲ್ಲಾ ಸಮಾನ ಮನಸ್ಕ ಪಕ್ಷಗಳಿಗೆ ಕಾಂಗ್ರೆಸ್ ಆಹ್ವಾನ ಕಳುಹಿಸಿದೆ. ಕರ್ನಾಟಕ ಸಚಿವ ಸಂಪುಟದ ಅಂತಿಮ ರೂಪುರೇಷೆ ಒಂದೆರೆಡು ದಿನದಲ್ಲಿ ರೂಪುಗೊಳ್ಳಲಿದೆ ಎಂದು ಮೂಲಗಳು ತಿಳಿಸಿವೆ.

## ಮೊದಲ ಸಚಿವ ಸಂಪುಟದಲ್ಲಿಯೇ ಐದು ಗ್ಯಾರಂಟಿ ಜಾರಿ: ಸಿದ್ದರಾಮಯ್ಯ




ಬೆಂಗಳೂರು: ಯಾವುದೇ ಚುನಾವಣೆಯಲ್ಲಿ ಕೇವಲ ರಾಜಕೀಯ ಪಕ್ಷದ ನಾಯಕರು ಮತ್ತು ಕಾರ್ಯಕರ್ತರು ಮಾತ್ರವಲ್ಲ ಲಕ್ಷಾಂತರ ಸಂಖ್ಯೆಯಲ್ಲಿ ಪಕ್ಷದ ಕಾರ್ಯಕರ್ತರಲ್ಲದ ಅಭಿಮಾನಿಗಳು ರಾತ್ರಿ ಹಗಲು ಶ್ರಮಪಟ್ಟಿರುತ್ತಾರೆ.

ಅವರೆಲ್ಲರಿಗೂ ತುಂಬು ಹೃದಯದ ಕೃತಜ್ಞತೆಗಳು. ಸಿಎಂ ಆಯ್ಕೆಯಾದ ಬಳಿಕ ಮೊದಲ ಸಂಪುಟ ಸಭೆಯಲ್ಲಿ ರಾಜ್ಯದ ಜನತೆಗೆ ನೀಡಿರುವ ಭರವಸೆಗಳನ್ನು ಜಾರಿಗೊಳಿಸಲಾಗುವುದು ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಹೇಳಿದರು.

ಈ ಚುನಾವಣೆಯಲ್ಲಿ ನಮ್ಮ ನಾಯಕರಾದ ರಾಹುಲ್ ಗಾಂಧಿ ಮತ್ತು ಪ್ರಿಯಾಂಕ ಗಾಂಧಿ ಅವರು ನಡೆಸಿರುವ ಪ್ರಯತ್ನವನ್ನು ಮರೆಯಲಾಗದು.ಬಹಳ ಮುಖ್ಯವಾಗಿ ಕರ್ನಾಟಕದ ಚುನಾವಣಾ ಪ್ರಚಾರ ಪ್ರಾರಂಭವಾಗಿದ್ದೇ ರಾಹುಲ್ ಗಾಂಧಿಯವರ ಭಾರತ ಜೋಡೋ ಯಾತ್ರೆಯಿಂದ.

ಈ ಯಾತ್ರೆ ಇಡೀ ಕರ್ನಾಟಕದಲ್ಲಿ ಸಂಚಲನ ಉಂಟುಮಾಡಿತ್ತು. ನಮ್ಮ ಕಾರ್ಯಕರ್ತರಲ್ಲಿ ಹೊಸ ಹುಮ್ಮಸ್ಸು ಮೂಡಿಸಿತ್ತು. ಈ ಫಲಿತಾಂಶದ ಶ್ರೇಯಸ್ಸು ಅವರಿಗೂ ಸಲ್ಲುತ್ತದೆ.

## ಬಜರಂಗದಳದ ವಿರುದ್ಧ ಹೇಳಿಕೆ: ಖರ್ಗೆಗೆ ನೋಟಿಸ್



ದೆಹಲಿ: ಕರ್ನಾಟಕ ವಿಧಾನಸಭೆ ಚುನಾವಣೆಯ ವೇಳೆ ಬಜರಂಗದಳದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂ ಆರೋಪದ ಮೇಲೆ ಹಿಂದೂ ಸುರಕ್ಷಾ ಪರಿಷತ್ ಎಂಬ ಸಂಘಟನೆಯ ಸಂಸ್ಥಾಪಕ ಹಿತೇಶ್ ಭಾರದ್ವಾಜ್ ಎಂಬುವವರು ಸಲ್ಲಿಸಿರುವ ರೂ 100 ಕೋಟಿ ಮಾನನಷ್ಟ ಮೊಕದ್ದಮೆಯಲ್ಲಿ ಪಂಜಾಬ್ ನ್ಯಾಯಾಲಯ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಸಮನ್ಸ್ ಜಾರಿ ಮಾಡಿದೆ.

ಬಜರಂಗದಳವನ್ನು ದೇಶವಿರೋಧಿ ಸಂಘಟನೆಗಳೊಂದಿಗೆ ಕಾಂಗ್ರೆಸ್ ಹೋಲಿಕೆ ಮಾಡಿದೆ ಎಂದು ಭಾರದ್ವಾಜ್ ಆರೋಪಿಸಿದ್ದಾರೆ.

ಕರ್ನಾಟಕದಲ್ಲಿ ಅಧಿಕಾರಕ್ಕೆ ಬಂದರೆ ಬಜರಂಗದಳದ ಮೇಲೆ ನಿಷೇಧ ಹೇರುವುದಾಗಿ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಭರವಸೆ ನೀಡಿದೆ.

ಬಜರಂಗದಳವನ್ನು ಕಾಂಗ್ರೆಸ್ ದೇಶವಿರೋಧಿ ಸಂಘಟನೆಗಳೊಂದಿಗೆ ಹೋಲಿಸಿದೆ ಮತ್ತು ಚುನಾವಣೆಯಲ್ಲಿ ಗೆದ್ದರೆ ಅದನ್ನು ನಿಷೇಧಿಸುವುದಾಗಿ ಭರವಸೆ ನೀಡಿದೆ. ಇದನ್ನು ಗಮನಿಸಿ ನಾನು ಗುರುವಾರ ನ್ಯಾಯಾಲಯದ ಮೊರೆ ಹೋಗಿದ್ದೇನೆ' ಎಂದು ಭಾರದ್ವಾಜ್ ಹೇಳಿರುವುದಾಗಿ ರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ಜುಲೈ 10 ರಂದು ಸಂಗ್ರೂರ್ ನ್ಯಾಯಾಲಯಕ್ಕೆ ಹಾಜರಾಗುವಂತೆ ಸಿವಿಲ್ ನ್ಯಾಯಾಧೀಶ (ಹಿರಿಯ ವಿಭಾಗ) ರಮಣದೀಪ್ ಕೌರ್ ಅವರು ಖರ್ಗೆ ಅವರಿಗೆ ಸೂಚಿಸಿದ್ದಾರೆ.

## ಡಿಕೆಶಿ ಹುಟ್ಟುಹಬ್ಬ ಆಚರಣೆ: ಕೇಕ್ ಕತ್ತರಿಸಿ ಸಂಭ್ರಮ



ಬೆಂಗಳೂರು: ಬೆಂಗಳೂರಿನ ವಸಂತನಗರದಲ್ಲಿರುವ ಶಾಂಗ್ರಿಲಾ ಹೋಟೆಲ್ ನಲ್ಲಿ ಭಾನುವಾರ ಮಧ್ಯರಾತ್ರಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ತಮ್ಮ 62ನೇ ಹುಟ್ಟುಹಬ್ಬವನ್ನು ಕೇಕ್ ಕತ್ತರಿಸುವ ಮೂಲಕ ಆಚ–ರಿಸಿದರು.

ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅವರು ಕೇಕ್ ತಿನ್ನಿಸಿ ಶಿವಕುಮಾರ್ ಅವ–ರಿಗೆ ಶುಭಾಶಯ ತಿಳಿಸಿದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲಾ, ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ , ಶಾಸಕ ದಿನೇಶ್ ಗುಂಡೂರಾವ್, ಕೆಪಿಸಿಸಿ ಕಾರ್ಯಾಧ್ಯಕ್ಷ ಸಲೀಂ ಅಹ್ಮದ್ ಮತ್ತಿತರರು ಇದ್ದರು.

ಡಿ.ಕೆ ಶಿವಕುಮಾರ್ ನನ್ನ ಜೀವನ ಕರ್ನಾಟಕದ ಜನರ ಸೇವೆಗೆ ಮುಡಿಪಾಗಿದೆ. ನನ್ನ ಹುಟ್ಟುಹಬ್ಬದ ಮುನ್ನಾದಿನದಂದು, ಕರ್ನಾಟಕದ ಜನರು ನನಗೆ ಅತ್ಯುತ್ತಮ ಉಡ–ುಗೊರೆ ನೀಡಿದ್ದಾರೆರಣದೀಪ್ ಸಿಂಗ್ ಸುರ್ಜೇವಾಲ, ರಾಜ್ಯ ಕಾಂಗ್ರೆಸ್ ಉಸ್ತುವಾರಿಎಐಸಿಸಿ ವೀಕ್ಷಕರೊಂದಿಗಿನ ಸಭೆಯ ನಡುವೆಯೇ ಡಿ.ಕೆ ಶಿವಕುಮಾರ್ ಅವರ ಜನ್ಮದಿನ ಆಚರಣೆ ಮಾಡಲಾಯಿತು. ಎಲ್ಲರೂ ಒಟ್ಟಾಗಿ ಅವರ ಹುಟ್ಟುಹಬ್ಬ ಆಚರಿಸಿದೆವು. ಜನ್ಮದಿನದ ಶುಭಾಶಯಗಳು.

## 2024ರ ಒಳಗೆ ಬಿಜೆಪಿ ಅಂತ್ಯಕ್ಕೆ ಕ್ಷಣಗಣನೆ ಆರಂಭ: ಮಮತಾ ಬ್ಯಾನರ್ಜಿ



ಕೊಲ್ಕತ್ತಾ: 2024ರ ಸಾರ್ವತ್ರಿಕ ಚುನಾವಣೆ ವೇಳೆಗೆ ಬಿಜೆಪಿ ಅಂತ್ಯಕ್ಕೆ ಕ್ಷಣಗಣನೆ ಶುರುವಾಗಲಿದೆ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ.

ಜನ ಪ್ರಜಾಪ್ರಭುತ್ವವನ್ನು ಬಯಸಿದ್ದಾರೆ, ಅವರನ್ನು ತಡೆಯಲು ಎಂದಿಗೂ ಸಾಧ್ಯವಿಲ್ಲ. ಕರ್ನಾಟಕದ ಜನತೆ ಬಿಜೆಪಿಯನ್ನು ಕೆಳಗಿಳಿಸಿದ್ದಾರೆ. ಈ ಮೂಲಕವಾಗಿ ಬಿಜೆಪಿಯ ಅಂತ್ಯ ಶುರುವಾಗಿದೆ. ಈ ನಿರ್ಧಾರ ತೆಗೆದುಕೊಂಡ ಕರ್ನಾಟದ ಮತದಾರರಿಗೆ ನಾನು ನಮಸ್ಕರಿಸುತ್ತೇನೆ. ಕರ್ನಾಟಕದಲ್ಲಿ ಕುಮಾರಸ್ವಾಮಿಯವರ ಜೆಡಿಎಸ್ ಪಕ್ಷ ಕೂಡ ಬಿಜೆಪಿ ಸೋಲಿಗೆ ಶ್ರಮಿಸಿದೆ ಎಂದಿದ್ದಾರೆ.

ಮುಂದಿನ ಸಾರ್ವತ್ರಿಕ ಚುನಾವಣೆಯಲ್ಲಿ ಕರ್ನಾಟಕದಲ್ಲಾದ ಪರಿಸ್ಥಿತಿ ಎಲ್ಲಾ ರಾಜ್ಯಗಳಲ್ಲೂ ಬಿಜೆಪಿಗೆ ಆಗಲಿದೆ. ಛತ್ತೀಸ್ಗಢ ಹಾಗೂ ಮಧ್ಯಪ್ರದೇಶದ ಚುನಾವಣೆಯಲ್ಲಿ ಬಿಜೆಪಿ ಹೀನಾಯ ಸೋಲು ಕಾಣಲಿದ್ದು. ಕಾಂಗ್ರೆಸ್ನ ಗೆಲುವು ನೈತಿಕತೆಗೆ ಸಿಕ್ಕ ಗೆಲುವಾಗಿದೆ ಎಂದಿದ್ದಾರೆ.

ಅಲ್ಲದೆ ಟ್ವಿಟ್ಟರ್ನಲ್ಲಿ ಕರ್ನಾಟಕದಲ್ಲಿ ಪ್ರಜಾಪ್ರಭುತ್ವಕ್ಕೆ ಗೆಲುವಾಗಿದೆ. ನಿರಂಕುಶ ಪ್ರಭುತ್ವ ಸೋಲು ಕಂಡಿದೆ. ಇದೊಂದು ನೈತಿಕ ಪಾಠವಾಗಿದೆ ಎಂದು ಬ್ಯಾನರ್ಜಿ ಬರೆದುಕೊಂಡಿದ್ದಾರೆ.

## ಕೇರಳ ಸ್ಟೋರಿ ವಿಚಾರ: ಎರಡು ಗುಂಪಿನ ನಡುವೆ ಘರ್ಷಣೆ




ಜಮ್ಮು: ಕೇಂದ್ರಾಡಳಿತ ಪ್ರದೇಶ ಜಮ್ಮುವಿನಲ್ಲಿ 'ದಿ ಕೇರಳ ಸ್ಟೋರಿ' ವಿಚಾರವಾಗಿ ಎರಡು ಗುಂಪುಗಳ ನಡುವೆ ನಡೆದ ಗಲಾಟೆಯಲ್ಲಿ ಐವರು ವೈದ್ಯಕೀಯ ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ.

ಘಟನೆಯನ್ನು ದುರದೃಷ್ಟಕರ ಎಂದು ಬಣ್ಣಿಸಿರುವ ಸರ್ಕಾರಿ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರು, ಶಾಂತಿ ಕೆಡಿಸಲು ಕಾರಣರಾದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ವಿದ್ಯಾರ್ಥಿಗಳಿಗೆ ಭರವಸೆ ನೀಡಿದ್ದಾರೆ.

ಈ ಬಗ್ಗೆ ತನಿಖೆ ನಡೆಯುತ್ತಿದೆ ಎಂದು ಜಮ್ಮುವಿನ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಚಂದನ್ ಕೊಹ್ಲಿ ಹೇಳಿದ್ದಾರೆ.

ಜಮ್ಮುವಿನ "ಜಿಎಂಸಿ ಹಾಸ್ಟೆಲ್ ನ ಕೆಲವು ವಿದ್ಯಾರ್ಥಿಗಳು ಮತ್ತು ಹೊರಗಿನವರ ನಡುವೆ ಮಾರಾಮಾರಿ ಘಟನೆ ನಡೆದಿದ್ದು, ತನಿಖೆ ನಡೆಯುತ್ತಿದೆ ಎಂದು ಎಸ್‌ಎಸ್‌ಪಿ ತಿಳಿಸಿದ್ದಾರೆ.

ಭಾನುವಾರ ತಡರಾತ್ರಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಅಧಿಕೃತ ವಾಟ್ಸಾಪ್ ಗುಂಪಿನಲ್ಲಿ ವಿದ್ಯಾರ್ಥಿಯೊಬ್ಬ ವಿವಾದಾತ್ಮಕ ಚಿತ್ರದ ಲಿಂಕ್ ಹಂಚಿಕೊಂಡಾಗ ಬ್ಯಾಚ್‌ಮೇಟ್ ಒಬ್ಬರು ಆಕ್ಷೇಪಿಸಿದ್ದಾರೆ.

ಅದಲ್ಲದೇ ಈ ಗುಂಪು ಶೈಕ್ಷಣಿಕ ಉದ್ದೇಶಕ್ಕಾಗಿ ಮಾತ್ರ ಎಂದು ಹೇಳಿದ್ದಾರೆ. ನಂತರ ಲಿಂಕ್ ಹಂಚಿಕೆಗೆ ಆಕ್ಷೇಪ ವ್ಯಕ್ತಪಡಿಸಿದ ವಿದ್ಯಾರ್ಥಿಗೆ ಹಾಸ್ಟೆಲ್‌ನೊಳಗೆ ಹಲ್ಲೆ ನಡೆಸಲಾಗಿದೆ.

ಹೊರಗಿನವರೊಂದಿಗೆ ಹೆಚ್ಚು ಹೆಚ್ಚು ವಿದ್ಯಾರ್ಥಿಗಳು ಸೇರಿಕೊಂಡಿದ್ದರಿಂದ ಗಲಾಟೆ ನಡೆಯಿತು ಎಂದು ಪ್ರತಿಭಟನಾನಿರತ ವಿದ್ಯಾರ್ಥಿಗಳು ಹೇಳಿದರು.

ಬಲಪಂಥೀಯ ಗುಂಪಿನ ಸದಸ್ಯರು ಹೊರಗಿನವರನ್ನು ಹಾಸ್ಟೆಲ್‌ಗೆ ಕರೆತಂದರಲ್ಲದೇ, ಧಾರ್ಮಿಕ ಘೋಷಣೆಗಳನ್ನು ಕೂಗಿ ವಿದ್ಯಾರ್ಥಿಯೊಬ್ಬನ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿದರು. ಘಟನೆಯಲ್ಲಿ ಇತರ ವಿದ್ಯಾರ್ಥಿಗಳ ಮೇಲೂ ಹಲ್ಲೆ ನಡೆಸಿದ್ದಾರೆ ಎಂದು ವಿದ್ಯಾರ್ಥಿಗಳು ಆರೋಪಿಸಿದರು.

ಪೊಲೀಸರು ಘಟನಾ ಸ್ಥಳಕ್ಕೆ ಬರುವ ಮುನ್ನವೇ ಹೊರಗಿನವರು ಪರಾ–ರಿಯಾಗಿದ್ದಾರೆ. ಘಟನೆ ನಂತರ ವಿದ್ಯಾರ್ಥಿಗಳು ಮುಖ್ಯರಸ್ತೆಯಲ್ಲಿ ಧರಣಿ ನಡೆಸಿದರು.

## ಆರ್‌ಎಸ್‌ಎಸ್ ಕಚೇರಿಗೆ ಭೇಟಿ; ಹಂಗಾಮಿ ಸಿಎಂ ಬೊಮ್ಮಾಯಿ ಮಹತ್ವದ ಚರ್ಚೆ



ಬೆಂಗಳೂರು: ಚುನಾವಣೆಯ ಫಲಿತಾಂಶದ ಬಳಿಕ ಹಂಗಾಮಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಆರ್ ಎಸ್ ಎಸ್ ನಾಯಕರೊಂದಿಗೆ ಪಕ್ಷ ಸಂಘಟನೆ ಬಗ್ಗೆ ಚರ್ಚೆ ನಡೆಸಿದರು.

ಸೋಮವಾರ ಬೆಂಗಳೂರಿನ ಚಾಮರಾಜಪೇಟೆಯಲ್ಲಿರುವ ಕೇಶವ ಕೃಪಕ್ಕೆ ಭೇಟಿ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

ಇಂದು ಆರ್ ಎಸ್ ಎಸ್ ಮುಖಂಡರೊಂದಿಗೆ ಚುನಾವಣೆ ಫಲಿತಾಂಶದ ಬಗ್ಗೆ ಚರ್ಚೆ ಮಾಡಿದ್ದೇವೆ. ಬರುವಂತಹ ದಿನಗಳಲ್ಲಿ ಪಕ್ಷವನ್ನು ಮುಂದೆ ಹೇಗೆ ಸಂಘಟಿಸಬೇಕು ಎಂಬುದರ ಬಗ್ಗೆ ಚರ್ಚೆ ಆಗಿದೆ.

ರಾಜ್ಯಾಧ್ಯಕ್ಷರು, ವರಿಷ್ಠರ ಜೊತೆಗೆ ಹಲವಾರು ಬಾರಿ ಚರ್ಚಿಸಿ ಭಾರತೀಯ ಜನತಾ ಪಕ್ಷವನ್ನು ಹೇಗೆ ಸಂಘಟನೆ ಮಾಡಬೇಕು ಎನ್ನುವ ತೀರ್ಮಾನ ಮಾಡುತ್ತೇವೆ ಎಂದರು.

ಚುನಾವಣೆಯಲ್ಲಿ ಗೆಲುವು ಸಾಧಿಸಿದ ಶಾಸಕರ ಸಭೆಯನ್ನು ಕರೆದಿಲ್ಲ. ಶಾಸಕರ ಸಭೆಯನ್ನು ರಾಜ್ಯಾಧ್ಯಕ್ಷರು ಕರೆಯಲಿದ್ದಾರೆ ಎಂದರು.

## ಭೀಕರ ರಸ್ತೆ ಅಪಘಾತ: 7 ಜನರ ಸಾವು, ನಾಲ್ವರು ಗಂಭೀರ



ಭೀಕರ ರಸ್ತೆ ಅಪಘಾತವೊಂದು ಸಂಭವಿಸಿದ್ದು, ತಿರುಮಲದಿಂದ ತಾಡಿಪತ್ರಿಗೆ ತೆರಳುತ್ತಿದ್ದ ತೂಫಾನ್ ವಾಹನವು ಕೊಂಡಾಪುರಂ ಮಂಡಲದ ಏಟೂರು ಚಿತ್ರಾವತಿ ಸೇತುವೆ ಬಳಿ ಎದುರಿಗೆ ಬರುತ್ತಿದ್ದ ಲಾರಿಗೆ ಡಿಕ್ಕಿ ಹೊಡೆದ ಘಟನೆ ಆಂಧ್ರಪ್ರದೇಶದ ಕಡಪ ಜಿಲ್ಲೆಯಲ್ಲಿ ನಡೆದಿದೆ. ಅಪಘಾತದಲ್ಲಿ ಏಳು ಮಂದಿ ಸ್ಥಳದಲ್ಲೇ ಪ್ರಾಣ ಕಳೆದುಕೊಂಡಿದ್ದಾರೆ. ಇನ್ನು ನಾಲ್ವರಿಗೆ ಗಂಭೀರ ಗಾಯಗಳಾಗಿದ್ದು, ಅನಂತಪುರಂ ಆಸ್ಪತ್ರೆಗೆ ದಾಖಲಿಸಲಾಗಿದೆ. ಇವರು ಮೃತರನ್ನು ತಾಡಿಪತ್ರಿ ನಿವಾಸಿಗಳು ಎಂದು ವರದಿಯಾಗಿದೆ.

ಸ್ಥಳಕ್ಕಾಗಮಿಸಿದ ಪೊಲೀಸರು ರಕ್ಷಣಾ ಕಾರ್ಯಾಚರಣೆ ನಡೆಸಿದ್ದಾರೆ. ಅಪಘಾತದ ವೇಳೆ ವಾಹನದಲ್ಲಿ 11 ಮಂದಿ ಪ್ರಯಾಣಿಕರಿದ್ದರು.

ತಿರುಪತಿಗೆ ಹೋಗಿ ತಮ್ಮ ಊರಿಗೆ ಹಿಂತಿರುಗುತ್ತಿದ್ದಾಗ ದುರಂತ ಸಂಭವಿಸಿದೆ.

## ಲೋಕಸಭೆಯತ್ತ ಕಾಂಗ್ರೆಸ್ ಚಿತ್ತ: ಜೋಶಿ ವಿರುದ್ಧ ಕಣಕ್ಕಿಳಿಯುತ್ತಾರಾ ಜಗದೀಶ್ ಶೆಟ್ಟರ್

ಹುಬ್ಬಳ್ಳಿ: ರಾಜ್ಯ ರಾಜಕಾರಣದಲ್ಲಿ ಸಾಕಷ್ಟು ತಂತ್ರಗಾರಿಕೆ ಮೂಲಕ ಅಧಿಕಾರದ ಚುಕ್ಕಾಣಿ ಹಿಡಿಯಲು ಗೆಲುವಿನ ಗದ್ದುಗೆ ಏರಿದ ಕಾಂಗ್ರೆಸ್ ಈಗ ಮತ್ತೊಂದು ಕಾರ್ಯತಂತ್ರಕ್ಕೆ ಮುಂದಾಗಿದೆ. ಸೋತ ಅಭ್ಯರ್ಥಿಯನ್ನು ಮತ್ತೊಂದು ಅಂಗಳಕ್ಕೆ ಅಣಿ ಮಾಡಲು ನಿರ್ಧಾರ ಮಾಡಿದೆ.

ಟಿಕೆಟ್ ತಪ್ಪಿದ ಕಾರಣ ಬಿಜೆಪಿ ತೊರೆದು ಕಾಂಗ್ರೆಸ್ ಸೇರಿ ವಿಧಾನಸಭೆ ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್, ತಮ್ಮ ಶಿಷ್ಯ ಮಹೇಶ್ ಟೆಂಗಿನಕಾಯಿ ವಿರುದ್ಧ ಸೋಲುಂಡಿದ್ದಾರೆ. ಇದು ನನ್ನ ಕೊನೆಯ ಚುನಾವಣೆ ಎಂದಿದ್ದ ಶೆಟ್ಟರ್, ನನಗಿನ್ನೂ ವಯಸ್ಸಾಗಿಲ್ಲ ಎನ್ನುವ ಮೂಲಕ ಮುಂದಿನ ರಾಜಕೀಯ ನಡೆಯ ಬಗ್ಗೆ ಕುತೂಹಲ ಮೂಡಿಸಿದ್ದಾರೆ.

ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿ ಬಹುಮತ ಗಳಿಸಿರುವ ಕಾಂಗ್ರೆಸ್ ಲೋಕಸಭಾ ಚುನಾವಣೆಯತ್ತ ಚಿತ್ತ ನೆಟ್ಟಿದೆ. ಹುಬ್ಬಳ್ಳಿ–ಧಾರವಾಡ ಸೆಂಟ್ರಲ್ ಕ್ಷೇತ್ರದಲ್ಲಿ ಸ್ಪರ್ಧಿಸಿ ಸೋಲು ಕಂಡಿರುವ ಜಗದೀಶ್ ಶೆಟ್ಟರ್ ಅವರನ್ನು ಕಾಂಗ್ರೆಸ್ ಮುಂದಿನ ಚುನಾವಣೆಗೆ ಅಣಿಗೊಳಿಸುತ್ತಿದೆ.

ಮುಂದಿನ ಲೋಕಸಭಾ ಚುನಾವಣೆಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರ ವಿರುದ್ಧ ಕಾಂಗ್ರೆಸ್ ಅಭ್ಯರ್ಥಿಯನ್ನಾಗಿ ಮಾಜಿ ಸಿಎಂ ಜಗದೀಶ್ ಶೆಟ್ಟರ್ ಅವರನ್ನು ಕಣಕ್ಕೆ ಇಳಿಸಲು ತೆರೆಮರೆಯ ಕಸರತ್ತು ನಡೆಸಿದೆ ಎನ್ನಲಾಗುತ್ತಿದೆ.



ಇನ್ನು ಮುಂದಿನ ಲೋಕಸಭಾ ಚುನಾವಣೆಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ವಿರುದ್ಧ ಜಗದೀಶ್ ಶೆಟ್ಟರ್ ಕಾಂಗ್ರೆಸ್ ಅಭ್ಯರ್ಥಿ ಆಗಬಹುದೇ? ಎಂಬ ಪ್ರಶ್ನೆಗಳು ರಾಜಕೀಯ ವಲಯದಲ್ಲಿ ಹ–ರಿದಾಡುತ್ತಿವೆ.


ಬಿಜೆಪಿಯಲ್ಲಿ ಲಿಂಗಾಯತ ನಾಯಕರನ್ನು ಮೂಲೆಗಟ್ಟುತ್ತಿದ್ದಾರೆ. ಇದಕ್ಕೆಲ್ಲ ಕಾರಣ ಬಿಜೆಪಿಯ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್, ಸಂತೋಷ ಎಂದು ಶೆಟ್ಟರ್ ನೇರ ಆರೋಪ ಮಾಡಿದ್ದರು.

ಇದನ್ನೇ ರಾಜಕೀಯ ದಾಳವಾಗಿ ಕಾಂಗ್ರೆಸ್ ತೆಗೆದುಕೊಂಡರೆ, ಮುಂದಿನ ಲೋಕಸಭಾ ಚುನಾವಣೆಯಲ್ಲಿ ಪ್ರಹ್ಲಾದ್ ಜೋಶಿಗೆ ಎದುರಾಳಿಯನ್ನಾಗಿ ಜಗದೀಶ ಶೆಟ್ಟರ್ ಅವರನ್ನು ನಿಲ್ಲಿಸುವ ಸಾಧ್ಯತೆಯನ್ನೂ ಅಲ್ಲಗಳೆಯುವಂತಿಲ್ಲ.

ಒಟ್ಟಿನಲ್ಲಿ 2019ರ ಲೋಕಸಭೆ ಚುನಾವಣೆಯಲ್ಲಿ ಪ್ರಹ್ಲಾದ್ ಜೋಶಿ ವಿರುದ್ಧ ವಿನಯ ಕುಲಕರ್ಣಿ ಅವರನ್ನು ಕಾಂಗ್ರೆಸ್ ಅಭ್ಯರ್ಥಿಯಾಗಿ ಕಣಕ್ಕಿಳಿಸಲಾಗಿತ್ತು.

ಆದರೆ, ವಿನಯಗೆ ಗೆಲುವು ಸಾಧಿಸಲಾಗಲಿಲ್ಲ. ಜೋಶಿ ಅವರನ್ನು ಗೆಲ್ಲಿಸುವಲ್ಲಿ ಜಗದೀಶ್ ಶೆಟ್ಟರ್ ಅವರ ಕೊಡುಗೆ ಇತ್ತು ಎಂದು ಹೇಳಲಾಗುತ್ತಿದೆ. ಇದೀಗ ಜಗದೀಶ ಶೆಟ್ಟರ್ ಪಕ್ಷದಲ್ಲಿದ್ದು, ಪ್ರಹ್ಲಾದ್ ಜೋಶಿ ಹಾಗೂ ಜಗದೀಶ್ ಶೆಟ್ಟರ್ ನೇರಾನೇರಾ ಎದುರಾಳಿಗಳಾದರೂ ಅಚ್ಚರಿ ಪಡಬೇಕಿಲ್ಲ.

## ಡಿ.ಕೆ.ಶಿವಕುಮಾರ ಜನ್ಮದಿನಕ್ಕೆ ಬೆಳಗಾವಿ ಶುಭಾಷಯ




ಬೆಳಗಾವಿ: ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ ಅವರ ಜನ್ಮ ದಿನದ ಹಿನ್ನೆಲೆಯಲ್ಲಿ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ನೇತೃತ್ವದಲ್ಲಿ ಬೆಳಗಾವಿ ಜಿಲ್ಲೆಯ ಶಾಸಕರು ಶುಭ ಹಾರೈಸಿದರು.

ಸೋಮವಾರ ಬೆಳಗ್ಗೆ ಶಿವಕುಮಾರ ನಿವಾಸಕ್ಕೆ ತೆರಳಿದ ಲಕ್ಷ್ಮೀ ಹೆಬ್ಬಾಳಕರ್, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ನೂತನ ಶಾಸಕರಾದ ಮಹೇಂದ್ರ ತಮ್ಮಣ್ಣವರ್, ರಾಜು ಸೇಠ್ ಅವರು ಜನ್ಮ ದಿನ ಮತ್ತು ಪ್ರಸ್ತುತ ಚುನಾವಣೆಯಲ್ಲಿ ಅಭೂತಪೂರ್ವ ಜಯ ಸಾಧಿಸಿದ್ದಕ್ಕಾಗಿ ಶಿವಕುಮಾರ ಅವರನ್ನು ಅಭಿನಂದಿಸಿ, ಶುಭ ಹಾರೈಸಿದರು.

ಇದೇ ವೇಳೆ, ಬೆಳಗಾವಿ ಜಿಲ್ಲೆಯಲ್ಲಿ ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಹೆಚ್ಚಿನ ಸಂಖ್ಯೆಯ ಶಾಸಕರನ್ನು ಆಯ್ಕೆ ಮಾಡಿದ್ದಕ್ಕಾಗಿ ಡಿ.ಕೆ.ಶಿವಕುಮಾರ ಅವರು ಬೆಳಗಾವಿ ಜಿಲ್ಲೆಯ ಜನರಿಗೆ ಹಾಗೂ ಇದಕ್ಕಾಗಿ ಹೆಚ್ಚಿನ ಶ್ರಮವಹಿಸಿದ ಎಲ್ಲ ನಾಯಕರಿಗೆ ಧನ್ಯವಾದ ತಿಳಿಸಿದರು.

## 12 ವಿದ್ಯಾರ್ಥಿನಿಯರಿಗೆ ಕಿರುಕುಳ: ಶಿಕ್ಷಕ ಅರೆಸ್ಟ್



ಲಕ್ನೋ: 12 ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಸರ್ಕಾರಿ ಶಾಲೆಯೊಂದರ ಕಂಪ್ಯೂಟರ್ ಶಿಕ್ಷಕನನ್ನು ಉತ್ತರ ಪ್ರದೇಶದ ಪೊಲೀಸರು ಸೋಮವಾರ ಬಂಧಿಸಿದ್ದಾರೆ.


ಬಂಧಿತ ಆರೋಪಿಯನ್ನು ಮೊಹಮ್ಮದ್ ಅಲಿ ಎಂದು ಗುರುತಿಸಲಾಗಿದೆ.

ಅಲ್ಲದೆ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಲೆಯ ಪ್ರಿನ್ಸಿಪಾಲ್ ಹಾಗೂ ಇನ್ನೋರ್ವ ಶಿಕ್ಷಕಿಯನ್ನು ಅಮಾನತುಗೊಳಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಶಿಕ್ಷಕನ ಕಿರುಕುಳದ ಬಗ್ಗೆ ವಿದ್ಯಾರ್ಥಿನಿಯರು ಪೋಷಕರಿಗೆ ತಿಳಿಸಿದ್ದಾರೆ. ಬಳಿಕ ಪೋಷಕರು ಶಾಲೆಯ ಮುಖ್ಯ ಶೀಕ್ಷರಿಗೆ ಈ ಬಗ್ಗೆ ದೂರು ನೀಡಿದ್ದಾರೆ. ಆದರೆ ಈ ಬಗ್ಗೆ ಮುಖ್ಯ ಶಿಕ್ಷಕರು ಯಾವುದೇ ಕ್ರಮಕೈಗೊಂಡಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಬಳಿಕ ಗ್ರಾಮದ ಮುಖಂಡರು ಹಾಗೂ ಪೋಷಕರು ಪೊಲೀಸರಿಗೆ ದೂರು ನೀಡಿದ್ದಾರೆ. ಬಳಿಕ ವಿದ್ಯಾರ್ಥಿನಿಯರನ್ನು ವೈದ್ಯಕೀಯ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ದೌರ್ಜನ್ಯಕ್ಕೊಳಗಾದ ವಿದ್ಯಾರ್ಥಿನಿಯರಲ್ಲಿ ಕೆಲವರು ದಲಿತ ವಿದ್ಯಾರ್ಥಿನಿಯರಿದ್ದು, ಆರೋಪಿಯ ವಿರುದ್ಧ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ದೌರ್ಜನ್ಯ ತಡೆ ಕಾಯ್ದೆ ಹಾಗೂ ಪೋಕ್ಸೊ ಕಾಯ್ದೆ ಅಡಿ ಪ್ರಕರಣ ದಾಖಲಾಗಿದೆ. ಪ್ರಕರಣಕ್ಕೆ ಸಂಬಂಧಿದಂತೆ ಹೆಚ್ಚಿನ ವಿಚಾರಣೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಹ್ಯಾಟ್ರಿಕ್ ಸಾಧನೆ ಮಾಡಿದ ಸಚಿವೆ ಶಶಿಕಲಾ ಜೊಲ್ಲೆ



ನಿಪ್ಪಾಣಿ: ವಿಧಾನಸಭೆ ಚುನಾವಣೆಯಲ್ಲಿ ಹ್ಯಾಟ್ರಿಕ್ ಸಾಧನೆ ಮಾಡಿದ ಹಿನ್ನೆಲೆಯಲ್ಲಿ ಸಚಿವೆ ಶಶಿಕಲಾ ಜೊಲ್ಲೆ ಮತ್ತು ಸಂಸದ ಅಣ್ಣಾಸಾಹೇಬ ಜೊಲ್ಲೆ ನಗರದ ಮಹಾದೇವಗಲ್ಲಿಯ ಮಹಾದೇವ ಮಂದಿರಕ್ಕೆ ಭೇಟಿ ನೀಡಿ ದರ್ಶನ ಪಡೆದರು.

ನಂತರ ಮಹಾತ್ಮ ಬಸವೇಶ್ವರ, ಛತ್ರಪತಿ ಶಿವಾಜಿ ಮಹಾರಾಜ, ಛತ್ರಪತಿ ಸಂಭಾಜಿ ಮಹಾರಾಜ, ರಾಣಿ ಕಿತ್ತೂರ ಚನ್ನಮ್ಮ, ಡಾ. ಬಾಬಾಸಾಹೇಬ ಅಂಬೇಡ್ಕರ್, ಮಹಾತ್ಮ ಗಾಂಧಿಯವರ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಗೆಲುವಿಗೆ ಕಾರಣಕರ್ತರಾದ ಕ್ಷೇತ್ರದ ಜನತೆಗೆ ಕೃತಜ್ಞತೆಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಸ್ಥಳೀಯ ಹಾಲಸಿದ್ಧನಾಥ ಸಹಕಾರಿ ಸಕ್ಕರೆ ಕಾರ್ಖಾನೆಯ ಚೇರ್ಮನ್ ಸಹಕಾರ ರತ್ನ ಚಂದ್ರಕಾಂತ ಕೋರಿವಾಲೆ, ಬಸವಜ್ಯೋತಿ ಯುಥ್ ಫೌಂಡೇಷನ್ ಅಧ್ಯಕ್ಷ ಬಸವಪ್ರಸಾದ ಜೊಲ್ಲೆ, ನಗರಸಭೆ ಅಧ್ಯಕ್ಷ ಜಯವಂತ ಭಾಟಲೆ, ಉಪಾಧ್ಯಕ್ಷೆ ನೀತಾ ಬಾಗಡೆ, ರಾಜೇಂದ್ರ ಗುಂದೇಶಾ, ಸದಸ್ಯರು, ಅಭಯ ಮಾನವಿ, ಪ್ರಣವ ಮಾನವಿ, ಮತ್ತಿತರರು ಉಪಸ್ಥಿತರಿದ್ದರು.

# 135 ಶಾಸಕರ ಸಂಖ್ಯೆ ನನ್ನ ಸಂಖ್ಯೆ: ಡಿ.ಕೆ. ಶಿವಕುಮಾರ್

ಬೆಂಗಳೂರು: 'ನನ್ನ ವೈಯಕ್ತಿಕ ಬೆಂಬಲಕ್ಕೆ ಹೆಚ್ಚಿನ ಶಾಸಕರ ಸಂಖ್ಯಾಬಲ ಇಲ್ಲದಿರಬಹುದು. ಆದರೆ, ಪಕ್ಷ ಗೆದ್ದಿರುವ 135 ಶಾಸಕರ ಸಂಖ್ಯೆ ನನ್ನ ಸಂಖ್ಯೆ' ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದರು.

ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕನ ಆಯ್ಕೆಗೆ ಸಂಬಂಧಿಸಿದಂತೆ ಚರ್ಚಿಸಲು ಪಕ್ಷದ ವರಿಷ್ಠರ ಆಹ್ವಾನದ ಮೇರೆಗೆ ದೆಹಲಿಗೆ ಹೊರಡುವ ಮೊದಲು ಕುಟುಂಬ ಸದಸ್ಯರ ಜತೆ ಶಿವಕುಮಾರ್ ತುಮಕೂರು ಜಿಲ್ಲೆ ತಿಪಟೂರಿನ ನೊಣವಿನಕೆರೆ ಸೋಮೆಕಟ್ಟೆಯ ಕಾಡುಸಿದ್ದೇಶ್ವರ ಮಠಕ್ಕೆ ಭೇಟಿ ನೀಡಿ, ತಮ್ಮ ಗುರು ಅಜ್ಜಯ್ಯನ ಆಶೀರ್ವಾದ ಪಡೆದರು.

ಅದಕ್ಕೂ ಮೊದಲು ಸುದ್ದಿಗಾರರ ಜೊತೆ ಮಾತನಾಡಿದ ಅವರು, 'ಪಕ್ಷದ ಅಧ್ಯಕ್ಷನಾಗಿ ಆಯ್ಕೆ ನನ್ನನ್ನು ಮಾಡಿದಾಗ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರಿಗೆ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತರುವ ಭರವಸೆ ನೀಡಿದ್ದೆ. ಕೊಟ್ಟ ಮಾತನ್ನು ಈಡೇರಿಸಿದ್ದೇನೆ' ಎಂದರು.

ಇಂದು ನನ್ನ ಜನ್ಮದಿನ. ನನ್ನ ಖಾಸಗಿ ಕಾರ್ಯಕ್ರಮದಲ್ಲಿ ನನ್ನ ಗುರುಗಳನ್ನು ಭೇಟಿ ಮಾಡಲಿದ್ದೇನೆ. ನಂತರ ದೆಹಲಿಗೆ ಪ್ರಯಾಣ ಬೆಳೆಸಬೇಕಿದೆ' ಎಂದರು.

'ಭಾನುವಾರ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ಪಕ್ಷದ 135 ಶಾಸಕರೂ ತಮ್ಮ



ಅಭಿಪ್ರಾಯವನ್ನು ತಿಳಿಸಿದ್ದಾರೆ. ಮುಖ್ಯಮಂತ್ರಿ ಆಯ್ಕೆ ತೀರ್ಮಾನವನ್ನು ಪಕ್ಷದ ಅಧ್ಯಕ್ಷರ ತೀರ್ಮಾನಕ್ಕೆ ಬಿಡಲು ಎಲ್ಲ ಶಾಸಕರು ಸರ್ವಾನುಮತದ ಒಪ್ಪಿಗೆ ನೀಡಿದ್ದಾರೆ. ನನಗೆ ಯಾರ ನಂಬರ್ ಬಗ್ಗೆ ಮಾತನಾಡುವ ಶಕ್ತಿ ಇಲ್ಲ. ಡಬಲ್ ಇಂಜಿನ್ ಸರ್ಕಾರ ಹಾಗೂ ಭ್ರಷ್ಟಾಚಾರ ವಿರುದ್ಧ ನನ್ನ ಅಧ್ಯಕ್ಷತೆಯಲ್ಲಿ ಪಕ್ಷದ 135 ಅಭ್ಯರ್ಥಿಗಳು ಗೆಲವು ಸಾಧಿಸಿದ್ದಾರೆ' ಎಂದರು.

'ಕೆಲವು ಕಡೆಗಳಲ್ಲಿ ಸ್ಥಳೀಯವಾಗಿ ಉತ್ತಮವಾಗಿ ಸಂಘಟನೆ ಮಾಡಿದ್ದರೆ ನಮ್ಮ ಸಂಖ್ಯೆ ಇನ್ನೂ ಸ್ವಲ್ಪ ಹೆಚ್ಚಾಗುತ್ತಿತ್ತು. ಆದರೂ ಫಲಿತಾಂಶ ತೃಪ್ತಿ ತಂದಿದೆ. ನಮ್ಮ ವರಿಷ್ಠರು ನನ್ನನ್ನು ಹಾಗೂ ಸಿದ್ದರಾಮಯ್ಯ ಅವರನ್ನು ದೆಹಲಿಗೆ ಕರೆದಿದ್ದಾರೆ. ನಾನು ಹೋಗುತ್ತಿದ್ದೇನೆ. ನಾನು ಹೋಗುವುದು ಸ್ವಲ್ಪ ತಡವಾಗಲಿದೆ' ಎಂದೂ ಹೇಳಿದರು.

ಬೇರೆಯವರ ಹೇಳಿಕೆಗಳ ಬಗ್ಗೆ ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಿವಕುಮಾರ್, 'ನಾನು ಬೇರೆಯವರ ಹೇಳಿಕೆಗಳ ಬಗ್ಗೆ ಪ್ರತಿಕ್ರಿಯೆ ನೀಡುವುದಿಲ್ಲ. ನಾನು ಏಕಾಂಗಿ. ನಾನು ಧೈರ್ಯವಾಗಿ ಪಕ್ಷವನ್ನು ಮುನ್ನಡೆಸಿದ್ದು, ನನ್ನ ಸಾಮರ್ಥ್ಯವನ್ನು ಸಾಬೀತುಪಡಿಸಿದ್ದೇನೆ. ಕಳೆದ ಐದು ವರ್ಷಗಳಲ್ಲಿ ಏನೆಲ್ಲಾ ಆಗಿದೆ ಎಂದು ನಾನು ಬಹಿರಂಗ ಪಡಿಸುವುದಿಲ್ಲ.

ಅದರ ಬಗ್ಗೆ ಭವಿಷ್ಯದಲ್ಲಿ ಮಾತನಾಡುತ್ತೇನೆ. ನಾವು ಮೈತ್ರಿ ಸರ್ಕಾರ ಕಳೆದುಕೊಂಡಾಗ ಶಾಸಕರು ಪಕ್ಷ ಬಿಟ್ಟು ಹೋದಾಗ ನಾವು ಧೃತಿಗೆಡಲಿಲ್ಲ. ಧೈರ್ಯವಾಗಿ ಜವಾಬ್ದಾರಿ ಹೊತ್ತು, ಕೆಲಸ ಮಾಡಿದ್ದೇನೆ. ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಅವರು ನನಗೆ ಧೈರ್ಯ ತುಂಬಿದ್ದು, ಈ ವಿಚಾರವನ್ನು ಅವರಿಗೆ ಬಿಡುತ್ತೇನೆ' ಎಂದೂ ಹೇಳಿದರು.

# ಲಕ್ಷ್ಮಣ ಸವದಿ, ಆರ್ ಬಿ. ತಿಮ್ಮಾಪುರಗೆ ಡಿಸಿಎಂ ಸ್ಥಾನ ನೀಡುವಂತೆ ಒತ್ತಾಯ



ಅಥಣಿ : ಉತ್ತರ ಕರ್ನಾಟಕದ ಲಿಂಗಾಯತ ಸಮುದಾಯದ ಪ್ರಭಾವಿ ನಾಯಕ ಹಾಗೂ ಅಥಣಿ ಮತಕ್ಷೇತ್ರದಿಂದ ನಾಲ್ಕನೇ ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಲಕ್ಷ್ಮಣ ಸವದಿಯವರಿಗೆ ಮತ್ತು ಬಾಗಲಕೋಟ ಜಿಲ್ಲೆಯ ಮುಧೋಳ ಮತಕ್ಷೇತ್ರದಿಂದ ಮತ್ತೆ ಶಾಸಕರಾಗಿ ಆಯ್ಕೆಯಾಗಿರುವ ಮಾದಿಗ ಸಮುದಾಯದ ಹಿರಿಯ ನಾಯಕರು ಹಾಗೂ ಮಾಜಿ ಸಚಿವರಾದ ಆರ್ ಬಿ ತಿಮ್ಮಪೂರ ಅವರಿಗೆ ಸಾಮಾಜಿಕ ನ್ಯಾಯದಡಿಯಲ್ಲಿ ಡಿಸಿಎಂ ಸ್ಥಾನ ನೀಡಬೇಕೆಂದು ಅಥಣಿ ತಾಲೂಕ ಮಾದಿಗ ಮೀಸಲಾತಿ ಹೋರಾಟ ಸಮಿತಿಯ ಅಧ್ಯಕ್ಷ ಹಣಮಂತ ಅರ್ಧಾವೂರ ಕಾಂಗ್ರೆಸ್ ಪಕ್ಷದ ಹೈಕಮಾಂಡನ್ನು ಒತ್ತಾಯಿಸಿದರು.

ಅವರು ಅಥಣಿ ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಅಥಣಿ ಮತಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿ ಅತ್ಯಧಿಕ ಮತಗಳ ಅಂತರದಿಂದ ಆಯ್ಕೆಯಾಗಿರುವ ಲಕ್ಷ್ಮಣ ಸವದಿ ಅವರು ಉತ್ತರ ಕರ್ನಾಟಕದ ಪ್ರಭಾವಿ ನಾಯಕರಲ್ಲಿ ಒಬ್ಬರಾಗಿದ್ದಾರೆ. ಸಚಿವರಾಗಿ ರಾಜ್ಯದ ಉಪಮುಖ್ಯ ಮಂತ್ರಿಗಳಾಗಿ ಕಾರ್ಯ ನಿರ್ವಹಿಸಿದ ಅನುಭವವಿದೆ. ಕಾಂಗ್ರೆಸ್ ಪಕ್ಷವನ್ನು ಸೇರುವ ಮೂಲಕ ಜಿಲ್ಲೆಯಲ್ಲಿ ಹೆಚ್ಚಿನ ಸ್ಥಾನಗಳನ್ನು ಗೆಲ್ಲಿಸುವಲ್ಲಿ ಅವರ ಪಾತ್ರ ಕೂಡ ಮಹತ್ವ ಮಹತ್ತರವಾಗಿದೆ.

ಅದೇ ರೀತಿ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ, ಪಕ್ಷ ಸಂಘಟನೆ ಜೊತೆಗೆ ಜನಸೇವೆಗಳನ್ನು ಮಾಡುತ್ತಾ ಈ ಬಾರಿ ವಿಧಾನಸಭಾ ಚುನಾವಣೆಯಲ್ಲಿ ಮುಧೋಳ ಮತಕ್ಷೇತ್ರದಿಂದ ಸ್ಪರ್ಧಿಸಿ ಗೋವಿಂದ ಕಾರಜೋಳ ಅವರನ್ನು ಸೋಲಿಸುವ ಮೂಲಕ ವಿಜಯಪತಾಕೆ ಹಾರಿಸಿದ್ದಾರೆ.

ಹಿಂದಿನ ಕಾಂಗ್ರೆಸ್ ಸರ್ಕಾರದಲ್ಲಿ ಮತ್ತು ಸಮ್ಮಿಶ್ರ ಸರ್ಕಾರದಲ್ಲಿ ಸಚಿವರಾಗಿ ಕಾರ್ಯನಿರ್ವಹಿಸಿದ ಮಾದಿಗ ಎಡಗೈ ಸಮುದಾಯದ ಪ್ರಭಾವಿ ನಾಯಕರಾಗಿರುವ ಆರ್ ಬಿ ತಿಮ್ಮಾಪೂರ್ ಅವರಿಗೆ ಸಾಮಾಜಿಕ ನ್ಯಾಯದಡಿ ಡಿಸಿಎಂ ಸ್ಥಾನ ನೀಡಬೇಕೆಂದು ಕಾಂಗ್ರೆಸ್ ಪಕ್ಷದ ಹೈಕಮಾಂಡಕ್ಕೆ ಒತ್ತಾಯಿಸಿದರು.


ಪುರಸಭೆಯ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ರಾವಸಾಬ ಐಹೊಳೆ, ಕರ್ನಾಟಕ ಪ್ರದೇಶ ಮಾದಿಗ ಸಂಘದ ಜಿಲ್ಲಾ ಅಧ್ಯಕ್ಷ ರಾಜೇಂದ್ರ ರಾಜಂಗಳೆ ಮಾತನಾಡಿ ಕ್ಷೇತ್ರದಿಂದ ಆಯ್ಕೆಯಾದ ಲಕ್ಷ್ಮಣ ಸವದಿ ಹಾಗೂ ಮುಧೋಳ ಕ್ಷೇತ್ರದಿಂದ ಆಯ್ಕೆಯಾದ ಆರ್ ಬಿ ತಿಮ್ಮಾಪುರ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಕಾಂಗ್ರೆಸ್ ಪಕ್ಷದ ವರಿಷ್ಠರನ್ನು ಅಗ್ರಹಿಸಿದರು.

ಈ ಸಂದರ್ಭದಲ್ಲಿ ಮಾದಿಗ ಸಮುದಾಯದ ಮುಖಂಡರಾದ ಸಂಗಪ್ಪ ಮಾಯನಟ್ಟಿ, ಪ್ರಕಾಶ ಹೆಗ್ಗಣ್ಣವರ, ಅನಿಲ ತಳವಾರ, ಕಾಸಪ್ಪ ಜಮಖಂಡಿ, ವಿಶ್ವನಾಥ ಗಡದೆ, ವೈಭವ ಐಹೊಳೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ನನ್ನನ್ನು ಬಿಜೆಪಿಯಿಂದ ಹೊರ ಕಳಿಸಿದ ಸಿ.ಟಿ. ರವಿಯನ್ನ ಕ್ಷೇತ್ರದಿಂದಲೇ ಜನ ಹೊರಕಳಿಸಿದ್ದಾರೆ: ಎಂಪಿ ಕುಮಾರಸ್ವಾಮಿ

ಚಿಕ್ಕಮಗಳೂರು: ಬಿಜೆಪಿಯ ಭದ್ರಕೋಟೆ, ಹಿಂದುತ್ವದ ಕಿಚ್ಚಿನ ಕಾಫಿನಾಡು ಚಿಕ್ಕಮಗಳೂರು ಜಿಲ್ಲೆಯಲ್ಲಿ ಬಿಜೆಪಿಗೆ ಹೀನಾಯ ಸೋಲಾಗಿದೆ. ಹಿಂದುತ್ವದ ಫೈಯರ್ ಬ್ರಾಂಡ್, ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದಶಿ ಸಿ.ಟಿ. ರವಿ ಸೇರಿದಂತೆ ಹಾಲಿ ನಾಲ್ಕು ಶಾಸಕರನ್ನ ಸೋಲಿಸುವ ಮೂಲಕ ಬಿಜೆಪಿ ಕೋಟೆಯನ್ನ ಕಾಂಗ್ರೆಸ್ ಕಬ್ಜ ಮಾಡಿದೆ. ಮತ್ತೊಂದೆಡೆ ಸಿ.ಟಿ.ರವಿ ಸೋಲಿನ ಬಗ್ಗೆ ಮೂಡಿಗೆರೆ ಮಾಜಿ ಶಾಸಕ ಎಂ.ಪಿ.ಕುಮಾರಸ್ವಾ ವ್ಯಂಗ್ಯವಾಡಿದ್ದಾರೆ.

ಮೂಡಿಗೆರೆ ಕ್ಷೇತ್ರದಲ್ಲಿ ಬಿಜೆಪಿಗೆ ಜೀವ ತುಂಬಿದ್ದೇ ನಾನು. ಸಿ.ಟಿ.ರವಿ ನನ್ನನ್ನು ಬಿಜೆಪಿಯಿಂದ



ಹೊರ ಕಳಿಸಿದರು. ಆದರೆ ಸಿ.ಟಿ.ರವಿಯನ್ನು ಕ್ಷೇತ್ರದಿಂದಲೇ ಜನ ಹೊರಕಳಿಸಿದ್ದಾರೆ.

ಚಿಕ್ಕಮಗಳೂರು ಇನ್ಮುಂದೆ ವೀರಶೈವ–ಲಿಂಗಾಯುತರ ಕ್ಷೇತ್ರ. ಸಿ.ಟಿ.ರವಿ ದತ್ತಮಾಲೆ, ಅಹಿತಕರ ಘಟನೆ ಮುಂದಿಟ್ಟು ಪ್ರಚಾರ ನಡೆಸಿದ್ರು. ಇನ್ಮುಂದೆ ಸಿ.ಟಿ.ರವಿಯ ಈ ವಿಚಾರಗಳು ಕೆಲಸ ಮಾಡುವುದಿಲ್ಲ.


ಮಾಜಿ ಸಿಎಂ ಯಡಿಯೂರಪ್ಪ ಮೊಬೈಲ್ ಸ್ವಿಚ್ ಆಫ್ ಮಾಡಲಿಲ್ಲ. ಫೋನ್ ಸ್ವಿಚ್ ಆಫ್ ಮಾಡಿದ್ರೆ ಬಿಜೆಪಿಗೆ 50 ಸೀಟ್ ಅಷ್ಟೇ ಬರುತ್ತಿತ್ತು ಎಂದು ವಾಗ್ದಾಳಿ ನಡೆಸಿದ್ದಾರೆ.

ನನ್ನನ್ನು ಬಿಟ್ಟಿದ್ದಕ್ಕೆ 5 ಕ್ಷೇತ್ರ ಹೋಗುತ್ತೆ ಅಂತ ಜನರೇ ಹೇಳಿದ್ದರು.

ಜೆಡಿಎಸ್ನಲ್ಲಿ ಬೂತ್ ಕಮಿಟಿ, ಪಕ್ಷ ಸಂಘಟನೆ ಇರಲಿಲ್ಲ. ಹಾಗಾಗಿ ನನಗೆ ಸೋಲುಂಟಾಗಿದೆ.

ಎಲ್ಲವನ್ನೂ ಸರಿಮಾಡಿಕೊಂಡು ಜೆಡಿಎಸ್ ಪಕ್ಷ ಸಂಘಟನೆ ಮಾಡುವೆ. ಮುಂಬರುವ ಜಿ.ಪಂ., ತಾ.ಪಂ. ಚುನಾವಣೆಯಲ್ಲಿ ಪಕ್ಷ ಗೆಲ್ಲಿಸಲು ಶ್ರಮ ವಹಿಸುವೆ ಎಂದು ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆಯಲ್ಲಿ ಎಂ.ಪಿ. ಕುಮಾರಸ್ವಾಮಿ ತಿಳಿಸಿದರು.

# ಬಂಗಾರಪೇಟೆ ಬಳಿ ಹಳಿತಪ್ಪಿದ ಚೆನ್ನೈ–ಬೆಂಗಳೂರು ಡಬಲ್ ಡೆಕ್ಕರ್ ಎಕ್ಸ್‌ಪ್ರೆಸ್ ರೈಲು




ಬೆಂಗಳೂರು: ಚೆನ್ನೈನಿಂದ ಬೆಂಗಳೂರಿಗೆ ಬರುತ್ತಿದ್ದ ಚೆನ್ನೈ–ಬೆಂಗಳೂರು ಎಸಿ ಡಬಲ್ ಡೆಕ್ಕರ್ ಎಕ್ಸ್‌ಪ್ರೆಸ್ ರೈಲು ಸೋಮವಾರ ಬಂಗಾರಪೇಟೆಯಿಂದ 20 ಕಿಮೀ ದೂರದಲ್ಲಿರುವ ಬಿಸನಟ್ಟಂ ನಿಲ್ದಾಣದ ಬಳಿ ಹಳಿತಪ್ಪಿದೆ.

ಸೋಮವಾರ ಬೆಳಗ್ಗೆ 11:30 ರ ಸುಮಾರಿಗೆ ಡಾ ಎಂಜಿಆರ್ ಚೆನ್ನೈ ಸೆಂಟ್ರಲ್ – ಕೆಎಸ್‌ಆರ್ ಬೆಂಗಳೂರು ಡಬಲ್ ಡೆಕ್ಕರ್ ಎಕ್ಸ್‌ಪ್ರೆಸ್(ರೈಲು ಸಂಖ್ಯೆ 22625)ರೈಲಿನ ಕೊನೆಯ ಕೋಚ್‌ವೊಂದರ ಎರಡು ಚಕ್ರಗಳು ಹಳಿ ತಪ್ಪಿದ್ದವು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ರೈಲಿನ ಎಲ್ಲಾ ಪ್ರಯಾಣಿಕರು ಸುರಕ್ಷಿತವಾಗಿದ್ದಾರೆ. ಹಳಿತಪ್ಪಿದ ಕೋಚ್ ಸಿ 1 ರ ಪ್ರಯಾಣಿಕರನ್ನು ಮತ್ತೊಂದು ಬೋಗಿಗಳಿಗೆ ಸ್ಥಳಾಂತರಿಸಿದ ನಂತರ ರೈಲು ಬಂಗಾರಪೇಟೆಗೆ ತೆರಳಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬೆಂಗಳೂರು ವಿಭಾಗದ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ದೌಡಾಯಿಸಿದ್ದು, ರೈಲು ಸೇವೆಯನ್ನು ಪುನಃಸ್ಥಾಪಿಸುವ ಪ್ರಯತ್ನಗಳು ನಡೆಯುತ್ತಿವೆ. ಅಪಘಾತ ಪರಿಹಾರ ರೈಲು(ಎಆರ್ಟಿ) ಕೂಡ ಸ್ಥಳಕ್ಕೆ ತಲುಪಿದೆ.

ಪ್ರಯಾಣಿಕರಿಗೆ/ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕೆಎಸ್‌ಆರ್ ಬೆಂಗಳೂರು ಮತ್ತು ಬಂಗಾರಪೇಟೆ ನಿಲ್ದಾಣಗಳಲ್ಲಿ ಸಹಾಯ ಕೇಂದ್ರಗಳನ್ನು ತೆರೆಯಲಾಗಿದೆ.

# ಶ್ರೀ ಚನ್ನಬಸವೇಶ್ವರ ಜಾತ್ರಾ ಮಹೋತ್ಸವ



ಬೈಲಹೊಂಗಲ: ತಾಲೂಕಿನ ತಿಗಡಿ ಗ್ರಾಮದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಅದ್ದೂರಿಯಾಗಿ ನಡೆದ ಶ್ರೀ ಚನ್ನಬಸವೇಶ್ವರ ಜಾತ್ರಾ ಮಹೋತ್ಸವ ಗ್ರಾಮದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಭಕ್ತಾದಿಗಳು ಕೂಡಿಕೊಂಡು ಶ್ರೀ ಚನ್ನಬಸವೇಶ್ವರ ರಥವನ್ನು ಎಳೆಯ ಮೂಲಕ ಜಾತ್ರೆಗೆ ಮತ್ತಷ್ಟು ಮೆರಗು ತಂದು ಕೊಟ್ಟರು ಶ್ರೀ ಚನ್ನಬಸವೇಶ್ವರ ರಥವನ್ನು ಸುಮಾರು ಅರ್ಧ ಕಿಲೋ ಮೀಟರ್ ಅಷ್ಟು ಊರಿನ ಪ್ರಮುಖ ರಸ್ತೆಯಲ್ಲಿ ರಥವನ್ನು ಎಳೆಯುವ ಮೂಲಕ ಯಾವದೇ ಬೇದಭಾವ ಇಲ್ಲದೆ ಅದ್ದೂರಿಯಾಗಿ ನಡೆದ ರಥೋತ್ಸವ ಎರಡು ದಿನಗಳ ಕಾಲ ನಡೆಯುವಂತೆ ಈ ಜಾತ್ರೆಗೆ ಸುತ್ತಮುತ್ತಲಿನ ಗ್ರಾಮಸ್ಥರು ಜನರು ಕೂಡ ಜಾತ್ರೆಗೆ ಆಗಮಿಸುತ್ತಾರೆ ಹಾಗೂ ಬೇರೆ ಊರಿನಿಂದ ಸಾವಿರಾರು ಭಕ್ತಾದಿಗಳು ಕೂಡ ಗ್ರಾಮಕ್ಕೆ ಆಗಮಿಸುತ್ತಾರೆ

ಇದೇ ಸಂದರ್ಭದಲ್ಲಿ ಶ್ರೀಮತಿ ರೋಹಿಣಿ ಬಾಬಾ ಸಾಹೇಬ್ ಪಾಟೀಲ್ ಇವರು ಕೂಡ ಗ್ರಾಮಕ್ಕೆ ಆಗಮಿಸಿ ಶ್ರೀ ಚನ್ನಬಸವೇಶ್ವರ ದೇವರ ಆಶೀರ್ವಾದವನ್ನೂ ಪಡೆದುಕೊಂಡರು.

# ಮುಸ್ಲಿಂ ಸಮುದಾಯಕ್ಕೆ ಉಪ ಮುಖ್ಯಮಂತ್ರಿ ಸ್ಥಾನ ಕೊಡಿ

ವಿಜಯಪುರ: ನಗರದ ಹೋಟೆಲ್ ಒಂದರಲ್ಲಿ ಜಿಲ್ಲಾ ಅಲ್ಪಸಂಖ್ಯಾತ ಗ್ರಾಮ ಪಂಚಾಯತ ಸದಸ್ಯರ ಒಕ್ಕೂಟ ವತಿಯಿಂದ ಪತ್ರಿಕಾಗೋಷ್ಠಿಯಲ್ಲಿ ವಿಧಾನಸಭಾ ಚುನಾವಣೆ 2023ರಲ್ಲಿ 136 ಶಾಸಕರನ್ನು ಮುಸ್ಲಿಂ ಸಮುದಾಯದ ಮತಗಳು ಬಹು ಮುಖ್ಯ ಪಾತ್ರ ನಮ್ಮ ಸಮಾಜದ್ದು ಇರುತ್ತದೆ. ಕರ್ನಾಟಕ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ವ್ಯಕ್ತಿ ಪ್ರತಿಭಾರಿ 7ರಿಂದಾ 15 ಮುಸ್ಲಿಂ ಶಾಸಕರನ್ನು ಆಯ್ಕೆ ಮಾಡಿಕೊಟ್ಟ ಇತಿಹಾಸ ಇದೆ.

ಈ ಭಾರಿ ಕರ್ನಾಟಕ ರಾಜ್ಯದ 136 ಶಾಸಕರನ್ನು ಆಯ್ಕೆ ಮಾಡುವಲ್ಲಿ ನಿರ್ಣಾಯಾಕ ಪಾತ್ರವನ್ನು ನಮ್ಮ ಸಮುದಾಯ ವಹಿಸಿದೆ. ಮುಸ್ಲಿಂ ಸಮುದಾಯಕ್ಕೆ



ಸೇರಿದ 9 ಶಾಸಕರು ವಿಧಾನ ಸಭೆಗೆ ಪ್ರವೇಶ ಪಡೆದಿದ್ದಾರೆ, ಈ ಭಾರಿ ನಮ್ಮ ಸಮುದಾಯಕ್ಕೆ ಉಪಮುಖ್ಯಮಂತ್ರಿ ಸ್ಥಾನ ನೀಡಿ ಗೌರವಿಸಬೇಕೆಂದು ರಾಷ್ಟ್ರೀಯ ಹಾಗೂ ರಾಜ್ಯದ ನಾಯಕರಲ್ಲಿ ವಿನಂತಿಸುತ್ತೇವೆ ಕರ್ನಾಟಕ ರಚನೆ ಆದಾಗಿನಿಂದ ಇಲ್ಲಿಯವರೆಗೆ ಮುಸ್ಲಿಂಸರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಿರುವುದಿಲ್ಲ.

ಆದಕಾರಣ ಕರ್ನಾಟಕದಲ್ಲಿ ಮುಸ್ಲಿಂ ಸಮುದಾಯಕ್ಕೆ ನ್ಯಾಯ ಒದಗಿಸಬೇಕು ಏಕೆಂದರೆ ನಮ್ಮ ಸಮಾಜದ ಆರ್ಥಿಕವಾಗಿ ಶೈಕ್ಷಣಿಕವಾಗಿ ಸಾಮಾಜಿಕವಾಗಿ ಹಿಂದುಳಿದಿರುತ್ತದೆ. ಹಾಗೂ ವಿಜಯಪುರ ನಗರದ ಕಾಂಗ್ರೆಸ್ ಅಭ್ಯರ್ಥಿ ಅಬ್ದುಲ್ ಹಮೀದ್ ಮುಶ್ರೀಫ್ ಅಧಿಕ ಮತಗಳನ್ನು ಪಡೆದು ಅಲ್ಪ ಅಂತರದಿಂದ ಪರಭಾವಗೊಂಡ ಜಿಲ್ಲೆಯಲ್ಲಿ ಒಬ್ಬ ಮುಸ್ಲಿಂ ನಾಯಕನಾಗಿ ಹೊರ ಹೊಮ್ಮಿದ್ದಾರೆ.

ಆದರಿಂದ ಮಾನ್ಯರಿಗೆ ಉನ್ನತ ಸ್ಥಾನ ಮಾನ ನೀಡಿ ಗೌರವಿಸಬೇಕು ಎಂದು ಜಿಲ್ಲಾ ಅಧ್ಯಕ್ಷ ಗ್ರಾಮ ಪಂಚಾಯಿತಿ ಸದಸ್ಯರು ಅಲ್ಪಸಂಖ್ಯಾತರ 'ಒಕ್ಕೂಟ ವಿಜಯಪುರ ಮಾತನಾಡಿದರು.

ಮುಂಬರುವ ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯಿತಿ ಚುನಾವಣೆಯಲ್ಲಿ ಅಲ್ಪಸಂಖ್ಯಾತರಿಗೆ ಒಂದು ಮತಕ್ಷೇತ್ರದಲ್ಲಿ ಇಬ್ಬರಿಗೂ ಮುಸ್ಲಿಮ್ಸ್ ಅಭಿವೃದ್ಧಿಗಳಿಗೆ ಜಿಲ್ಲಾ ಪಂಚಾಯತಿಯಲ್ಲಿ ಹಾಗೂ ಪ್ರತಿ ತಾಲೂಕು ಪಂಚಾಯಿತಿಗಳಿಗೆ ಐದು ಮುಸ್ಲಿಂ ಅಭ್ಯರ್ಥಿಗಳನ್ನು ನಿಲ್ಲಿಸಿ ಗೆಲ್ಲಿಸಿ ತರುವ ಪಕ್ಷದ ಪ್ರತಿಯೊಂದು ಶಾಸಕರ ಹಾಗೂ ಕಾಂಗ್ರೆಸ್ ಧುರುಣರ ಕರ್ತವ್ಯವಾಗಿರುತ್ತದೆ. ಈ ಬಾರಿ ಅಧಿಕೃತ ಮುಸ್ಲಿಂ ಮತಗಳು ಕಾಂಗ್ರೆಸ್ ಪಾಲಾಗಿದ್ದು ರಾಜ್ಯಕ್ಕೆ ದಿಕ್ಸೂಚಿಯಾಗಿರುತ್ತದೆ ಮುಂಬರುವ ಚುನಾವಣೆಯಲ್ಲಿ ಅಹಿಂದ ಮತಗಳನ್ನು ಒಂದುಗೂಡಿಸಿ ಪಕ್ಷ ನೀಡಿದ ಜವಾಬ್ದಾರಿಯುತ ಕಾರ್ಯವನ್ನು ನಮ್ಮ ಸಮಾಜದ ನಿರ್ಮಿಸುತ್ತೇವೆ ಎಂದು ಜಿಲ್ಲಾ ಕಾರ್ಯದರ್ಶಿ ಚಾಂದಪಾಶಾ ಹವಾಲದಾರ ಕಲಕೇರಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಈ ಸಂದರ್ಭದಲ್ಲಿ ಚಾಂದಪಾಶಾ ಹವಾಲದಾರ ಕಲಕೇರಿ ಕಾರ್ಯದರ್ಶಿ, ಪೈಗಂಬರ ಮುಲ್ಲಾ, ಮಾಶ್ಯಕಸಾಬ ಕಮತಗಿ , ರಾಜಅಹ್ಮದ. ಶಿರಸಗಿ, ಶಫಿಕ ಮುಜಾವರ, ಇಮ್ರಾನ ಜಾಗೀರದಾರ, ಅಬ್ಬಸಅಲಿ ಮುಲ್ಲಾ, ಶಮಶೇರಅಲಿ ಮುಲ್ಲಾ, ಮಹಿಬೂಬ, ಎ ಎಮ್ ಪಾಟೀಲ ಇದ್ದರು.

# ಕಲ್ಲಿನಿಂದ ಜಜ್ಜಿ ಮಹಿಳೆಯ ಹತ್ಯೆ

ಮಂಡ್ಯ: ಮಹಿಳೆಯ ತಲೆಯನ್ನು ಕಲ್ಲಿನಿಂದ ಜಜ್ಜಿ ಬರ್ಬರ ಹತ್ಯೆ ಮಾಡಿರುವ ಘಟನೆ ಮಂಡ್ಯದ ಶ್ರೀರಂಗಪಟ್ಟಣ ತಾಲೂಕಿನ ಗಂಜಾಮ್ ಗ್ರಾಮದಲ್ಲಿ ನಡೆದಿದೆ.

ತಮಿಳುನಾಡು ಮೂಲದ ಗಂಗಾ (38) ಕೊಲೆಯಾದ ದುರ್ದೈವಿ. ಇವರು ಹಕ್ಕಿಪಿಕ್ಕಿ ಜನಾಂಗದವರಾಗಿದ್ದು, ನಿಮಿಷಾಂಬ ದೇವಾಲಯದ ಬಳಿಯ ಕಾವೇರಿ ನದಿಯಲ್ಲಿ ಕಾಸು ಹೆಕ್ಕುವ ಕಾಯಕವನ್ನು ಮಾಡುತ್ತಿದ್ದರು.

ಅಲ್ಲದೇ ಇವರು ಮೈಸೂರು–ಬೆಂಗಳೂರು ಮೇಲ್ಸೇತುವೆಯ ಕೆಳಗೆ ತಮ್ಮ ಗುಂಪಿನೊಂದಿಗೆ ವಾಸಿಸುತ್ತಿದ್ದರು.

ಇವರ ಗುಂಪಿನ ಸದಸ್ಯರೆಲ್ಲರೂ ನಿರಾಶ್ರಿತರಾಗಿದ್ದು,



ಮಹಿಳೆಯ ಹತ್ಯೆಯ ಬಳಿಕ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು, ನ್ಯಾಮತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಡಾ.ಸುಧಾಕರ್ ಸೋಲು: ಬೆಂಬಲಿಗ ಆತ್ಮಹತ್ಯೆ



ಚಿಕ್ಕಬಳ್ಳಾಪುರ: ಮಾಜಿ ಆರೋಗ್ಯ ಸಚಿವ ಡಾ.ಸುಧಾಕರ್ ಅವರು ಸೋತಿದ್ದಕ್ಕೆ ಅವರ ಅಭಿಮಾನಿಯೊಬ್ಬ ಆತ್ಮಹತ್ಯೆ ಶರಣಾದ ಘಟನೆ ತಾಲೂಕಿನ ವಡ್ರೆಪಾಳ್ಯದಲ್ಲಿ ನಡೆದಿದೆ. ಚಿತ್ತಾರ ವೆಂಕಟೇಶ್ ಆತ್ಮಹತ್ಯೆಗೆ ಶರಣಾದ ಬೆಂಬಲಿಗ.

ಕೋಟೆ ನಿವಾಸಿಯಾಗಿದ್ದ ಚಿತ್ತಾರ ವೆಂಕಟೇಶ್ ವಡ್ರೆಪಾಳ್ಯದಲ್ಲಿ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಇವರು ಸುಧಾಕರ್ ಅವರ ಕಟ್ಟಾ ಅಭಿಮಾನಿಯಾಗಿದ್ದರು.

ಸುಧಾಕರ್ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿದ್ದರು. ಈ ಬಾರಿಯ ಚುನಾವಣೆಯಲ್ಲಿ ಸುಧಾಕರ್ ಸೋಲನ್ನು ಕಂಡಿದ್ದರು. ಚಿಕ್ಕಬಳ್ಳಾಪುರ ಗ್ರಾಮಾಂತರ ಪೋಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

ಆಪರೇಷನ್ ಕಮಲದ ಮೂಲಕ ಬಿಜೆಪಿ ಸೇರಿದ್ದ ಸುಧಾಕರ್ ವಿರುದ್ಧ ಕಾಂಗ್ರೆಸ್‌ನ ಪ್ರದೀಪ್ ಈಶ್ವರ್ 10,642 ಮತಗಳ ಅಂತರದಿಂದ ಗೆಲುವು ದಾಖಲಿಸಿದ್ದಾರೆ. ರಾಜಕಾರಣಕ್ಕೆ ಹೊಸದಾಗಿ ಪಾದಾರ್ಪಣೆ ಮಾಡಿ ತಿಂಗಳ ಕಾಲ ಚುನಾವಣಾ ಪ್ರಚಾರ ಮಾಡಿದ್ದ ಪ್ರದೀಪ್ ಈಶ್ವರ್ ಸುಧಾಕರ್ ಅವರನ್ನು ಮಣಿಸಿದ್ದು ಅಚ್ಚರಿಗೆ ಕಾರಣವಾಗಿದೆ.

# ಮಹಿಳಾ, ಮಕ್ಕಳ ಸುರಕ್ಷತೆಗಾಗಿ ಜಾಗೃತಿ ಕಾರ್ಯಕ್ರಮ

ಕೊಪ್ಪಳ: ಉತ್ತರ ಕರ್ನಾಟಕ ಸುಪ್ರಸಿದ್ಧ ಸುಕ್ಷೇತ್ರ ಹುಲಿಗಿಯ ಶ್ರೀ ಹುಲಿಗೆಮ್ಮ ದೇವಿ ಮಹಾ ರಥೋತ್ಸವ ಸಂದರ್ಭದಲ್ಲಿ ಮಕ್ಕಳ ಮತ್ತು ಮಹಿಳೆಯರ ಸುರಕ್ಷತಾ ಜಾಗೃತಿ ಮತ್ತು ಸಮಾಜದ ಅನಿಷ್ಠ ದೇವದಾಸಿ ಪದ್ಧತಿ ಕುರಿತು ಮೇ 13ರಿಂದ ಮೇ 15ರವರೆಗಿನ 3 ದಿನಗಳ ಜಾಗೃತಿ ಕಾರ್ಯಕ್ರಮಕ್ಕೆ ದೇವಸ್ಥಾನದ ಆವರಣದಲ್ಲಿ ಮೇ 13ರಂದು ಚಾಲನೆ ನೀಡಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ,



ದೇವದಾಸಿ ಪುನರ್ವಸತಿ ಯೋಜನೆ ಮತ್ತು ಸಖಿ ಒನ್ ಸ್ಟಾಪ್ ಸೆಂಟರ್ ಕೊಪ್ಪಳ ಅವರ ಸಹಯೋಗದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ದೇವದಾಸಿ ಪುನರ್ವಸತಿ ಯೋಜನಾಧಿಗಳಾದ ಪೂರ್ಣಿಮಾ ಯೋಳಭಾವಿ, ಹುಲಿಗೆಮ್ಮ ದೇವಸ್ಥಾನದ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳಾದ ಅರವಿಂದ್ ಅಯ್ಯಪ್ಪ ಸುತಗುಂಡಿ ಅವರು ಮಕ್ಕಳ ಮತ್ತು ಮಹಿಳೆಯರ ಸುರಕ್ಷತೆಯ ಜಾಗೃತಿಯ ಬಿತ್ತಿಪತ್ರಗಳನ್ನು ಬಿಡುಗಡೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಅರವಿಂದ್ ಸುತಗುಂಡಿ ಅವರು ಮಾತನಾಡಿ, ದೇವರ ಹೆಸರಿನಲ್ಲಿ ಮಹಿಳೆಯರು ಮತ್ತು ಮಕ್ಕಳನ್ನು ಬಲಿ ತೆಗೆದುಕೊಳ್ಳುವ ದೇವದಾಸಿ ಪದ್ಧತಿಯಂತಹ ಅಂಧ ಆಚರಣೆಗಳು ಮಕ್ಕಳ ಮತ್ತು ಮಹಿಳೆಯರ ಮೇಲೆ ದುಷ್ಪರಿಣಾಮವನ್ನುಂಟು ಮಾಡುತ್ತದೆ. ಬಾಲ್ಯವಿವಾಹ ಪದ್ಧತಿ ನಿಲ್ಲಬೇಕು. ಪಾಲಕರು ಮಕ್ಕಳ ಶಿಕ್ಷಣಕ್ಕೆ ಒತ್ತು ನೀಡಬೇಕೆಂದು ತಿಳಿಸಿದರು.

ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ದೇವದಾಸಿ ಪುನರ್ವಸತಿ ಯೋಜನಾಧಿಕಾರಿ ಪೂರ್ಣಿಮಾ ಯೋಳಭಾವಿ ಅವರು ಮಾತನಾಡಿ, ಅನೇಕ ಶತ ಶತಮಾನಗಳಿಂದಲೂ ಅನಕ್ಷರತೆ, ಮೂಢನಂಬಿಕೆ, ಪರಸ್ಪರ ಶೋಷಣೆ, ದೌರ್ಜನ್ಯಗಳಿಂದ ಬಳಲಿದ ಸಮಾಜವು 21ನೇ ಶತಮಾನದಲ್ಲಿಯಾದರೂ ಶಾಂತಿ ನೆಮ್ಮದಿ ಪರಸ್ಪರ ಸೌಹಾರ್ದತೆಯಿಂದ ಇರಬೇಕಿದೆ. ಈ ನಿಟ್ಟಿನಲ್ಲಿ ಮಹಿಳೆಯರು ಮತ್ತು ಮಕ್ಕಳ ಮೇಲಾಗುತ್ತಿರುವ ಶೋಷಣೆ ದೌರ್ಜನ್ಯಗಳನ್ನು ತಡೆಗಟ್ಟಲು ಸಾಮಾಜಿಕ ಜಾಗೃತಿ ಕಹಳೆಯನ್ನು ಮೊಳಗಿಸೋಣ ಎಂದರು. ದೇವಿಯ ಜಗಹೊತ್ತು ಬರುವ ಜೋಗಮ್ಮ, ಜೋಗಪ್ಪಗಳಿಗೆ ಭಿಕ್ಷೆ ಅಥವಾ ಜೋಗ ನೀಡುವುದನ್ನು ನಿಲ್ಲಿಸಬೇಕು ಹಾಗೂ ಅವರಿಗೆ ಬದುಕಲು ತಿಳಿವಳಿಕೆ ನೀಡಬೇಕೆಂದು ತಿಳಿಸಿದರು.

# ಬೇಸಿಗೆ ಮುಕ್ತಾಯದವರೆಗೆ ಯಾವುದೇ ಕಡೆಗಳಲ್ಲಿ ನೀರಿನ ತೊಂದರೆಯಾಗದಿರಲ್ಲಿ: ಜಿಲ್ಲಾಧಿಕಾರಿಗಳ ಸೂಚನೆ

ಕೊಪ್ಪಳ : ಬೇಸಿಗೆಯ ಅವಧಿ ಮುಕ್ತಾಯದವರೆಗೆ ಜಿಲ್ಲೆಯ ಯಾವುದೇ ಕಡೆಗಳಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಸುಂದರೇಶಬಾಬು ಅವರು ತಿಳಿಸಿದರು.

ಬೇಸಿಗೆ ಸಮಯದಲ್ಲಿ ಕುಡಿಯುವ ನೀರು ಮತ್ತು ಮೇವಿನ ಸಮಸ್ಯೆಯ ಕುರಿತು ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ಕೇಸ್ವಾನ್ ಹಾಲನಲ್ಲಿ ಮೇ 15ರ ಸಂಜೆ ನಡೆದ ಜಿಲ್ಲಾಮಟ್ಟದ ಟಾಸ್ಕ್ ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಮಟ್ಟದಲ್ಲಿ ಸಭೆಗಳು ನಡೆದ ಹಾಗೆ ತಾಲೂಕುಮಟ್ಟದಲ್ಲಿ ಸಹ ತಾಲೂಕು ಮಟ್ಟದ ಟಾಸ್ಕಫೋರ್ಸ್ ಸಭೆಗಳನ್ನು ನಡೆಸಿ ಯಾವುದೇ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬರದಂತೆ ಜಾಗೃತಿ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಆಯಾ ತಾಲೂಕಿನ ತಹಸೀಲ್ದಾರ ಮತ್ತು ತಾಪಂ ಕಾರ್ಯನಿರ್ವಹಣಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಿರಂತರವಾಗಿ ಕುಡಿಯುವ ನೀರಿನ ಮೂಲಗಳನ್ನು ಪರಿಶೀಲಿಸಿಕೊಳ್ಳುವುದರ ಜತೆಗೆ ಆ ನೀರು ಬಳಕೆಗೆ ಯೋಗ್ಯವಾಗಿದೆಯೋ ಇಲ್ಲೋ ಎಂಬುದನ್ನು ತಿಳಿದುಕೊಂಡು ಬಳಿಕವಷ್ಟೇ ಉಪಯೋಗಿಸಲು ಕ್ರಮ ವಹಿಸಬೇಕು. ಬೋರವೆಲ್‌ಗಳ




ಮೇಲೆ ಅವಲಂಬಿತವಾಗಿರುವ ಗ್ರಾಮ ಮತ್ತು ವಾರ್ಡವಾರು ಮಾಹಿತಿ ಇಟ್ಟುಕೊಂಡಿರಬೇಕು. ಗ್ರಾಮೀಣ ಪ್ರದೇಶದಲ್ಲಿ ತಾಂಡಾ ಮತ್ತು ಬೇಚಾರಕ ಗ್ರಾಮಗಳಲ್ಲಿ ಬೋರವೆಲ್‌ಗಳು ಇಲ್ಲದಿದ್ದಲ್ಲಿ ಪರ್ಯಾಯ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲೆಯಾದ್ಯಂತ ಆಯಾ ಕಡೆಗಳಲ್ಲಿನ ಬೋರವೆಲ್‌ಗಳನ್ನು ಮತ್ತು ಓವರ್ ಹೆಡ್ ಟ್ಯಾಂಕಗಳನ್ನು ಸುಸ್ಥಿಯಲ್ಲಿಡಬೇಕು. ನಗರ ಹಾಗೂ ಪಟ್ಟಣ ಪ್ರದೇಶಗಳಿಗೆ ಸರಬರಾಜು ಮಾಡುವ ಹಳ್ಳ, ಕೆರೆ, ಕಾಲುವೆ ಮತ್ತು ಡ್ಯಾಮಗಳಲ್ಲಿನ ನೀರನ್ನು ಕಾಲಕಾಲಕ್ಕೆ ಪರೀಕ್ಷಿಸಿ ಪೂರೈಸಲು ಮತ್ತು ಹಳ್ಳ, ಕೆರೆ, ಕಾಲುವೆ ಮತ್ತು ಡ್ಯಾಂಗಳ ಸುತ್ತಲಿನ ಪ್ರದೇಶದ ಶುಚಿತ್ವಕ್ಕೆ ಸಹ ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದು ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ನಿರ್ದೇಶನ ನೀಡಿದರು.

ನೀರು ಮತ್ತು ನೀರಿನ ಮೂಲ ಲಭ್ಯವಿದ್ದು ಆದರೆ ನೀರು ಸರಬರಾಜು ಪೂರೈಕೆಗೆ ವಿದ್ಯುತ್ ಸೌರ್ಯವಿಲ್ಲದಿದ್ದರೆ ಪ್ರಯೋಜನವಿಲ್ಲ. ಆದ್ದರಿಂದ ನಿರಂತರ ಜ್ಯೋತಿ ಯೋಜನೆಯಡಿಯಲ್ಲಿ ನಿರಂತರ ವಿದ್ಯುತ್ ಪೂರೈಸಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಇದೆ ವೇಳೆ ಜೆಸ್ಕಾಂ ಅಭಿಯಂತರರಿಗೆ ಸೂಚಿಸಿದರು.

ಜನರ ಅಪೇಕ್ಷೆಯನುಸಾರ ಆಯಾ ಕಡೆಗಳಲ್ಲಿನ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸದಾಕಾಲ ಸುಸ್ಥಿತಿಯಲ್ಲಿಡಲು ಗಮನ ಹರಿಸಬೇಕು. ರಿಪೇರಿ ಸಾಧ್ಯತೆ ಇರುವ ಘಟಕಗಳನ್ನು ಸರಿಪಡಿಸಲು ಮೊದಲ ಆದ್ಯತೆ ನೀಡಬೇಕು. ಜೆಜೆಎಂ ಮತ್ತು ಡಿಬಿಓಟಿ ಮೂಲಕವೇ ಜನತೆಗೆ ನೀರು ಪೂರೈಸಲು ಹೆಚ್ಚಿನ ಗಮನ ಕೊಡಬೇಕು ಎಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಒಟ್ಟು 33 ವಾರಗಳಿಗೆ ಆಗುವಷ್ಟು ಮೇವಿನ ಲಭ್ಯತೆ ಇದ್ದು, ಕಾರಟಗಿ, ಗಂಗಾವತಿ ಮತ್ತು ಕೊಪ್ಪಳ ತಾಲೂಕುಗಳಲ್ಲಿ 50 ಸಾವಿರ ಎಕರೆಯಲ್ಲಿ ಭತ್ತದ ಕಟಾವು ಆಗಿದ್ದು ಭತ್ತದ ಮೇವು ಸಹ ಸಾಕಷ್ಟು ಲಭ್ಯವಿರುತ್ತದೆ. ಸದ್ಯಕ್ಕೆ ಮೇವಿನ ಕೊರತೆ ಇರುವುದಿಲ್ಲ ಎಂದು ಪಶುಪಾಲನಾ ಇಲಾಖೆಯ ಉಪ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ರತ್ನಂ ಪಾಂಡೆಯ, ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ, ವಿವಿಧ ತಾಲೂಕುಗಳ ತಹಸೀಲ್ದಾರರು, ತಾಪಂ ಕಾರ್ಯನಿರ್ವಹಣಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸೇರಿದಂತೆ ಇನ್ನೀತರ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ತೋಟಗಾರಿಕೆ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ತೋಟಗಾರಿಕೆ ಇಲಾಖೆಯ ತೋಟಗಾರಿಕೆ ಪ್ರಾಯೋಗಿಕ ತರಬೇತಿ ಯೋಜನೆಯಡಿಯಲ್ಲಿ 2023–24 ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯ ಅಭ್ಯರ್ಥಿಗಳಿಗೆ ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಡ್ಯಾಂ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ಜೂನ್.1 2023 ರಿಂದ ಮಾರ್ಚ.30 2024 ರ ವರೆಗೆ 10 ತಿಂಗಳ ತೋಟಗಾರಿಕೆ ತರಬೇತಿಗಾಗಿ 11 ಪುರುಷ ಹಾಗೂ 5 ಮಹಿಳಾ ಅಭ್ಯರ್ಥಿಗಳಿಗೆ ಅರ್ಜಿ ಅಹ್ವಾನಿಸಲಾಗಿದೆ.

ಅಭ್ಯರ್ಥಿಯು ಎಸ್.ಎಸ್.ಎಲ್.ಸಿ ಪರಿಕ್ಷೇಯಲ್ಲಿ ಉತ್ತೀರ್ಣರಾಗಿರಬೇಕು, ತರಬೇತಿ ಬಯಸುವ ಅಭ್ಯರ್ಥಿಯ ತಂದೆ/ತಾಯಿ/ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು ಈ ಬಗ್ಗೆ ಪಹಣಿಯನ್ನು (ಖಖಿಅ) ನೀಡುವುದು ಕಡ್ಡಾಯವಾಗಿರುತ್ತದೆ.

ಸಾಮಾನ್ಯ ವರ್ಗದ ಅಭ್ಯರ್ಥಿಗೆ ಕನಿಷ್ಠ ವಯೋಮಿತಿ 18 ವರ್ಷ ಹಾಗೂ ಗರಿಷ್ಠ 30 ವರ್ಷಗಳು. ಪರಿಶಿಷ್ಠ ಜಾತಿ ಹಾಗೂ ಪರಿಶಿಷ್ಠ ಪಂಗಡದ ಅಭ್ಯರ್ಥಿಗಳ ಕನಿಷ್ಠ ವಯೋಮಿತಿ 18 ವರ್ಷಗಳು ಹಾಗೂ ಗರಿಷ್ಠ 33 ವರ್ಷಗಳು ಇರಬೇಕು.

ಅರ್ಜಿಗಳನ್ನು ಬೆಳಗಾವಿಯ ತೋಟಗಾರಿಕೆ ಉಪನಿರ್ದೇಶಕರು (ಜಿ.ಪಂ) /ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾವ) ರ ಕಛೇರಿಯಲ್ಲಿ ಅಥವಾ ಇಲಾಖೆಯ ವೆಬ್‌ಸೈಟ್ https://horticulturedir.karnataka.gov.in/ ನಲ್ಲಿ ಡೌನ್‌ಲೋಡ ಮಾಡಿಕೊಳ್ಳಬಹುದು.

ಮೇ.22 2023 ರ ಸಂಜೆ 5 ಗಂಟೆಯ ವರೆಗೆ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಭರ್ತಿ ಮಾಡಿದ ಅರ್ಜಿಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾವ), ರಾಣಿ ಚನ್ನಮ್ಮ ವೃತ್ತ, ಬೆಳಗಾವಿ ಕಛೇರಿಗೆ ಸಲ್ಲಿಸಬೇಕು.

ಅಭ್ಯರ್ಥಿಗಳು ಮೇ.25 2023 ರಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾವ) ಬೆಳಗಾವಿ ರವರ ಕಛೇರಿಯಲ್ಲಿ ಬೆಳಿಗ್ಗೆ 11 ಗಂಟೆಗೆ ನೇರವಾಗಿ ಮೂಲ ದಾಖಲಾತಿಗಳೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು. ಈ ಸಂಬಂಧವಾಗಿ ಈ ಕಛೇರಿಯಿಂದ ಮತ್ತೆ ಯಾವುದೇ ಪತ್ರ ವ್ಯವಹಾರ ಮಾಡಲಾಗುವುದಿಲ್ಲ. ಈ ಕುರಿತು ದೂರವಾಣಿ ಸಂಖ್ಯೆ 0831–2451422 ಮತ್ತು ಹಿಡಕಲ್ ಡ್ಯಾಂ ತರಬೇತಿ ಕೇಂದ್ರದ ದೂರವಾಣಿ ಸಂಖ್ಯೆ 08333–263008 ಗೆ ಸಂಪರ್ಕಿಸಿ ವಿಚಾರಿಸಬಹುದು.

ಹೆಚ್ಚಿನ ವಿವರಗಳಿಗೆ ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ರವರ ಕಛೇರಿಯಲ್ಲಿ ವಿಚಾರಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ರಾಷ್ಟ್ರೀಯ ಡೆಂಗು ದಿನ ಕಾರ್ಯಕ್ರಮ

ಬೆಳಗಾವಿ: 2023–24ನೇ ಸಾಲಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಮೇ.16 2023 ರಂದು ರಾಷ್ಟ್ರೀಯ ಡೆಂಗು ದಿನ ಕಾರ್ಯಕ್ರಮವನ್ನು ಆಚ–ರಿಸಲಾಗುತ್ತಿದೆ.

ವಿಶ್ವ ಡೆಂಗು ಹಾಗೂ ಚಿಕೂನ್ ಗುನ್ಯಾ ರೋಗ ಹರಡುವದನ್ನು ತಡೆಗಟ್ಟಲು ತಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳು :

ಸೊಳ್ಳೆಗಳ ನಿಯಂತ್ರಣ ಒಂದೇ ಡೆಂಗು ರೋಗದ ಹತೋಟಿಗೆ ಮುಖ್ಯ ವಿಧಾನ. ಸೊಳ್ಳೆಗಳು ನೀರನ್ನು ಶೇಖ–ರಿಸಿಡುವ ಸಿಮೆಂಟ್ ತೊಟ್ಟಿ, ಕಲ್ಲು ಚಪ್ಪಡಿಯಿಂದ ನಿರ್ಮಿಸಿದ ತೊಟ್ಟಿ, ಡ್ರಮ್ಮು ಬ್ಯಾರಲ್, ಮಣ್ಣಿನ ಮಡಿಕೆ, ಉಪಯೋಗಿಸಿದ ಒರಳುಕಲ್ಲು ಮುಂತಾದ ಕಡೆ ಶೇಖರವಾಗುವ ನೀರಿನಲ್ಲಿ ಉತ್ಪತಿಯಾಗುವದರಿಂದ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು.

ಎಲ್ಲಾ ನೀರಿನ ತೊಟ್ಟಿ, ಡ್ರಮ್ಮು, ಬ್ಯಾರಲ್ ಏರ್ ಕೂಲರ್ ಇತ್ಯಾದಿಗಳನ್ನು ವಾರಕೊಮ್ಮೆ ಖಾಲಿ ಮಾಡಿ, ಒಣಗಿಸಿ ಮತ್ತೆ ನೀರನ್ನು ಭರ್ತಿ ಮಾಡಿಕೊಳ್ಳುವುದು.

ನೀರು ಖಾಲಿ ಮಾಡಲು ಸಾಧ್ಯವಿಲ್ಲದ ತೊಟ್ಟಿ ಮುಂತಾದವುಗಳನ್ನು ಸೊಳ್ಳೆಗಳು ಒಳಗೆ ನುಸಳದಂತೆ ಸರಿಯಾದ ಮುಚ್ಚಳದಿಂದ ಮುಚ್ಚುವುದು.

ಬಯಲಿನಲ್ಲಿರುವ ತ್ಯಾಜ್ಯ ವಸ್ತುಗಳಾದ ಟೈರು, ಎಳೆನೀ–ರಿನ ಚಿಪ್ಪು, ಒಡೆದ ಬಾಟಲಿ ಮುಂತಾದವುಗಳಲ್ಲಿ ಮಳೆನೀರು ಸಂಗ್ರಹವಾಗದಂತೆ ಎಚ್ಚರವಹಿಸುವುದು. ಅಥವಾ ಸೂಕ್ತ ವಿಲೇವಾರಿ ಮಾಡುವುದು. ಸ್ವಯಂ ರಕ್ಷಣಾ ವಿಧಾನಗಳಾದ ಸೊಳ್ಳೆ ಪರದೆಗಳನ್ನು ಬಳಸಿ, ಸೊಳ್ಳೆಗಳು ಕಚ್ಚದಂತೆ ಎಚ್ಚ–ರಿಕೆ ವಹಿಸುವುದು.ಸ್ವಚ್ಚವಾದ ನೀರಿನಲ್ಲಿ ಡೆಂಗ್ಯೂ, ಚಿಕನ್ ಗುನ್ಯಾ ಹೆಚ್ಚಿಸುವ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ. ಅಂತಹ ಸ್ಥಳಗಳಲ್ಲಿ ಲಾರ್ವಾಹಾರಿ ಮೀನುಗಳನ್ನು ಗಪ್ಪಿ, ಗಂಬೂಷಿಯಾ ಮೀನುಗಳನ್ನು ಬಿಡುವದರಿಂದ ಜೈವಿಕ ನಿಯಂತ್ರಣ ಮಾಡಬಹುದು.

ಕೆರೆ,ಕುಂಟೆ, ಮನೆಯಲ್ಲಿರುವ ದೊಡ್ಡ ದೊಡ್ಡ ತೊಟ್ಟೆಗಳಲ್ಲಿ ಸೊಳ್ಳೆಗಳು ಉತ್ಪತಿಯಾಗದಂತೆ ತಡೆಗಟ್ಟಲು ಲಾರ್ವಾಹಾರಿ ಮೀನುಗಳಾದ ಗಪ್ಪಿ, ಗಂಬೂಷಿಯಾ ಮೀನುಗಳನ್ನು ಬಿಡಬೇಕು. ಹುಕ್ಕೇರಿ ತಾಲೂಕಿನ ಹಿಡಕಲ್ ಜಲಾಶಯದ ಹಾಗೂ ಸವದತ್ತಿ ತಾಲೂಕಿನ ಮುನವಳ್ಳಿ ಜಲಾಶಯಗಳಿಂದ ಮೀನುಗಾರಿಕಾ ಇಲಾಖೆಯಿಂದ ಲಾರ್ವಾಹಾರಿಗಳನ್ನು ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ಆಶಾ ಕಾರ್ಯಕರ್ತೆಯರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾ–ರಿಗಳು ಹಾಗೂ ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿ ಶಾಲೆ/ಕಾಲೇಜುಗಳ ಪ್ರಥಮ ಪಿಯುಸಿ ದಾಖಲಾತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಬೆಳಗಾವಿ ಜಿಲ್ಲೆಯಲ್ಲಿ ನಡೆಸಲಾಗುತ್ತಿರುವ ಮೊರಾರ್ಜಿ ದೇಸಾಯಿ/ಏಕಲವ್ಯ ಮಾದರಿ/ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆ/ಕಾಲೇಜುಗಳ ಪ್ರಥ–'ಮ ಪಿಯುಸಿ ದಾಖಲಾತಿಗಾಗಿ, ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು ಹತ್ತಿರದ ಕ್ರೈಸ್ ವಸತಿ ಶಾಲೆ/ಕಾಲೇಜಿನಲ್ಲಿ ಅರ್ಜಿ ನಮೂನೆ ಪಡೆದು, ನಿಗದಿತ

ನಮೂನೆಯಲ್ಲಿ ಭರ್ತಿ ಮಾಡಿ ಅಗತ್ಯ ದಾಖಲೆಗಳನ್ನು ಲಗತ್ತಿಸಿ ಮೇ.18 2023 ರೊಳಗಾಗಿ ಅರ್ಜಿ ಸಲ್ಲಿಸಬಹುದು. ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ ಹಾಗೂ ಇತರೆ ಸೌಲಭ್ಯ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ವಸತಿ ಶಾಲೆ/ಕಾಲೇಜುಗಳಲ್ಲಿ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರಾದ ಬಿ.ಕಲ್ಲೇಶ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಧಿಕಾ ಮಾದಾರ ಶಾಲೆಗೆ ಪ್ರಥಮ




ಬೆಳಗಾವಿ: ಎನ್. ಆರ್. ಇ. ಸಂಸ್ಥೆಯ ಹಲಸಿ ಪ್ರೌಢಶಾಲೆ ಕುಮಾರಿ ರಾಧಿಕಾ ಸುರೇ ಮಾದಾರ ಇವಳು ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ 625 ಅಂಕಗಳಿಗೆ 572 (ಪ್ರತಿ ಶತ 91.52) ಅಂಕ ಗಳಿಸಿ ಶಾಲೆಗೆ ಪ್ರಥಮ ಸ್ಥಾನ ಪಡೆದುದ್ದಕ್ಕ ಅಲ್ಲದೇ ಪ್ರಥಮ ಭಾಷೆ ಕನ್ನಡ ವಿಷಯದಲ್ಲಿ 125 ಅಂಕಗಳಿಗೆ 123 ಅಂಕ ಪಡೆದಿರುವುದಕ್ಕೆ ವಿಷಯ ಶಿಕ್ಷಕರಾದ ಶ್ರೀ ಸದಾಶಿವ ಭಜಂತ್ರಿ ಯವರು ಅಭಿನಂದಿಸಿದ್ದಾರೆ.

# ವೀರಶೈವ ಲಿಂಗಾಯತ ಸಮಾಜದವರಿಗೆ ಸೂಕ್ತವಾದ ಸ್ಥಾನ ಮಾನ ನೀಡಿ

ಬೆಳಗಾವಿ: ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸ್ಪಷ್ಟ ಬಹುಮತ ಬಂದಿದೆ.

34 ಜನ ವೀರಶೈವ ಲಿಂಗಾಯತ ಸಮಾಜದವರೇ ಆಯ್ಕೆಯಾಗಿದ್ದು ಅವರಿಗೂ ಪಕ್ಷದಲ್ಲಿ ಸೂಕ್ತವಾದ ಸ್ಥಾನ ಮಾನ ನೀಡಬೇಕೆಂದು ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಒತ್ತಾಯಿಸಿದರು.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಪ್ರಸಕ್ತ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಗೆ 136 ಸ್ಥಾನಗಳಲ್ಲಿ ಸ್ಪಷ್ಟ



ಬಹುಮತ ಸಿಕ್ಕಿದೆ.

ಈ ಪೈಕಿ 34 ಜನ ವೀರಶೈವ ಲಿಂಗಾಯತ ಸಮಾಜದ ಶಾಸಕರೂ, ಕಾಂಗ್ರೆಸ್ ಪಕ್ಷಕ್ಕಾಗಿ ದುಡಿದ ವೀರಶೈವ ಲಿಂಗಾಯತ ಸಮಾಜದ ಪ್ರಭಾವಿ ನಾಯಕರು ಆಯ್ಕೆಯಾಗಿದ್ದಾರೆ.

ಕಾಂಗ್ರೆಸ್ ಹೈಕಮಾಂಡ್ ಇದನ್ನು ಪರಿಗಣನೆಗೆ ತೆಗೆದುಕೊಂಡು ವೀರಶೈವ ಲಿಂಗಾಯತ ಸಮಾಜದ ಶಾಸಕರಿಗೂ ಯೋಗ್ಯವಾದ ಸ್ಥಾನ ಮಾನ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಕಾಂಗ್ರೆಸ್ ಪಕ್ಷಕ್ಕೆ ಕೇವಲ ಒಂದೇರಡು ಸಮಾಜದವರು ಮಾತ್ರ ಮತ ನೀಡಿಲ್ಲ ವೀರಶೈವ ಲಿಂಗಾಯತ ಸಮಾಜ ಸೇರಿದಂತೆ ಹಲವಾರು ಸಮಾಜದವರು ಪಕ್ಷಕ್ಕೆ ಮತದಾನ ಮಾಡುವುದರ ಮೂಲಕ ಕಾಂಗ್ರೆಸ್ ಗೆ ಸ್ಪಷ್ಟ ಬಹುಮತ ನೀಡಿದ್ದಾರೆ. ಯಾವ ಸಮುದಾಯಕ್ಕೂ ಅನ್ಯಾಯವಾಗದೆ,

ವೀರಶೈವ ಲಿಂಗಾಯತ ಸಮುದಾಯದ ಶಾಸಕ–ರಿಗೂ ಯೋಗ್ಯವಾದ ಸ್ಥಾನ ಮಾನ ನೀಡಬೇಕೆಂದು ಶ್ರೀಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳಾ ನಿರುದ್ಯೋಗಿಗಳಿಗೆ 30 ದಿನಗಳ ವಸ್ತ್ರ ಚಿತ್ರಕಲಾ(ಕಸೂತಿ) ತರಬೇತಿ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವತಿಯರಿಗೆ ಮತ್ತು ಮಹಿಳಾ ನಿರುದ್ಯೋಗಿಗಳಿಗೆ ವಸ್ತ್ರ ಚಿತ್ರಕಲಾ (Embroidery (ಕಸೂತಿ)) 30 ದಿನಗಳ ತರಬೇತಿಯನ್ನು 22.ಮೇ 2023 ರಂದು ಹಮ್ಮಿಕೊಳ್ಳಲಾಗಿದೆ.

ತರಬೇತದಾರರಿಗೆ ಇರಬೇಕಾದ ಅರ್ಹತೆಗಳು:– 18 ರಿಂದ 45 ವಯಸ್ಸಿನವರಾಗಿರಬೇಕು, ಗಾಮೀಣ ಪ್ರದೇಶದವರಾಗಿರಬೇಕು, BPL/ಜಾಬ್ ಕಾರ್ಡ ಹೊಂದಿರಬೇಕು.ನೀಡಬೇಕಾದ ದಾಖಲೆಗಳು:– BPL/ ಜಾಬ್ ಕಾರ್ಡ, ಆಧಾರ ಕಾರ್ಡ, ಬ್ಯಾಂಕ ಪಾಸ್ ಬುಕ್ಕ ಹಾಗೂ 3 ಭಾವಚಿತ್ರಗಳು.ತರಬೇತಿಯು ಊಟ ಮತ್ತು ವಸತಿಯೊಂದಿಗೆ ಸಂಪೂರ್ಣ ಉಚಿತವಾಗಿರುತ್ತದೆ.ಮೇ.20 ಆರ್ಜಿ ಸ್ವೀಕರಿಸಲು ಕೊನೆಯ ದಿನವಾಗಿರುತ್ತದೆ. ಆರ್ಜಿಯನ್ನು ಸಂಸ್ಥೆಯ ಆರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಇಮೇಲ್‌ಗೆ ಕಳುಹಿಸಬಹುದು.ಸಂಸ್ಥೆಯ ವಿಳಾಸ:– ಕೆನರಾ ಬ್ಯಾಂಕ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪ್ಲಾಟ ನಂ. ಸಿ ಎ –03 (ಪಾರ್ಟ) ಕಣಬರ್ಗಿ ಇಂಡಸ್ಟ್ರಿಯಲ್ ಎರಿಯಾ, ಆಟೋ ನಗರ. ಬೆಳಗಾವಿ – 590015.

ಹೆಚ್ಚಿನ ಮಾಹಿತಿಗಾಗಿ ಇಮೇಲ್ ವಿಳಾಸ ಇಟಚಿಟ: cbrsetibelagavi@gmail.com ಅಥವಾ ದೂರವಾಣಿ ಸಂಪರ್ಕ ಸಂಖ್ಯೆ:– 0831–2440644, 8296792166, 9845750043, 8050406866, 8867388906, 9449860564 ಗೆ ಬೆಳ್ಳಿಗ್ಗೆ 9.30 ರಿಂದ ಸಂಜೆ 6 ವರೆಗೆ ಸಂಪರ್ಕಿಸಬಹುದು ಎಂದು ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸತೀಶ್ ಜಾರಕಿಹೊಳಿ ಮುಖ್ಯಮಂತ್ರಿಯಾಗಲಿ: ಪರಶುರಾಮ ಪೂಜೇರಿ ಆಗ್ರಹ



ಬೆಳಗಾವಿ: ಬೆಳಗಾವಿ ಅಹಿಂದ ತತ್ವ ಮತ್ತು ವೈಚಾರಿಕ ಪ್ರಜ್ಞೆಯ ಕೆಪಿಸಿಸಿ ಕಾರ್ಯಧ್ಯಕ್ಷ ಸತೀಶ್ ಜಾರಕಿಹೊಳಿ ಅವರು ರಾಜ್ಯದ ಮುಖ್ಯಮಂತ್ರಿ ಆಗಲಿ. ಈ ಹಿನ್ನೆಲೆಯಲ್ಲಿ ಪಕ್ಷದ ಹೈಕಮಾಂಡ್ ಸ್ಪಂದಿಸಲಿ ಎಂದು ಪರಶುರಾಮ ಪೂಜೇರಿ ಹಿರೇಬಾಗೇವಾಡಿ ವಾಲ್ಮೀಕಿ ಸಮಾಜದ ಮುಖಂಡರು ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಬೆಳಗಾವಿ ಸೇರಿದಂತೆ ಉತ್ತರ ಕರ್ನಾಟಕ ಭಾಗದಲ್ಲಿ ತಮ್ಮದೇ ವ್ಯಕ್ತಿತ್ವ ರೂಪಿಸಿಕೊಂಡಿರುವ ಸತೀಶ್ ಜಾರಕಿಹೊಳಿ ಅವರು ಉತ್ತರ ಕರ್ನಾಟಕ ಭಾಗದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಕಾರಣರಾಗಿದ್ದಾರೆ.

ವೈಜ್ಞಾನಿಕ ಮತ್ತು ವೈಚಾರಿಕ ನಿಲುವುಗಳ ಮೂಲಕ ಯುವ ಸಮೂಹಕ್ಕೆ ಆದರ್ಶವಾಗಿದ್ದಾರೆ.

ಅಂತ ವಿಭಿನ್ನ ಯೋಚನೆಯ ಅವರು ಮುಖ್ಯಮಂತ್ರಿಯಾದರೆ ರಾಜ್ಯ ಸಮೃದ್ಧಿ ಆಗುವುದರಲ್ಲಿ ಸಂಶಯವಿಲ್ಲ ಕೇವಲ ಸಾಂಪ್ರದಾಯಿಕ ಆಲೋಚನೆಗೆ ಅಂಟಿಕೊಂಡಿರುವ ಮನಸುಗಳನ್ನು ಬದಲಾಯಿಸಲು ಮತ್ತು ಸಮಗ್ರ ಕರ್ನಾಟಕದ ಅಭಿವೃದ್ಧಿಗೆ ಸಹಕ–ರಿಸಬಲ್ಲರು. ಅದಕ್ಕಾಗಿ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ಕಾಂಗ್ರೆಸ್ ಹೈಕಮಾಂಡ್ ಪರಿಗಣಿಸಬೇಕೆಂದು ಪತ್ರಿಕಾ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

# ಚುನಾವಣೆ ಹೀನಾಯ ಸೋಲು: ನಳೀನ್ ಕುಮಾರ್ ಕಟೀಲ್, ಸದಾನಂದಗೌಡ ಪೋಟೋಗಳಿಗೆ ಚಪ್ಪಲಿಹಾರ ಹಾಕಿ ಆಕ್ರೋಶ

ಮಂಗಳೂರು: ಕರ್ನಾಟಕ ರಾಜ್ಯ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯ ಹೀನಾಯ ಸೋಲಿನಿಂದ ಆಕ್ರೋಶಗೊಂಡಿರುವ ಕಾರ್ಯಕರ್ತರು ಪಕ್ಷದ ನಾಯಕ–ರಿಗೆ ಚಪ್ಪಲಿಹಾರ ಹಾಕುವ ಮೂಲಕ ತಮ್ಮ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರಾಜ್ಯದ ವಿಧಾನಸಭೆ ಚುನಾವಣೆ ಫಲಿತಾಂಶ ಹೊರಬಿದ್ದಿದ್ದು, ಪುತ್ತೂರು ಸೇ–ರಿದಂತೆ ರಾಜ್ಯದೆಲ್ಲೆಡೆ ಬಿಜೆಪಿ ಹೀನಾಯ ಸೋಲನುಭವಿಸುವ ಮೂಲಕ ತೀವ್ರ ಮುಖಭಂಗಕ್ಕೆ ಒಳಗಾಗಿದೆ. ಇದರಿಂದ ಬೇಸತ್ತ ಕಾರ್ಯಕರ್ತರು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್ ಹಾಗೂ ಡಿ.ವಿ.ಸದಾನಂದ ಭಾವಚಿತ್ರಕ್ಕೆ ಚಪ್ಪಲಿ ಹಾರ ಹಾಕಿ ಆಕ್ರೋಶ ವ್ಯಕ್ತಪಡಿಸಿದ ಘಟನೆ ಪುತ್ತೂರಿನ ಬಸ್ ನಿಲ್ದಾಣದ ಬಳಿ ನಡೆದಿದೆ.

ಈಗಾಗಲೇ ರಾಜ್ಯದೆಲ್ಲೆಡೆ ಬಿಜೆಪಿ ಸೋಲುಂಡಿದ್ದು, ಇದು ಕಾರ್ಯಕರ್ತರ ಆಕ್ರೋಶಕ್ಕೆ ಕಾರಣವಾಗಿದೆ. ಅಲ್ಲದೆ ಪ್ರಮುಖವಾಗಿ ಘಟಾನುಘಟಿ ಬಿಜೆಪಿ ನಾಯಕರೇ ಸೋಲು ಕಂಡಿರುವುದು ಆಶ್ಚರ್ಯ ಮೂಡಿಸಿದೆ. ಇದನ್ನೆಲ್ಲ ಗಮನಿಸಿದರೆ ಬಿಜೆಪಿ




ಕಾರ್ಯಕರ್ತರೇ ಪುತ್ತೂರಿನಲ್ಲಿ ಬಿಜೆಪಿ ನಾಯಕರ ಭಾವಪೂರ್ಣ ಶ್ರದ್ಧಾಂಜಲಿ ಬ್ಯಾನರ್ ಮಾಡಿಸಿದ್ದು, ಅದರಲ್ಲಿರುವ ಪೋಟೋಗಳಿಗೆ ಚಪ್ಪಲಿ ಹಾರ ಹಾಕಿ ಆಕ್ರೋಶ ಹೊರಹಾಕಿದ್ದಾರೆ.

ಪುತ್ತೂರು ಸೇರಿದಂತೆ ರಾಜ್ಯದಂತ ಬಿಜೆಪಿ ಸೋಲಲು ನಳಿನ್ ಕುಮಾರ್ ಕಟೀಲ್ ಅವರ ವೈಯಕ್ತಿಕ ಹಿತಾಸಕ್ತಿ ಮತ್ತು ಅಸಮರ್ಥ ನಾಯಕತ್ವವೇ ಕಾರಣ ಎಂದು ಕಳೆದ ಕೆಲ ಸಮಯದಿಂದ ಸ್ವತಃ ಬಿಜೆಪಿ ಕಾರ್ಯಕರ್ತರೇ ಸಾಮಾಜಿಕ ಜಾಲತಾಣ ಸೇರಿದಂತೆ ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸುತ್ತಿದ್ದು, ಇದೀಗ ಅದರ ಮುಂದುವರಿದ ಭಾಗವಾಗಿ ಕಿಡಿಗೇಡಿಗಳು ನಳಿನ್ ಕುಮಾರ್ ಕಟೀಲ್ ಮತ್ತು ಸಂಸದ ಡಿವಿ ಸದಾನಂದ ಗೌಡ ಅವರ ಫೋಟೋ ಇರುವ ಬ್ಯಾನರ್ ಹಾಕಿ ಶ್ರದ್ಧಾಂಜಲಿ ವಿಕೃತಿ ಮೆರೆಯಲಾಗಿದೆ.

ಅಷ್ಟೇ ಅಲ್ಲದೆ "ಬಿಜೆಪಿ ಹೀನಾಯವಾಗಿ ಸೋಲಲು ಕಾರಣರಾದ ನಿಮಗೆ ಭಾವಪೂರ್ಣ ಶ್ರದ್ಧಾಂಜಲಿ" ಅಂತಾ ಬ್ಯಾನರ್‌ನಲ್ಲಿ ಬರೆಸುವ ಮೂಲಕ ತಮ್ಮ ಆಕ್ರೋಶ ಹೊರಹಾಕಿದ್ದಾರೆ. ಈ ಬ್ಯಾನರ್ ಅನ್ನು ನೊಂದ ಹಿಂದೂ ಕಾರ್ಯಕರ್ತರ ಹೆಸರಿನಲ್ಲಿ ಅಳವಡಿಸಲಾಗಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಪುತ್ತೂ–ರಿನಲ್ಲಿ ಬಿಜೆಪಿ ಟಿಕೆಟ್ ಸಿಗದ ಹಿನ್ನೆಲೆ ಹಿಂದೂ ಮುಖಂಡ ಅರುಣ್ ಪುತ್ತಿಲ ಪಕ್ಷೇತರರಾಗಿ ಸ್ಪರ್ಧೆ ಮಾಡಿದ್ದು, ಅವರು ಕಾಂಗ್ರೆಸ್ ವಿರುದ್ಧ 4 ಸಾವಿರ ಮತಗಳ ಅಂತರದಲ್ಲಿ ಸೋಲುಂಡಿದ್ದರು. ಮತ್ತೊಂದೆಡೆ ಇದೇ ಕ್ಷೇತ್ರದಲ್ಲಿ ಬಿಜೆಪಿಯು ಕೂಡ ಕಡಿಮೆ ಮತಗಳನ್ನು ಪಡೆದು ಮೂರನೇ ಸ್ಥಾನಕ್ಕೆ ತೃಪ್ತಿಪಟ್ಟಿತ್ತು. ಇದರಿಂದ ರೊಚ್ಚಿಗೆದ್ದ ಕಾರ್ಯಕರ್ತರು ಬಿಜೆಪಿ ಸೋಲಿಗೆ ನಳಿನ್ ಕುಮಾರ್ ಕಟೀಲ್ ಮತ್ತು ಸದಾನಂದಗೌಡ ಅವರೇ ಕಾರಣ ಅಂತಾ ಕಿಡಿಕಾರುತ್ತಿದ್ದಾರೆ.

# ಅಪಘಾತ: ಸ್ಥಳದಲ್ಲೇ ಮೂವರ ಸಾವು

ಗದಗ : ಗದಗ ತಾಲೂಕಿನ ಅಡವಿ ಸೋಮಾಪೂರ ಬಳಿ ಭೀಕರ ಅಪಘಾತದಲ್ಲಿ ಸ್ಥಳದಲ್ಲೇ ಮೂವರು ಮೃತಪಟ್ಟ ಘಟನೆ ನಡೆದಿದೆ.

ಮೃತ ದುರ್ದೈವಿಗಳು ಮುಂಡರಗಿ ತಾಲೂಕಿನ ಸಿಂಗಟರಾಯನಕೇರಿ ತಾಂಡಾದ ನಿವಾಸಿಗಳು ಶಿವಪ್ಪ ನಾಯಕ್ (50), ಶಿವಾನಂದ ಲಮಾಣಿ (33) ಕೃಷ್ಣಪ್ಪ ಚೌಹ್ವಾನ್ ಎಂದು ತಿಳಿದುಬಂದಿದೆ.

ಅಡವಿ ಸೋಮಾಪುರ ಗ್ರಾಮದಿಂದ ಮುಂಡರಗಿಗೆ ಹೋಗುತ್ತಿದ್ದಾಗ ಈ ದುರ್ಘಟನೆ ಸಂಭವಿಸಿದೆ.

ಟಿವಿಎಸ್ ಎಕ್ಸೆಲ್, ಹೀರೋ ಸ್ಪೆಂಡರ್ ಹಾಗೂ ಚವರ್ಲೆಟ್




ಕಾರ್ಮ ಮಧ್ಯೆ ಸರಣಿ ಅಪಘಾತ ಅಪಘಾತ ಸಂಭವಿಸಿದೆ. ಗದಗ ಕಡೆಯಿಂದ ಕಾರು ಅತೀ ವೇಗವಾಗಿ ಬಂದು ದ್ವಿಚಕ್ರ ವಾಹನಗಳಿಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಇಬ್ಬರು ಸವಾರರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ವಿಷಯ ತಿಳಿದ ಕೂಡಲೇ ಘಟನಾ ಸ್ಥಳಕ್ಕೆ ಗದಗ ಗ್ರಾಮೀಣ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಘಟನೆ ಸಂಬಂಧ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಾಜ್ಯದಲ್ಲಿ ದಲಿತ ನಾಯಕರಲ್ಲಿ ಒಬ್ಬರಿಗೆ ಮುಖ್ಯಮಂತ್ರಿ ಮಾಡಬೇಕು: ಸದಾನಂದ ತೇರದಾಳ

ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಬಹುಮತ ಸಾಧಿಸಿ ಸರ್ಕಾರ ರಚನೆಗೆ ಸನ್ನದ್ಧವಾಗಿದ್ದು, ಈ ನಿಟ್ಟಿನಲ್ಲಿ ವಿಶ್ವ ಬಹುಜನ ಧ್ವಜ ಮತ್ತು ಸಂವಿಧಾನ ರಕ್ಷ ಸೇನಾ ಟ್ರಸ್ಟ್ ನ ರಾಷ್ಟ್ರ ಹಾಗೂ ರಾಜ್ಯ ಸಂಘಟನೆಯ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಟ್ರಸ್ಟ್ ನ ರಾಷ್ಟ್ರೀಯ ಅಧ್ಯಕ್ಷ ಸದಾನಂದ ತೇರದಾಳ ಹೇಳಿದರು.

ನಗರ ದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ದಲಿತ ನಾಯಕರಲ್ಲಿ ಒಬ್ಬರಿಗೆ ಮುಖ್ಯಮಂತ್ರಿ ಮಾಡಬೇಕು, ಅಲ್ಪಸಂಖ್ಯಾತ ನಾಯಕರಲ್ಲಿ ಒಬ್ಬ–



ರಿಗೆ ಡಿಸಿಎಂ ಸ್ಥಾನ ನೀಡಬೇಕು, ಸರ್ಕಾರದ ಇಲಾಖೆಗಳೆಲ್ಲದರಲ್ಲಿ ಖಾಲಿ ಇರುವ ಹುದ್ದೆಗಳನ್ನು ಕೆಟಗೇರಿ ಪ್ರಕಾರವಾಗಿ ಭರ್ತಿ ಮಾಡಬೇಕು, ರಾಜ್ಯಾದ್ಯಂತ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ನಡೆಯುತ್ತಿರುವ ವ್ಯಾಪಾ–ರೀಕರಣವನ್ನು ನಿಯಂತ್ರಿಸಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಅವರು ಒತ್ತಾಯ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಡಾ. ಎಂ ದಿಕ್ಷೀತ್, ಪರಮೇಶಪ್ಪ ಹಲಗೇರಿ, ಲೀಲಾವತಿ ಗೋಣಗೇರಿ, ಪರಮೇಶಪ್ಪ ಹಲಗೇರಿ, ಶಿವಾನಂದ ಜಿ.ಜಿ, ವಿಜಯಕುಮಾರ್ ಹಿರೇಮಠ ಸೇರಿದಂತೆ ಉಪಸ್ಥಿತರಿದ್ದರು.

## ಪಾಕಿಸ್ತಾನ ಜಿಂದಾಬಾದ್ ಘೋಷಣೆ ವಿವಾದ

# ದೇಶದ್ರೋಹ ಚಟುವಟಿಕೆ ಆರಂಭ: ಕೆಎಸ್ ಈಶ್ವರಪ್ಪ

ಶಿವಮೊಗ್ಗ: ಕರ್ನಾಟಕ ಚುನಾವಣೆ ವಿಜಯದ ಬೆನ್ನಲ್ಲೇ ಬೆಳಗಾವಿಯಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು 'ಪಾಕಿಸ್ತಾನ ಜಿಂದಾಬಾದ್' ಘೋಷಣೆ ಕೂಗಿದ ವಿಚಾರಕ್ಕೆ ಸಂಬಂಧಿಸಿದಂತೆ ಬಿಜೆಪಿ ಹಿರಿಯ ನಾಯಕ ಕೆಎಸ್ ಈಶ್ವರಪ್ಪ ಕಾಂಗ್ರೆಸ್ ಪಕ್ಷದ ವಿರುದ್ಧ ಕಿಡಿಕಾ–ರಿದ್ದಾರೆ.

ಶಿವಮೊಗ್ಗ ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಮಾಜಿ ಶಾಸಕ ಕೆ.ಎಸ್. ಈಶ್ವರಪ್ಪ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ ದೇಶದ್ರೋಹಿ ಚಟುವಟಿಕೆಗಳು ಹೆಚ್ಚಾಗಿವೆ ಎಂದು ಆರೋಪಿಸಿದ್ದಾರೆ.

'ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ



ಬರುತ್ತಿದ್ದಂತೆ ದೇಶ ವಿರೋಧಿ ಚಟುವಟಿಕೆಗಳು ಹೆಚ್ಚಾಗಿದೆ. ಬೆಳಗಾವಿಯ ತಿಲಕವಾಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ವಿಜಯೋತ್ಸವದಲ್ಲಿ ಪಾಕ್ ಪರ ಘೋಷಣೆ ಕೂಗಲಾಗಿದೆ.

ಈ ಬಗ್ಗೆ ಪೊಲೀಸ್ ಅಧಿಕಾ–ರಿಯೇ ದೂರು ನೀಡಿದ್ದಾರೆ. ಶಿರಸಿಯಲ್ಲೂ ಹಸಿರು ಬಾವುಟ ಹಾರಾಡಿದೆ ಎಂದು ಹೇಳಿದರು.

**ನನಗೆ ಬೆದರಿಕೆ ಕರೆ**

ಇನ್ನು ನಿನ್ನೆ ರಾತ್ರಿ ಕಝಕಸ್ತಾನದಿಂದ ರಾತ್ರಿ 12 ಗಂಟೆಗೆ. ನನಗೆ ಬೆದರಿಕೆ ಕರೆ ಬಂದಿದೆ. ಈ ಬಗ್ಗೆ ಪೊಲೀಸ–ರಿಗೆ ದೂರು ನೀಡಲಿದ್ದೇನೆ. ನಾನು ಕಾಲ್ ರಿಸೀವ್ ಮಾಡಿಲ್ಲ. ಸೈಲೆಂಟ್ ಮೋಡ್ ನಲ್ಲಿಟ್ಟಿದ್ದೆ. ಈ ಹಿಂದೆ ಮಹಾರಾಷ್ಟ್ರದ ವ್ಯಕ್ತಿಯೊಬ್ಬರನ್ನು ಬಂಧಿಸಿದಾಗ ಕೇಂದ್ರ ಸಚಿವ ನಿತಿನ್ ಗಡ್ಕರಿಗೆ ಬೆದರಿಕೆ ಕರೆ ಮಾಡಿದ್ದು ಎಂದು ಗೊತ್ತಾಗಿತ್ತು ಆತ ಶಾಹೀರ್ ಶೇಖ್ . ಆತನ ಡೈರಿಯಲ್ಲಿ ನನ್ನ ಹೆಸರು ಉಲ್ಲೇಖವಾಗಿತ್ತು. ಈ ಹಿನ್ನೆಲೆಯಲ್ಲಿ ನನಗೆ +7 (678)815 415 ನಂಬರ್ ನಿಂದ ಕರೆ ಬಂದಿದೆ ಎಂದು ಈಶ್ವರಪ್ಪ ಹೇಳಿದರು.

ಸಿದ್ದು–ಡಿಕೆಶಿ ಚುನಾವಣೆಗೆ ಮೊದಲು ಬಿಜೆಪಿಯನ್ನು ಕೋಮುವಾದಿ ಪಕ್ಷ ಎಂದಿದ್ದರು. ಆದರೆ ಈಗ ಸಿದ್ದರಾಮಯ್ಯ ಪರವಾಗಿ ಕುರುಬರು ಹಾಗೂ ಡಿ.ಕೆ.ಶಿವಕುಮಾರ್ ಪರವಾಗಿ ಒಕ್ಕಲಿಗರು ಲಾಬಿ ಮಾಡುತ್ತಿದ್ದಾರೆ. ಇದರಿಂದ ಸಿದ್ದು ಮತ್ತು ಡಿಕೆಶಿ ಜಾತಿವಾದ ಮಾಡುತ್ತಿದ್ದಾರೆ ಎಂಬುದು ಗೊತ್ತಾಗುತ್ತದೆ. ಜೆಡಿಎಸ್ ಅಭ್ಯರ್ಥಿ ವಿರುದ್ಧ ಚಿಕ್ಕಮಗಳೂರಿನ ಭೋಜೇಗೌಡ ಕೆಲಸ ಮಾಡಿದ್ದು ಇಂದು ಹಾಲಿನ ಅಭಿಷೇಕ ಮಾಡಿಸಿಕೊಂಡಿದ್ದಾರೆ. ಇಂದು ಲಜ್ಜೆಗೇಡಿ ವರ್ತನೆಯಾಗಿದ್ದು ಜೆಡಿಎಸ್ ನಾಯಕರು ಹೇಗೆ ಸಹಿಸಿಕೊಳ್ಳುತ್ತಾರೋ ಗೊತ್ತಿಲ್ಲ ಎಂದು ಕಿಡಿಕಾರಿದರು.

# 16 ವರ್ಷ ವಯಸ್ಸಿನ ಬಾಲಕ ನಾಪತ್ತೆ



ಬೆಳಗಾವಿ: ಬೆಳಗಾವಿ ನಗರದ ಪಾಟೀಲ ಗಲ್ಲಿ ಶಿಂಗಾರಿ ಕಾಲನಿಯ ನಿವಾಸಿಯಾದ ಕುಮಾರ ಓಂಕಾರ ಅಮರ ಪಾಟೀಲ(16) ಇವನಿಗೆ ಸರಿಯಾಗಿ ಅಭ್ಯಾಸ ಮಾಡಿ ಒಳ್ಳೆ ಅಂಕಗಳನ್ನು ಪಡೆದುಕೊಳ್ಳಬೇಕು ಅಂತ ಬುದ್ದಿ ಮಾತು ಹೇಳಿದ್ದಕ್ಕೆ ಸಿಟ್ಟು ಮಾಡಿಕೊಂಡು ಮೇ.14 2023 ರಂದು 3 ಗಂಟೆಯಿಂದ ಬೆಳಿಗ್ಗೆ 6 ಗಂಟೆ ನಡುವಿನ ಅವಧಿಯಲ್ಲಿ ಮನೆಯಲ್ಲಿ ಯಾರಿಗೂ ಹೇಳದೆ ಹೋದವನು ಮರಳಿ ಮನೆಗೆ ಬರದೆ ಕಾಣೆಯಾಗಿದ್ದಾನೆ ಎಂದು ಇವರ ತಂದೆಯಾದ ಅಮರ ವಿಷ್ಣು ಪಾಟೀಲ ಅವರು ದೂರು ದಾಖಲಿಸಿದ್ದಾರೆ.

ಕಾಣೆಯಾದ ಬಾಲಕನ ಚಹರೆ ಪಟ್ಟಿ:

5 ಪೂಟ 1 ಇಂಚ 8 ಎತ್ತರ, ಸದೃಢ ಮೈಕಟ್ಟು, ದುಂಡು ಮುಖ, ನೆಟ್ಟನೆಮೂಗು, ಗೋದಿಗಪ್ಪು ಮೈಬಣ್ಣ, ಕಪ್ಪು ಕೂದಲು ಇದ್ದು, ಎದೆಯ ಮೇಲೆ ದೊಡ್ಡ ಮಚ್ಚೆ ಇರುತ್ತದೆ ಹಾಗೂ ಮರಾಠಿ, ಹಿಂದಿ, ಇಂಗ್ಲೀಷ ಭಾಷೆ ಮಾತನಾಡುತ್ತಾನೆ. ಕೆಂಪು ಬಣ್ಣದ ಜಾಕೆಟ್, ಕಡು ನೀಲಿ ಬಣ್ಣದ ಬಣ್ಣದ ಟ್ರ್ಯಾಕ್ ಪ್ಯಾಂಟ್ ಧರಿಸಿರುತ್ತಾನೆ.

ಈ ರೀತಿ ಚಹರೆಯುಳ್ಳ ಬಾಲಕನ ಬಗ್ಗೆ ಮಾಹಿತಿ ದೊರೆತಲ್ಲಿ ಶಹಾಪೂರ ಪೋಲಿಸ್ ಠಾಣೆ ದೂರವಾಣಿ ಸಂಖ್ಯೆ 0831–2405244 ಮೊಬೈಲ್ ಸಂಖ್ಯೆ 9480804046, ಅಥವಾ shahapurbgm@ksp.gov.in ಗೆ ಸಂಪರ್ಕಿಸಬಹುದು ಎಂದು ಠಾಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಲಚೇತನರ ಹಾಗೂ ಪುನರ್ವಸತಿ ಕಾರ್ಯಕರ್ತರ ಒಂದು ದಿನ ಕಾರ್ಯಾಗಾರ

ಚಿಕ್ಕೋಡಿ: ಮಹತ್ವಾಕಾಂಕ್ಷಿ ಯೋಜನೆಯಾದ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೂಲಿ ಕೆಲಸ ಕೇಳಿಬರುವ ವಿಕಲಚೇತನರಿಗೆ ಉದ್ಯೋಗ ಚೀಟಿ ವಿತರಿಸಿ ದುಡಿಯುವ ಕೈಗಳಿಗೆ ಉದ್ಯೋಗ ನೀಡಿ ಅವರಲ್ಲಿ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಿದೆ ಎಂದು ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ನಿಂಗಪ್ಪ ಮಸಳಿ ಹೇಳಿದರು.

ಸೋಮವಾರ ತಾಲ್ಲೂಕ ಪಂಚಾಯತ ಸಭಾ ಭವನದಲ್ಲಿ ವಿಕಲಚೇತನರ ಹಾಗೂ ಪುನರ್ವಸತಿ ಕಾರ್ಯಕರ್ತರ ಒಂದು ದಿನ ಕಾರ್ಯಾಗಾರದಲ್ಲಿ ಮಾತನಾಡಿದರು 18 ವರ್ಷದ ಮೇಲ್ಪಟ್ಟ



ವಿಕಲಚೇತನರಿಗೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಉದ್ಯೋಗ ಚೀಟಿ ನೀಡಿಅವರ ಶಕ್ತಿ ಸಾಮಥ–'ರ್ಯ ಗಳಿಗೆ ಅನುಗುಣವಾಗಿ ಕೂಲಿ ಕೆಲಸ ನೀಡಲಾಗುತ್ತದೆ ಹಾಗೂ 2023–24 ನೇ ಸಾಲಿನಲ್ಲಿ ಉದ್ಯೋಗಚೀಟಿ ವಿತರಣಾ ಅಭಿಯಾನ ಕೈಗೊಂಡಿದ್ದು ಇಗಾಗಲೇ ತಾಲ್ಲೂಕಿನ ಎಲ್ಲಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾ–ರಿಗಳಿಗೆ ಸೂಚಿಸಲಾಗಿದೆ ಎಂದು ಹೇಳಿದರು.

ಸಹಾಯಕ ನಿರ್ದೇಶಕರಾದ ಶಿವಾನಂದ ಶಿರಗಾಂವಿ ಮಾತನಾಡಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಒಂದು ವರ್ಷಕ್ಕೆ 100 ದಿನಗಳ ಉದ್ಯೋಗ ಕೊಡಲಾಗುವುದು ವಿಕಲಚೇತನರ ನಿರ್ವಹಿಸಬೇಕಾದ ಕೆಲಸದ ಕಾಮಗಾರಿಗಳನ್ನು ಅವರ ಅಂಗವೈಕಲ್ಯದ ವಿವಿದ ಪ್ರಮಾಣಗಳನ್ನು ಆಧರಿಸಿ ಕೂಲಿ ಕೆಲಸ ನೀಡಲಾಗವುದು, ವಿಕಲಚೇತನ ವ್ಯಕ್ತಿಗಳನ್ನು ಕಾರ್ಯಕ್ಷೇತ್ರದಲ್ಲಿ ಕಾಯಕ ಬಂದುಗಳಾಗಿ ವಿಶೇಷ ಆದ–'ತೆ ನೀಡಲಾಗಿದೆ ಹಾಗೂ ಪ್ರಸ್ತುತ ವರ್ಷದಲ್ಲಿ 316 ರೂ ಕೂಲಿ ದರಇದೆ, ವೈಯಕ್ತಿಕ ಕಾಮಗಾರಿಗಳನ್ನು ತೆಗೆದು ಕೊಂಡು ತಮ್ಮಜೀವನ ಸದೃಡ ಮಾಡಿಕೊಳ್ಳಬಹುದು ಎಂದು ಹೇಳಿದರು

ವಿಕಲಚೇತನರಾದ ಚಂದ್ರವ್ವಾತಂಗೋಜಿ ಮಾತನಾಡಿ ಯಾವುದೆ ಕೆಲಸ ಮಾಡದೆ ಮನೆಯಲ್ಲಿ ಕುಳಿತುಕೊಂಡು ಮುಂದಿನ ಜೀವನ ಹೇಗೆ ಎಂದು ಚಿಂತೆಯಲ್ಲಿದ್ದಾಗ ನನ್ನ ನೆರವಿಗೆ ಬಂದಿದ್ದು ಉದ್ಯೋಗ ಖಾತ–ರಿಯೋಜನೆ ಎಂದು ಹೇಳಿದಳು

ಐಇಸಿ ಸಂಯೋಜಕರಾದ ರಂಜೀತ ಕಾಂಬಳೆ ಎಮ್.ಐ.ಎಸ್ ಸಂಯೋಜ–ಕರಾದ ಚೇತನ ಶಿರಹಟ್ಟಿ ತಾಲ್ಲೂಕ ಪುನರ್ವಸತಿ ಕಾರ್ಯಕರ್ತೆರಾದ ಅನುಸಯಾ ಬಾಳಾಪ್ಪಗೋಳ ಹಾಗೂ ಎಲ್ಲಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಉಪಸ್ಥಿತರಿದ್ದರು ಕಾರ್ಯಕ್ರಮ ನಿರೂಪಣೆ ಸವಿತಾ ಪಾಟೀಲ ಮಾಡಿದಳು

# ಬಿಜೆಪಿ ದುರಾಡಳಿತಕ್ಕೆ ತಕ್ಕ ಉತ್ತರ: ಮಲ್ಲಿಕಾರ್ಜುನ ರಾಶಿಂಗೆ

ಹುಕ್ಕೇರಿ : ಹಣದ ಆಮಿಷ, ಕೋಮು ಭಾವನೆ ಪ್ರಚೋದಿಸಿ ಮತಗಳಿಸುವ ಬಿಜೆಪಿ ಯತ್ನ ವಿಫಲವಾಗಿದೆ ಎಂದು ಕಾಂಗ್ರೆಸ್ ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ ಹೇಳಿದರು.

ಪಟ್ಟಣದಲ್ಲಿ ಸೋಮವಾರ ಸುದ್ಧಿಗಾರ ರೊಂದಿಗೆ ಮಾತನಾಡಿದ ಅವರು, ಮತದಾರರು ಅಭಿವೃದ್ದಿಗಾಗಿ ಕಾಂಗ್ರೆಸ್ ಬೆಂಬಲಿಸಿದ್ದಾರೆ. ರಾಜ್ಯದ ಶ್ರೇಯೋಭಿವೃದ್ಧಿಗಾಗಿ ಕಾಂಗ್ರೆಸ್ ಶ್ರಮಿಸಲಿದೆ. ಗ್ಯಾರಂಟಿ ಯೋಜನೆಗಳ ಈಡೇರಿಕೆಗೆ ಸರ್ಕಾರದ ಮುಂದಾಗಲಿದೆ ಎಂದರು.

ಬೆಲೆ ಏರಿಕೆ, ದುರಾಡಳಿತ, ಭ್ರಷ್ಟಾಚಾರದಿಂದ ಬೇಸತ್ತಿದ್ದ ಜನ ಬಿಜೆಪಿಗೆ ತಕ್ಕ ಪಾಠ ಕಲಿಸಿದ್ದಾರೆ. ಜಿಲ್ಲೆ ಸೇರಿದಂತೆ ರಾಜ್ಯದಲ್ಲಿ ಮತದಾರರು ಹಣದ ಆಮಿಷಕ್ಕೆ ಬಲಿಯಾಗದೇ ಅಭಿವೃದ್ಧಿಗೆ ಮತ ನೀಡಿದ್ದಾರೆ. ಅಲ್ಲದೆ ಕಾಂಗ್ರೆಸ್‌ನ ಗ್ಯಾರಂಟಿ ಪ್ರಣಾಳಿಕೆಗೆ ಮೆಚ್ಚಿ ಪಕ್ಷಕ್ಕೆ ಬಹುಮತ ನೀಡಿದ್ದಾರೆ ಎಂದು ಅವರು ಹೇಳಿದರು.

ಬೆಳಗಾವಿ ದೊಡ್ಡ ಜಿಲ್ಲೆ. ಎರಡನೇ ರಾಜಧಾನಿ ಕೂಡ ಹೌದು. ಹೀಗಾಗಿ ಹೆಚ್ಚು ಸಚಿವ ಸ್ಥಾನಗಳು ಸಿಗುವ ಭರವಸೆ ಇದೆ. ಜಿಲ್ಲೆಯ 11 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆದ್ದದ್ದು ಖುಷಿಯಾಗಿದೆ. ದುರಾಡಳಿತ



ವಿರುದ್ಧ ಹಾಗೂ ಕಾಂಗ್ರೆಸ್‌ನ ಪರ ಜನ ತೀರ್ಪು ನೀಡಿದ್ದಾರೆ. ಜಿಲ್ಲೆಯಲ್ಲಿನ ನಾಯಕರು ಮತ್ತು ಕಾರ್ಯಕರ್ತರ ಒಗ್ಗಟ್ಟೇ ಈ ಗೆಲುವಿಗೆ ಕಾರಣವಾಗಿದೆ ಎಂದು ಅವರು ಹೇಳಿದರು.

ಹಿರಿತನ, ಪಕ್ಷ ಸಂಘಟನೆ ಹಾಗೂ ಪರಿಶಿಷ್ಟ ಪಂಗಡ ವಾಲ್ಮೀಕಿ ಸಮುದಾಯದ ಆಧಾರದ ಮೇಲೆ ಸತೀಶ ಜಾರಕಿಹೊಳಿ, ಮಹಿಳಾ ಕೋಟಾದಲ್ಲಿ ಲಕ್ಷ್ಮೀ ಹೆಬ್ಬಾಳಕರ, ಪರಿಷತ್ ಕೋಟಾದಲ್ಲಿ ಪ್ರಕಾಶ ಹುಕ್ಕೇರಿ, ಬಿಜೆಪಿಗೆ ತಿರುಗೇಟು ನೀಡಲು ಹಾಗೂ ಲಿಂಗಾಯತ ಕೋಟಾದಲ್ಲಿ ಲಕ್ಷ್ಮಣ ಸವದಿ ಸಚಿವರಾಗುವ ವಿಶ್ವಾಸವಿದೆ ಎಂದು ರಾಶಿಂಗೆ ಹೇಳಿದರು.

ಬರುವ ತಾಲೂಕು, ಜಿಲ್ಲಾ ಪಂಚಾಯಿತಿ ಹಾಗೂ ಲೋಕಸಭೆ ಚುನಾವಣೆಗೆ ಕಾಂಗ್ರೆಸ್ ಪಕ್ಷವನ್ನು ಮತ್ತಷ್ಟು ಗಟ್ಟಿಗೊಳಿಸಲಾಗುವುದು. ಈ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಪಕ್ಷ ಅಧಿಕಾರ ಹಿಡಿಯುವ ನಿಟ್ಟಿನಲ್ಲಿ ಶ್ರಮಿಸಲಾಗುವುದು ಎಂದು ಅವರು ಹೇಳಿದರು.

ಮುಖಂಡರಾದ ಬಸವರಾಜ ಕೋಳಿ, ದಿಲೀಪ ಹೊಸಮನಿ, ಕೆ.ವೆಂಕಟೇಶ, ಆನಂದ ಕೆಳಗಡೆ, ಪ್ರಕಾಶ ಮೈಲಾಖೆ, ಕೆಂಪಣ್ಣಾ ಶಿರಹಟ್ಟಿ, ಲಕ್ಷ್ಮಣ ಹೂಲಿ, ಮಂಜು ಪಡದಾರ, ಶೀತಲ ಕಟ್ಟಿ, ಬಸವರಾಜ ಹವಾಲ್ದಾರ, ಆನಂದ ಖಾತೇದಾರ, ಬಸವರಾಜ ದೇವುಗೋಳ, ರಾಜು ಮೂಥಾ, ಗಂಗಾರಾಮ ಹುಕ್ಕೇರಿ, ಮಂಜು ಮರಡಿ, ಪಿಂಟು ಸೂರ್ಯವಂಶಿ ಮತ್ತಿತರರು ಉಪಸ್ಥಿತರಿದ್ದರು.

# ಸಿದ್ದು ಪರ ನಿಂತ ಶೋಷಿತ ವರ್ಗಗಳು



ಬೆಂಗಳೂರು: ಸಿದ್ದರಾಮಯ್ಯ ಅವರಿಗೆ ಮತ್ತೊಮ್ಮೆ ಸಿಎಂ ಸ್ಥಾನ ನೀಡಬೇಕು ಎಂದು ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಆಗ್ರಹಪಡಿಸಿದೆ.

ಪತ್ರಿಕಾಗೋಷ್ಠಿಯಲ್ಲಿ ಒಕ್ಕೂಟದ ಸಂಚಾಲಕ ಮಾವಳ್ಳಿ ಶಂಕರ್ ಮಾತನಾಡಿ, ಇದುವರೆಗೂ ರಾಜ್ಯದಲ್ಲಿ ಬಲಿಷ್ಠ ಜಾತಿಗಳೇ ಆಳ್ವಿಕೆ ಮಾಡಿದೆ.

ಸಿದ್ದರಾಮಯ್ಯ ಐದು ವರ್ಷಗಳ ಕಾಲ ದೇಶ ಮೆಚ್ಚುವ ರೀತಿಯ ಸರ್ಕಾರ ಕೊಟ್ಟಿದ್ದಾರೆ.

ಅಹಿಂದ ವರ್ಗದ ಹಿತ ಕಾಪಾಡುವ ಅನೇಕ ಕಾರ್ಯಕ್ರಮ ನೀಡಿದ್ದಾರೆ. ಯಾವುದೇ ಕಪ್ಪು ಚುಕ್ಕೆ ಇಲ್ಲದೆ ರಾಜ್ಯದ ಆಡಳಿತ ನೀಡಿದ್ದಾರೆ.

ಈಗ ಮತ್ತೊಮ್ಮೆ ಜನ ಸಿದ್ದರಾಮಯ್ಯ ಆಡಳಿತ ನಿರೀಕ್ಷೆ ಮಾಡುತ್ತಿದ್ದಾರೆ ಎಂದರು.

ರಾಜ್ಯಕ್ಕೆ ಸಿದ್ದರಾಮಯ್ಯ ಆರ್ಥಿಕ ಶಿಸ್ತನ್ನು ನೀಡಿದ್ದಾರೆ. ಮುಂಬರುವ ಲೋಕಸಭಾ ಚುನಾವಣೆ ಎದುರಿಸುವ ಎದೆಗಾರಿಕೆ, ಸೈದ್ಧಾಂತಿಕ ಬದ್ಧತೆ ಇರುವುದು ಸಿದ್ದರಾಮಯ್ಯ ಅವ–ರಿಗೆ. ಈ ನಿಟ್ಟಿನಲ್ಲಿ ಹೈಕಮಾಂಡ್ ಸಿದ್ದರಾಮಯ್ಯ ಅವರಿಗೆ ಸಿಎಂ ಸ್ಥಾನ ಕೊಡಬೇಕು ಎಂದು ಆಗ್ರಹಿಸಿದರು.

ಪ್ರಧಾನ ಸಂಚಾಲಕ ಕೆ ಎಂ ರಾಮಚಂದ್ರ ಮಾತನಾಡಿ, ಮುಂದಿನ ಚುನಾವಣೆಗಳ ದೃಷ್ಟಿಯಲ್ಲಿ ಸಿದ್ದರಾಮಯ್ಯ ಅವರಿಗೆ ನಾಯಕತ್ವ ನೀಡಬೇಕು. ಇದರಿಂದ ಕಾಂಗ್ರೆಸ್ ಪಕ್ಷಕ್ಕೆ ಅನುಕೂಲವಾಗಲಿದೆ ಎಂದರು.

ಮಾಜಿ ಸಚಿವ ಬಿ.ಟಿ ಲಲಿತಾ ನಾಯಕ್ ಮಾತನಾಡಿ, ಕೋಮುವಾದ, ಹಿಂದುತ್ವ ಗದ್ದಲ ನಿಭಾಯಿಸುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಸಿದ್ದರಾಮಯ್ಯ ಸಿಎಂ ಆಗುವುದನ್ನು ಎಲ್ಲರೂ ಒಪ್ಪಬೇಕು ಎಂದರು.


ಸರಿಯಾದ ದಿಕ್ಕಿನಲ್ಲಿ ರಾಜ್ಯವನ್ನು ತೆಗೆದುಕೊಂಡು ಹೋಗುವುದು ಅಗತ್ಯವಾಗಿದೆ. ಕಾಂಗ್ರೆಸ್ ನಲ್ಲಿ ಕೆಲವರಲ್ಲಿ ಕೊರತೆ ಇದೆ.

ಮೂಡನಂಬಿಕೆ, ಬಡವರ ಪರವಾದ ಮನಸ್ಥಿತಿ ಇಲ್ಲದೆ ಇರುವವರು ಇದ್ದಾರೆ. ಈ ನಿಟ್ಟಿನಲ್ಲಿ ಕಾಂಗ್ರೆಸ್ ನಮ್ಮ ಮಾತನ್ನು ಅರ್ಥ ಮಾಡಿಕೊಳ್ಳಬೇಕು ಎಂದರು. ಎಲ್ಲಾ ನಾಯಕರು ಕಷ್ಟ ಪಟ್ಟಿದ್ದಾರೆ ಆದರೂ ಸಿದ್ದರಾಮಯ್ಯ ಅವರಿಗೆ ಅವಕಾಶ ಕಲ್ಪಿಸಬೇಕು ಎಂದು ಅವರು ಒತ್ತಾಯಿಸಿದರು.

ಒಕ್ಕೂಟದ ಪ್ರಧಾನ ಸಂಚಾಲಕ ಕೆ.ಎಂ ರಾಮಚಂದ್ರಪ್ಪ, ಸಿದ್ದರಾಮಯ್ಯ ಅವರನ್ನು ಸಿಎಂ ಮಾಡಿಲ್ಲವಾದಲ್ಲಿ ಅಹಿಂದ ವರ್ಗ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ವಿರೋಧವಾಗುತ್ತದೆ ಎಂಬ ಎಚ್ಚರಿಕೆ ನೀಡಿದರು.

ಮಾಜಿ ಸಚಿವೆ ಬಿ.ಟಿ ಲಲಿತಾ ನಾಯಕ್ ಮಾತನಾಡಿ, ಕೋಮುವಾದ, ಹಿಂದುತ್ವ ಗದ್ದಲ ನಿಭಾಯಿಸುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಸಿದ್ದರಾಮಯ್ಯ ಸಿಎಂ ಆಗುವುದನ್ನು ಎಲ್ಲರೂ ಒಪ್ಪಬೇಕು ಎಂದರು.

# ಕಾರ ಅಪಘಾರ: ಗಗನಸಖಿ ಸಾವು



ಮುಂಬೈ: ಅಪಘಾತ ವೊಂದರಲ್ಲಿ ವೈಯಕ್ತಿಕ ಕೆಲಸಕ್ಕಾಗಿ ದೆಹಲಿಯಿಂದ ಮುಂಬೈಗೆ ಬಂದಿದ್ದ ಗಗನಸಖಿ ಸಾವನ್ನಪ್ಪಿರುವ ಘಟನೆ ಮುಂಬೈನ ಜುಹುನಲ್ಲಿ ನಡೆದಿದೆ.

ಈ ಅಪಘಾತದ ವಿಡಿಯೋ ಈಗ ಎಲ್ಲೆಡೆ ವೈರಲ್ ಆಗುತ್ತಿದೆ. ಇನ್ನು ಅಪಘಾತದಲ್ಲಿ ಮೃತರಾದ ಯುವತಿ ಗಗನಸಖಿಯಾಗಿ ಕೆಲಸ ಮಾಡುತ್ತಿದ್ದರು ಎಂದು ತಿಳಿದು ಬಂದಿದೆ.

ಪಾರ್ಟಿ ಮುಗಿಸಿ ಮನೆಗೆ ಹಿಂದಿರುಗುತ್ತಿದ್ದಾಗ ಜುಹು ಪ್ರದೇಶದಲ್ಲಿ ಘಟನೆ ನಡೆದಿದೆ.

ಜುಹು ಪೊಲೀಸರು ನೀಡಿರುವ ಮಾಹಿತಿ ಪ್ರಕಾರ ಮೃತರನ್ನು ಪಲ್ಲವಿ ಭಟ್ಟಾಚಾರ್ಯ ಎಂದು ಗುರುತಿಸಲಾಗಿದೆ.

ಮೂಲತಃ ಪಶ್ಚಿಮ ಬಂಗಾಳದ ಕೋಲ್ಕತ್ತಾದವರಾದ ಪಲ್ಲವಿ ಅವರು, ದೆಹಲಿ ನಿವಾಸಿಯಾಗಿದ್ದರು. ಇತ್ತೀಚೆಗಷ್ಟೇ ಕೆಲಸ ಬದಲಾಯಿಸಿ ಬೇರೊಂದು ವಿಮಾನ ಕಂಪನಿಗೆ ಸೇರ್ಪಡೆಯಾಗಿದ್ದರು. ಲೇಸರ್ ಸರ್ಜರಿಗಾಗಿ ಮುಂಬೈಗೆ ಬಂದಿದ್ದರು ಎನ್ನಲಾಗಿದೆ.

ಮೃತ ಪಲ್ಲವಿ ಸ್ನೇಹಿತ ಕುಡಿದ ಅಮಲಿನಲ್ಲಿ ಬಿಎಂಡಬ್ಲ್ಯೂ ಕಾರು ಚಲಾಯಿಸುತ್ತಿದ್ದ ಎನ್ನಲಾಗಿದ್ದು, ನಿಯಂತ್ರಣ ತಪ್ಪಿ ಬಿಎಂಸಿ ಟ್ರಕ್ಗೆ ಡಿಕ್ಕಿ ಹೊಡೆದಿದ್ದಾರೆ.

ಯುವಕ 120 ಕಿ.ಮೀ ವೇಗದಲ್ಲಿ ಕಾರು ಚಲಾಯಿಸುತ್ತಿದ್ದ ಎನ್ನುವ ಮಾಹಿತಿ ಲಭ್ಯವಾಗಿದೆ.

# ಏಕವ್ಯಕ್ತಿ ಮಕ್ಕಳ ನಾಟಕ ಪ್ರದರ್ಶನ



ಬೆಳಗಾವಿ: ರಂಗಸಂಪದ ಬೆಳಗಾವಿಯ–ರಿಂದ ನಗರದ ಕೋನವಾಳ ಬೀದಿಯಲ್ಲಿರುವ ಲೋಕಮಮಾನ್ಯ ರಂಗಮಂದಿರದಲ್ಲಿ ಇದೇ ದಿ.14 ರವಿವಾರದಂದು ಸಾಯಂಕಾಲ 6–30 ಗಂಟೆಗೆ ರಂಗಸಂಪದದ ಈ ವರ್ಷದ ಪ್ರಥಮ ಕಾಣಿಕೆಯಾಗಿ ಚಿಟ್ಟೆ ಕಾಜಾಣ ಬೆಂಗಳೂರು ಇವರಿಂದ ಏಕವ್ಯಕ್ತಿ ಮಕ್ಕಳ ನಾಟಕವನ್ನು ಹಮ್ಮಿಕೊಂಡಿದ್ದರು.

ಈ ನಾಟಕದ ರಚನೆ ಡಾ. ಬೇಲೂರ ರಘುನಂದನ ಇವರದಾಗಿದ್ದು, ನಿರ್ದೇಶನ ಕೃಷ್ಣಮೂರ್ತಿ ಕವತ್ತಾರ ಅವರದಾಗಿತ್ತು. 13 ವರ್ಷದ ಬಾಲಕ ಗೋಕುಲ ಸಹೃದಯನ ಅದ್ಭುತ ನಟನೆ ಪ್ರೇಕ್ಷಕರ ಮನ ಗೆದ್ದಿತು.

ಈ ನಾಟಕಗಳ ಪ್ರಾಯೋಜಕರಾದ ಅಭಿಷೇಕ್ ಅಲಾಯ್ಸ ಪ್ರೈ.ಲಿ. ನ ಶ್ರೀಮತಿ.ಸುನೀತಾ ಮತ್ತು ಶ್ರೀ. ಮಧ್ವಾಚಾರ್ಯ ಆಯಿ ಅವರು ದೀಪ ಪ್ರಜ್ವಲಿಸಿ ಉದ್ಘಾಟಿಸಿದರು. ರಂಗಸಂಪದ ಅಧ್ಯಕ್ಷ ಡಾ. ಅರವಿಂದ ಕುಲಕರ್ಣಿ, ಉಪಾಧ್ಯಕ್ಷರಾದ ಶ್ರೀ.ಗುರುನಾಥ ಕುಲಕರ್ಣಿ, .ರಾಮಚಂದ್ರ ಕಟ್ಟಿ, ಕಾರ್ಯದರ್ಶಿ ಪ್ರಸಾದ ಕಾರಜೋಳ, ಆಡಳಿತ ಮಂಡಳಿ ಸದಸ್ಯರಾದ ಶ್ರೀಮತಿ. ಪದ್ಮಾ ಕುಲಕರ್ಣಿ ಹಾಗೂ ಶ್ರೀಮತಿ. ವೀಣಾ ಹೆಗಡೆ ಉಪಸ್ಥಿತರಿದ್ದರು.

70 ನಿಮಿಷಗಳಲ್ಲಿ ಏಕವ್ಯಕ್ತಿ ಮಕ್ಕಳ ನಾಟಕ ಬಾಲಕ ಸಹೃದಯ ನವರಸಗಳಲ್ಲಿಯ ಶೃಂಗಾರ ರಸ ಒಂದನ್ನು ಬಿಟ್ಟು ಉಳಿದ ಎಲ್ಲಾ ರಸಗಳನ್ನು ಅದ್ಭುತವಾಗಿ ಪ್ರದರ್ಶಿಸಿದ. ಹಲವು ಸನ್ನಿವೇಶಗಳಲ್ಲಿ ಪ್ರೇಕ್ಷಕರ ಕಣ್ಣು ತುಂಬಿ ಬಂದವು. ಹಾಗೆಯೇ ಹಲವು ಹಾಸ್ಯದ ಸನ್ನಿವೇಶಗಳು ರಂಜಿಸಿದವು. ಮಕ್ಕಳ ಮನಸ್ಥಿತಿಯನ್ನು ಮನಮುಟ್ಟುವಂತೆ ಬಿಂಬಿಸುವಲ್ಲಿ ಯಶಸ್ವಿಯಾಯಿತು.

ಯಶಸ್ವಿ ಪ್ರದರ್ಶನದೊಂದಿಗೆ ರಂಗಸಂಪದ ತನ್ನ ಕಾರ್ಯವನ್ನು ಪ್ರಾರಂಭಿಸಿತು.

# 6 ಕೀ.ಮೀ. ದೀಡ ನಮಸ್ಕಾರ ಹಾಕಿ ಹರಕೆ ತೀರಿಸಿದ ಭಕ್ತ



ತಾಳಿಕೊಟೆ: ದೇವರ ಹಿಪ್ಪರಗಿ ಮತಕ್ಷೇತ್ರದ ಜೆಡಿ–ಎಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ರಾಜುಗೌಡ ಪಾಟೀಲ ಅವರು ಶಾಸಕರಾಗಿ ಆಯ್ಕೆಯಾಗಲೆಂದು ಹರಕೆ ಹೊತ್ತಿದ್ದ ಬೊಮ್ಮನಹಳ್ಳಿ ಗ್ರಾಮದ ಅಭಿಮಾನಿಯೊಬ್ಬರು ಬೇಡಿಕೆ ಇಡೇರಿದ್ದರಿಂದ ಸುಮಾರು 6 ಕೀ.ಮೀ. ವರೆಗೆ ತಾಳಿಕೋಟೆಯ ಶ್ರೀ ಖಾಸ್ಗತೇಶ್ವರ ಮಠಕ್ಕೆ ದೀಡ ನಮಸ್ಕಾರ ಹಾಕಿ ಸೋಮವಾರರಂದು ಹರಕೆ ತೀರಿಸಿದ್ದಾರೆ.

ಬೊಮ್ಮನಹಳ್ಳಿ ಗ್ರಾಮದ ಈರಣ್ಣ ಕಲ್ಬುರ್ಗಿ ಎಂಬ ದೇವರ ಹಿಪ್ಪರಗಿ ಶಾಸಕರಾಗಿ ಆಯ್ಕೆಯಾದ ರಾಜುಗೌಡ ಪಾಟೀಲ(ಕು.ಸಾಲವಾಡಗಿ) ಅವರ ಅಭಿಮಾನಿಯು ಬೊಮ್ಮನಹಳ್ಳಿ ಗ್ರಾಮದ ಶ್ರೀ ಅಂಬ್ಲೇಶ್ವರ ಮಠದಿಂದ ತಾಳಿಕೋಟೆಯ ಶ್ರೀ ಖಾಸ್ಗತೇಶ್ವರ ಮಠದವರೆಗೆ ಸುಮಾರು 6 ಕೀಲೊ ಮೀಟರ್ ದೀಡ ನಮಸ್ಕಾರ ಹಾಕಿದ್ದಾನೆ. ಅವನ ಹರಕೆಯು ಹೊತ್ತಂತೆ ದೇವರಹಿಪ್ಪರಗಿ ಕ್ಷೇತ್ರದಲ್ಲಿ ಜೆಡಿಎಸ್ ಅಭ್ಯರ್ಥಿ ರಾಜುಗೌಡ ಪಾಟೀಲ ಕುದರಿ ಸಾಲವಾಡಗಿ ಅವರು ಅತ್ಯಧಿಕ ಮತಗಳಿಂದ ಜಯ ಶಾಲಿಯಾಗಿದ್ದಾರೆ. ಹೀಗಾಗಿ ರಾಜುಗೌಡ ಪಾಟೀಲ ಅವರ ಅಪ್ಪಟ ಅಭಿಮಾನಿ ಈರಣ್ಣ ಕಲ್ಬುರ್ಗಿ ಅವರು ಇಂದು ದೀಡ ನಮಸ್ಕಾರ ಹಾಕುವದರೊಂದಿಗೆ ತಮ್ಮ ಹರಕೆಯನ್ನು ತೀರಿಸಿದ್ದಾರೆ. ನಂತರ ಶ್ರೀ ಖಾಸ್ಗತ ಮಠದಲ್ಲಿ ಶ್ರೀ ಖಾಸ್ಗತರ. ವೀರಕ್ತಶ್ರೀಗಳ ಗದ್ದುಗೆಗೆ ಮಹಾ ಪೂಜೆ ಸಲ್ಲಿಸಿ ಶ್ರೀಮಠದ ಬಾಲಶಿವಯೋಗಿ ಶ್ರೀ ಸಿದ್ದಲಿಂಗಶ್ರೀಗಳಿಂದ ಆಶಿರ್ವಾದ ಪಡೆದುಕೊಂಡರು.

ಈ ಸಮಯದಲ್ಲಿ ಜೆಡಿಎಸ್ ತಾಲೂಕಾ ಕಾರ್ಯಾದ್ಯಕ್ಷ ಮಡುಸಾಹುಕಾರ ಬಿರಾದಾರ, ಮುಖಂಡರಾದ ನಿಂಗು ಕಲ್ಬುರ್ಗಿ, ಜಗನ್ನಾಥ ಮಸರಕಲ್ಲ, ಸಾಹೇಬಗೌಡ ಪಾಟೀಲ, ದೇವರಾಜ ನಾಯ್ಕಲ್, ಶ್ರೀಶೈಲ ದೋರನಳ್ಳಿ, ಯಂಕು ಕದ್ನಳ್ಳಿ, ಶಾಂತಕುಮಾರ ದ್ವಾರನಳ್ಳಿ (ಸ್ವಾಮಿ), ಸೋಮು ಮಸರಕಲ್ಲ, ಮೊದಲಾದವರು ಇದ್ದರು.

# ಬಿಜೆಪಿ ಸರ್ಕಾರ ಕೊಚ್ಚಿ ಹೋಗುತ್ತೆ ಎಂದು ಹೇಳಿದ್ದು ನಿಜವಾಗಿದೆ: ದಿಂಗಾಲೇಶ್ವರ ಸ್ವಾಮೀಜಿ

ಹುಬ್ಬಳ್ಳಿ: ನಾನು ಹಿಂದೆ ಯಡಿಯೂರಪ್ಪ ಕಣ್ಣೀರನಲ್ಲಿ ಬಿಜೆಪಿ ಸರ್ಕಾರ ಕೊಚ್ಚಿ ಹೋಗುತ್ತೆ ಎಂದಿದ್ದೆ.

ಇಂದು ಆ ಪಕ್ಷದ ನಾಯಕ–ರಿಗೆ ಇದು ಅರಿವಾಗಿದೆ ಎಂದು ಶಿರಹಟ್ಟಿ ಫಕ್ಕಿರೇಶ್ವರ ಮಠದ ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

ತಾಲೂಕಿನ ನೂಲ್ವಿ ಕ್ರಾಸ್ ಬಳಿ ಸೋಮವಾರ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಅಧಿಕಾರ ಬಂದ ಸಂದರ್ಭದಲ್ಲಿ ಆ ಪಕ್ಷದ ನಾಯಕರನ್ನು ನಿರ್ಲಕ್ಷ್ಯ ಮಾಡಿದರೆ ತಿನ್ನಬಾರದ ಪೆಟ್ಟು ತಿನ್ನುತ್ತಾರೆ ಎಂದರು.

ನಾನು ಅಂದು ಒಬ್ಬ ವ್ಯಕ್ತಿ ಉದ್ದೇಶಿಸಿ ಹೇಳಿರಲಿಲ್ಲ. ಯಡಿಯೂರಪ್ಪ ಎಲ್ಲರಿಗೆ ಬೇಕಾದ ನಾಯಕರು. ಅವತ್ತು ಎಲ್ಲಾ ಸಮಾಜದ ನಾಯಕರು ಅವರನ್ನು ಮುಂದುವರೆಸಬೇಕು ಎಂದಿದ್ದರು. ಯಾವುದೋ ಕೆಟ್ಟ ಉದ್ದೇಶ ಅಥವಾ ಸ್ವಾರ್ಥಕ್ಕೆ ತೆಗೆದುಕೊಂಡ ನಿರ್ಣಯ ಹಾಗೂ ಯಡಿಯೂರಪ್ಪ ಬದಲಾಯಿಸಿದ್ದೇ ಇಂದಿನ ಹೀನಾಯ ಪರಿಸ್ಥಿತಿಗೆ ಕಾರಣ ಎಂದರು.

ಸ್ವಾಮೀಜಿ ಗಂಭೀರ ಹೇಳಿಕೆ ನೀಡಿದಾಗ ಆ ಬಗ್ಗೆ ಚಿಂತನ ಮಂಥನ ಮಾಡಬೇಕು.

ಕೇಸರಿ ಪಡೆ ಎಂದು ಹೇಳಿ ಅಧಿಕಾರಕ್ಕೆ ಬಂದು, ಖಾವಿಧಾರಿಗಳನ್ನು ಸರಿಯಾಗಿ ನಡೆಸಿಕೊಳ್ಳಲಿಲ್ಲ. ಖಾವಿಧಾರಿಗಳು ಪಾಠ ಮಾಡಿದರೂ ಅವರು ಪಾಠ ಕಲಿಯಲಿಲ್ಲ ಎಂದರು.

ಯಡಿಯೂರಪ್ಪ, ಲಕ್ಷ್ಮಣ ಸವದಿ, ಜಗದೀಶ ಶೆಟ್ಟರ, ಈಶ್ವರಪ್ಪ ಸೇರಿದಂತೆ ರಾಜ್ಯದ ಹಿರಿಯ



ನಾಯಕರನ್ನು ಕಡೆಗಣಿಸಿದ್ದೆ ಬಿಜೆಪಿ ಇಂದಿನ ಸ್ಥಿತಿಗೆ ಕಾರಣ.

ಪಕ್ಷ ಕಟ್ಟದ ವ್ಯಕ್ತಿ ಮಾತು ಕೇಳಬೇಕು ಅಂದ್ರೆ ಏನು? ಎಂದು ಪರೋಕ್ಷವಾಗಿ ಬಿ.ಎಲ್. ಸಂತೋಷ ವಿರುದ್ಧ ಹರಿಹಾಯ್ದ ಸ್ವಾಮೀಜಿ, ಯಡಿಯೂರಪ್ಪ ಸಿಎಂ ಇದ್ದಾಗ ಹೀಗೆ ಮಾಡಿದರು. ಅವರನ್ನು ಕೆಳಗಿಳಿಸುವಾಗ ಹೇಗೆ ನಡೆಕೊಂಡರು ರಾಜ್ಯಕ್ಕೆ ಗೊತ್ತಿದೆ ಎಂದರು.

ಬಿಜೆಪಿಯು ಹುಬ್ಬಳ್ಳಿ–ಧಾರವಾಡ ಕೇಂದ್ರ ವಿಧಾನಸಭಾ ಚುನಾವಣೆ ಒಂದೇ ಮಾಡಿದರು. ಕಾಂಗ್ರೆಸ್ ನವರು ಜಗದೀಶ ಶೆಟ್ಟರ, ಸವದಿಯನ್ನು ಗೌರವಯುತವಾಗಿ ನಡೆಸಿಕೊಳ್ಳಬೇಕು ಎಂದು ಸ್ವಾಮೀಜಿ ಸಲಹೆ ನೀಡಿದರು.

ಬ್ರಾಹ್ಮಣ ವಿಚಾರವಾಗಿ ನಾನು ಆರು ತಿಂಗಳ ನಂತರ ಸುದ್ದಿಗೋಷ್ಠಿ ಮಾಡುತ್ತೇನೆ. ರಾಜ್ಯದಲ್ಲಿ ಏನಾಗಿದೆ ಅನ್ನುವ ದಾಖಲೆ ಇವೆ.

ಬ್ರಾಹ್ಮಣರ ಬಗ್ಗೆ ಮಾತನಾಡುವುದಕ್ಕೆ ನನಗೆ ಭಯವಿಲ್ಲ. ಯಾರ ಅಂಕುಶವೂ ನನಗಿಲ್ಲ. ಬಹಳ ಮಾತನಾಡಿ ಉಪಯೋಗವಿಲ್ಲ ಎಂದರು.

ಬಿಜೆಪಿಯವರು ರಾಜ್ಯದ ನಾಯಕರನ್ನು ಬಹಳ ಕೆಟ್ಟ ರೀತಿಯಲ್ಲಿ ನೋಡಿಕೊಂಡರು. ಅವರದು ಅವರೇ ಉಂಡರು. ದಕ್ಷಿಣ ಭಾರತದ ಕುದುರೆಗಳನ್ನು ಕತ್ತೆ ಅಂದುಕೊಂಡಿದ್ದೇ ಇದಕ್ಕೆಲ್ಲ ಕಾರಣ. ಕರ್ನಾಟಕದ ನಾಯಕರನ್ನು ಬಿಟ್ಟು ಏನಾದರೂ ಮಾಡುತ್ತೀವಿ ಅಂ–ದುಕೊಂಡಿದ್ದರು. ರಾಜ್ಯದ ಮತದಾರರು ಬುದ್ಧಿಗೇಡಿಗಳಾ, ರಾಷ್ಟ್ರ ನಾಯಕರಿಗೆ ಸರಿಯಾದ ಪಾಠ ಕಲಿಸಿದ್ದಾರೆ ಎಂದರು.

ರಾಜ್ಯವನ್ನು ಸರಿಯಾದ ರೀತಿ ನಡೆಸುವ ಸಮರ್ಥ, ಯೋಗ್ಯ ಹಾಗೂ ಕರ್ನಾಟಕ ಒಂದು ದೃಷ್ಟಿಕೋನದಲ್ಲಿ ನೋಡುವ ವ್ಯಕ್ತಿ ಸಿಎಂ ಆಗಬೇಕು. ಉತ್ತರ ಕರ್ನಾಟಕದ ಲಿಂಗಾಯತ ನಾಯಕರಲ್ಲಿ ಸಾಕಷ್ಟು ಬುದ್ಧಿಜೀವಿಗಳು ಇದ್ದಾರೆ. ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು. ಇದು ನಮ್ಮಅಭಿಪ್ರಾಯ ಎಂದು ದಿಂಗಾಲೇಶ್ವರ ಸ್ವಾಮೀಜಿ ಹೇಳಿದರು.

# ಎನ್‌ಇಪಿ, ಪಠ್ಯಪುಸ್ತಕ ರದ್ದುಪಡಿಸಲು ದಸಂಸ ಆಗ್ರಹ

ಬೆಂಗಳೂರು: ನೂತನವಾಗಿ ರಚನೆಯಾಗಲಿರುವ ಕಾಂಗ್ರೆಸ್ ಸರ್ಕಾರ ಅವೈಜ್ಞಾನಿಕ ಎನ್‌ಇಪಿ (ಹೊಸ ಶಿಕ್ಷಣ ನೀತಿ) ರದ್ದುಗೊಳಿಸಬೇಕು, ಕೋಮುವಾದಿಕರಣ ಗೊಂಡ ಪಠ್ಯಪುಸ್ತಕಗಳನ್ನು ರದ್ದುಗೊಳಿಸಬೇಕು ಎಂದು ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಆಗ್ರಹಿಸಿದೆ.



ಈ ಕುರಿತಂತೆ ಪತ್ರ ಬರೆದಿರುವ ದಸಂಸ ರಾಜ್ಯ ಸಂಚಾಲಕರಾದ ಮಾವಳ್ಳಿ ಶಂಕರ್, “ಈ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಕರ್ನಾಟಕದ ಜನರು ನಿರೀಕ್ಷೆಗೂ ಮೀರಿ ಬೆಂಬಲಿಸಿದ್ದಾರೆ.

ಆದ್ದರಿಂದ, ತನ್ನ ಮೊದಲ ಸಂಪುಟ ಸಭೆಯಲ್ಲೇ ಕಾಂಗ್ರೆಸ್ ತಾನು ನೀಡಿರುವ ಪ್ರಮುಖ ಭರವಸೆಗಳನ್ನು (ಕಾಂಗ್ರೆಸ್ ಗ್ಯಾರಂಟಿಗಳು) ಜಾರಿಗೆ ತರಬೇಕು. ದಲಿತ ಹಾಗೂ ದಮನಿತ ಸಮುದಾಯದ ಮಕ್ಕಳಿಗೆ ಮಾರಕವಾಗಿರುವ ಅವೈಜ್ಞಾನಿಕ ಎನ್‌ಇಪಿ (ಹೊಸ ಶಿಕ್ಷಣ ನೀತಿ) ರದ್ದು ಮಾಡಬೇಕು.

ದ್ವೇಷ ತುಂಬಿದ ಪಠ್ಯ ಪರಿಷ್ಕರಣೆಯನ್ನು ಕೈಬಿಟ್ಟು, ಬರಗೂರು ರಾಮಚಂದ್ರಪ್ಪ ನೇತೃತ್ವದ ಪಠ್ಯವನ್ನೇ ಮುಂದುವರಿಸಬೇಕು” ಎಂದು ಆಗ್ರಹಿಸಿದ್ದಾರೆ.

ಕೇಂದ್ರದಲ್ಲಿ ಕಳೆದ ಒಂಬತ್ತು ವರ್ಷಗಳಿಂದ ಹಾಗೂ ಅನೈತಿಕ ಆಪರೇಷನ್ ಕಮಲದ ಮೂಲಕ ಕಳೆದ ಮೂರೂವರೆ ವರ್ಷಗಳಿಂದ ರಾಜ್ಯದಲ್ಲಿ ಆಡಳಿತ ನಡೆಸಿದ ಬಿಜೆಪಿ ಜನಸಾಮಾನ್ಯರನ್ನು ಇನ್ನಿಲ್ಲದಂತೆ ಕಾಡಿದೆ.

ಕೇಂದ್ರ ಸರ್ಕಾರದ ಬೆಲೆ ಏರಿಕೆ ಒಂದು ಕಡೆಯಾದರೆ, ಅವರ ಹಿಂದಿ ಹೇರಿಕೆ ಹಾಗೂ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ತರುವಂತಹ ಹಲವಾರು ನಿರ್ಧಾರಗಳು ಕನ್ನಡಿಗರನ್ನು ಇನ್ನಿಲ್ಲದಂತೆ ಹೈರಾಣಾಗಿಸಿದೆ.

ಕೇಂದ್ರ ಸರ್ಕಾರದ ಸಂವಿಧಾನ ವಿರೋಧಿ ನಡೆಗಳಿಗೆ ಮಂಡಿಯೂರುತ್ತಾ, ಬಿಜೆಪಿ ಹೈಕಮಾಂಡ್ ತಾಳಕ್ಕೆ ತಕ್ಕಂತೆ ಕುಣಿದ ಬಿ.ಎಸ್. ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಕನ್ನಡಿಗರ ಹಿತ ಕಾಯುವಲ್ಲಿ ವಿಫಲರಾದರು” ಎಂದು ಅಭಿಪ್ರಾಯಪಟ್ಟಿದ್ದಾರೆ.

“ಪೆಟ್ರೋಲ್, ಡೀಸೆಲ್, ಅಡುಗೆ ಎಣ್ಣೆ, ಗ್ಯಾಸ್ ಸೇರಿದಂತೆ ಹಲವು ದಿನಬಳಕೆ ವಸ್ತುಗಳು ರಾಜ್ಯದ ಬಡಜನರ ಕೈ ಸಡುತ್ತಿದ್ದರೆ, ಮತ್ತೊಂದು ಕಡೆ ಆಜಾನ್, ಹಲಾಲ್, ಬುರ್ಕಾ ಹಾಗೂ ಮುಸ್ಲಿಂ ಸಮುದಾಯದ ವ್ಯಾಪಾರಕ್ಕೆ ಜಾತ್ರೆ–ದೇವಾಲಯಗಳಲ್ಲಿ ಹೇರಿದ್ದ ನಿಷೇಧವನ್ನು ಸಮರ್ಥಿಸಿದ್ದ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ‘ಕ್ರಿಯೆಗೆ ಪ್ರತಿಕ್ರಿಯೆ’ ಎಂದು ಹೇಳಿ ರಾಷ್ಟ್ರಮಟ್ಟದಲ್ಲಿ ಕರ್ನಾಟಕದ ಮಾನವನ್ನು ಕಳೆದಿದ್ದರು” ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

# ದಿ.ಆಲಹಾಜ್ ಎಚ್ ಇಬ್ರಾಹಿಂ ಸಾಹೇಬರ 92 ನೇ ಜಯಂತಿ



ಬೈಲಹೊಂಗಲ: ನದಾಫ ಸಮಾಜದ ಅಭಿವೃದ್ದಿಗೆ ಹಗಲಿರುಳು ಶ್ರಮಿಸಿದ ದಿ.ಆಲಹಾಜ್ ಎಚ್ ಇಬ್ರಾಹಿಂ ಸಾಹೇಬರ ಸೇವೆಯನ್ನು ಪ್ರತಿಯೊಬ್ಬರು ಸ್ಮರಿಸಬೇಕು ಎಂದು ಕರ್ನಾಟಕ ರಾಜ್ಯ ನದಾಫ ಪಿಂಜಾರ ಸಂಘದ ತಾಲೂಕು ಅಧ್ಯಕ್ಷ ಅಬ್ದುಲಕಲಾಂ ಅಘೂದ ನದಾಫ ಹೇಳಿದರು.

ಅವರು ಸಂಗೊಳ್ಳಿ ರಾಯಣ್ಣ ವೃತ್ತದಲ್ಲಿರುವ ದಿ.ಹಿಂದೂಸ್ತಾನ ಮೈನಾರಿಟಿ ಮಲ್ಟಿಪರಪಜ್ ಕೋ.ಆಪ ಸೊಸೈಟಿಯಲ್ಲಿ ದಿ.ಆಲಹಾಜ್ ಎಚ್ ಇಬ್ರಾಹಿಂ ಸಾಹೇಬರ 92 ನೇ ಜಯಂತಿ ನಿಮಿತ್ತ ಅವರ ಭಾವಚಿತ್ರಕ್ಕೆ ಗೌರವ ಸಲ್ಲಿಸಿ ಮಾತನಾಡಿ, ರಾಜ್ಯಾದ್ಯಂತ ನದಾಫ ಪಿಂಜಾರ ಸಂಘವನ್ನು ಕಟ್ಟಿ ಜನಾಂಗದ ಅನುಕೂಲಕ್ಕೆ ಶಿಕ್ಷಣ, ಆರ್ಥಿಕ ,ಸಾಮಾಜಿಕ ಕ್ಷೇತ್ರದಲ್ಲಿ ಅನುಕೂಲವಾಗುವಂತಹ ಸೇವೆ ಮಾಡಿದ್ದಾರೆ. ಅವರ ಸೇವೆಯನ್ನು ನಾವೇಲ್ಲರೂ ಸ್ಮರಿಸಬೇಕು ಎಂದರು.

ಫಕ್ರುಸಾಬ ಹಳೇಮನಿ, ಅನ್ವರಹುಸೇನ ಪಾಟೀಲ, ಮೆಹಬೂಬಸುಭಾನಿ ನದಾಫ, ಶೌಕತಲಿ ಬುಡ್ರಕಟ್ಟಿ, ಮಕ್ತುಮಸಾಬ ನದಾಫ, ಬಾಳಾಸಾಬ ನದಾಫ, ಅಬ್ದುಲಸಾಬ ನದಾಫ, ಸತ್ತಾರಅಹ್ಮದ ನದಾಫ ಹಾಗೂ ನದಾಫ ಸಮಾಜ ಭಾಂದವರು ಇದ್ದರು.

# ಬೃಹತ್ತಾದ ಮೊಸಳೆ ಪ್ರತ್ಯಕ್ಷ



ಬೆಳಗಾವಿ: ಜಿಲ್ಲೆಯ ಚಿಕ್ಕೋಡಿ ತಾಲೂಯ ಸದಲಗಾ ಪಟ್ಟಣದ ದತ್ತವಾಡ ರೋಡ್ ಹತ್ತಿರ ಸುಕುಮಾರ್ ಹೂಗಾರೆ ತೋಟದ ರಸ್ತೆಯಲ್ಲಿ ರವಿವಾರ ರಾತ್ರಿ 8 ಅಡಿಯ ಮೋಸಳೆ ಪ್ರತ್ಯಕ್ಷ ಇದ್ದನ್ನು ಹಿಡಿಯುವಲ್ಲಿ ಗ್ರಾಮಸ್ಥರು ಕಮತೆ, ಸುರೇಶ್ ಮಹಿಪತಿ ಸದಾಶಿವ ನಮೋಜೆ, ಪ್ರಶಾಂತ ಕೊಲ್ಲಾಪುರೆ, ಕಣಗಲೆ ತೋಟದ ಜನರು,ಅಭಿಜಿತ್ ಪಾಟೀಲ್, ಅಭಿನಂದನ್ ಪಾಟೀಲ್ ಎಲ್ಲರೂ ಸೇರಿ ಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ. ನಂತರ ಸುರಕ್ಷಿತವಾಗಿ ಮೊಸಳೆಯನ್ನು ಅರಣ್ಯ ಇಲಾಖೆಗೆ ಒಪ್ಪಿಸಿದಾರೆ.

# ವಿಶ್ವ ತಾಯಿಂದಿರ ದಿನಾಚರಣೆ ಅಂಗವಾಗಿ 23ನೇ ವಾರ್ಷಿಕ ಉಚಿತ ಬೇಸಿಗೆ ಶಿಬಿರ

ಬೆಳಗಾವಿ: ಸಿಹಿ ಪದಾರ್ಥ ಹಾಗೂ ಐಸ್ಕ್ರೀಮ್ ಮಕ್ಕಳಿಗೆ ಅಚ್ಚುಮೆಚ್ಚು ಆದ–’ರೆ ಅವು ಬೇಡ ಎನ್ನುತ್ತಿರುವ ಕೆಎಲ್‌ಇ ಮಧುಮೇಹ ಕೇಂದ್ರದ ಮಕ್ಕಳು ಸ್ವಯಂಪ್ರೇರಿತವಾಗಿ ಬೇಡ ಎನ್ನುತ್ತಾರೆ. ಇದು ಸಂಕಲ್ಪ, ಶಿಸ್ತು ಮತ್ತು ಶಿಕ್ಷಣದಿಂದ ಮಕ್ಕಳಲ್ಲಿ ಬದಲಾವಣೆ ತರಲು ಸಾಧ್ಯ. ಅದನ್ನು ಈ ಕೇಂದ್ರವು ಮಾಡಿದೆ. ಇದು ಎಲ್ಲರಿಗೂ ಮಾದರಿ. ಮಧುಮೇಹ ಬಳಲುತ್ತಿರುವ ಮಕ್ಕಳಲ್ಲಿ ಬದಲಾವಣೆ ತರಲು ಸಾಧ್ಯವಿದೆ. ಆಯ್ದ ಪಾಲಕರ ತಂಡ ರಚಿಸಿ ಅವರಿಗೆ ಮಧುಮೇಹ ನಿಯಂತ್ರಣ ಕುರಿತು ಶಿಕ್ಷಣ ನೀಡಿದರೆ ಸಾಕು. ಪ್ರತಿದಿನ ಊರಿಂದ ಊರಿಗೆ ಅಲೆಯುವ ಕಬ್ಬು ಕಡಿಯುವ ಹಾಗೂ ಕುರಿ ಕಾಯುವ ಮಕ್ಕಳೂ ಕೂಡ ತಪಾಸಣೆ ಮತ್ತು ಚಿಕಿತ್ಸೆ ಪಡೆಯುತ್ತಾರೆ. ಅದಕ್ಕಾಗಿ ಅವಶ್ಯವಿರುವ ಇಚ್ಛಾಶಕ್ತಿ ಬೇಕು. ಪಾಲಕರ ಬಲಿಷ್ಠವಾದ ತಂಡ ಎಲ್ಲವನ್ನು ಸಾಧಿಸಬಹುದು ಎಂದು ಔರಂಗಬಾದನ ಸಾರ್ದಾ ಡಯಾಬಿಟಿಸ್ ಕೇಂದ್ರ ಹಾಗೂ ಸೆಲ್ಫ ಕೇರನ ಡಾ. ಅರ್ಚನಾ ಸಾರ್ದಾ ಅವ–ರಿಂದಿಲ್ಲಿ ಹೇಳಿದರು.

ಕೆಎಲ್‌ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಹಾಗೂ ವೈದ್ಯಕೀಯ ಸಂಶೋಧನಾ ಕೇಂದ್ರದ ಮಧುಮೇಹ ಕೇಂದ್ರವು ವಿಶ್ವ ತಾಯಿಂದಿರ ದಿನಾಚರಣೆ ಅಂಗವಾಗಿ ದಿ. 15 ಮೇ 2023ರಂದು ಮಧುಮೇಹದಿಂದ ಬಳಲುತ್ತಿರುವ ಮಕ್ಕಳಿಗಾಗಿ ಏರ್ಪಡಿಸಲಾಗಿದ್ದ 23ನೇ ವಾರ್ಷಿಕ ಉಚಿತ ಬೇಸಿಗೆ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪಾಲಕ್ಪರಿಗೆ ನೀಡುವ ಮಧುಮೇಹ ಶಿಕ್ಷಣಕ್ಕಾಗಿ ಹಣ, ಪದವಿಯೂ ಅವಶ್ಯವಿಲ್ಲ. ಕೇವಲ ಕಲೆಯೊಂದಿದ್ದರೆ ಸಾಕು. ಆಹಾರ ಪದ್ದತಿ ತಿಳಿದಿರಬೇಕು. ಅದರಿಂದ ಮಧುಮೇಹ ಬದಲಾವಣೆ



ಸಾಧ್ಯ. ಪಾಲಕರ ತಂಡ ರಚಿಸಿ ಅವ–ರಿಗೆ ಶಿಕ್ಷಣ ನೀಡಿದರೆ ಸಾಕು ಎಂದು ತಿಳಿಸಿದರು.

ಮಕ್ಕಳಿಗೆ ಕೇವಲ ಇನ್ಸುಲಿನ್ ಅವಶ್ಯವಿಲ್ಲ. ಮುಖ್ಯವಾಗಿ ಮಧುಮೇಹ ತಪಾಸಿಸಿಕೊಳ್ಳಲು ಗ್ಲುಕೊಮೀಟ–ರ ಹಾಗೂ ಕಡಿಮೆ ದರದ ಸ್ಟ್ರಿಪ್ ಸಿಗಬೇಕು. ಇದರಿಂದ ಎಲ್ಲ ಮಕ್ಕಳ ತಪಾಸಣೆ ಸಾಧ್ಯ. ಸ್ಥಳೀಯ ಜನಪ್ರತಿನಿಧಿಗಳ ಸಹಕಾರದಿಂದ ತಪಾಸಣಾ ಸಾಮಗ್ರಿಗಳನ್ನು ಪಡೆಯಬೇಕು. ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆಯಿರಿ ಎಂದು ಸಲಹೆ ನೀಡಿದ ಅವರು, ನಮ್ಮ ಉಡಾನ ಯೋಜನೆಯಲ್ಲಿ 3 ಸಾವಿರ ಮಕ್ಕಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಬೆಳಗಾವಿಯ ಮಧುಮೇಹ ಕೇಂದ್ರದಲ್ಲಿ 512 ಮಕ್ಕಳು ಚಿಕಿತ್ಸೆ ಪಡೆಯುತ್ತಿರುವದು ಸಂತೋಷವನ್ನುಂಟು ಮಾಡಿದೆ. ಡಾ. ಎಂ ವಿ ಜಾಲಿ ಹಾಗೂ ಸುಜಾತಾ ದಂಪತಿಗಳ ಕಾರ್ಯ ಅತ್ಯಂತ ಅಚ್ಚುಕಟ್ಟಾಗಿ ನಡೆಯುತ್ತಿದ್ದು ಈ ಭಾಗದ ಮಧುಮೇಹ ಮಕ್ಕಳಿಗೆ ಆಶಾಕಿರಣವಾಗಿದೆ ಎಂದು ಶ್ಲಾಘಿ–ಸಿದರು.

ಚಿಕ್ಕ ಮಕ್ಕಳ ಮಧುಮೇಹ ತಜ್ಞವೈದ್ಯರಾದ ಡಾ. ಸ್ಮಜಾತಾ ಜಾಲಿ ಅವರು ಮಾತನಾಡಿ, ಬೇರೆಯವ–ರಿಗೋಸ್ಕರ ಸೇವೆ ನೀಡುವವರು ತಾಯಿಯಾಗಿರುತ್ತಾರೆ. ಬೇರೆಯವರ ಸೇವೆಯಲ್ಲಿದ್ದರೆ ಸದಾ ಜೀವಂತ ಆದರೆ ಏನೂ ಮಾಡದಿದ್ದರೆ ಇದ್ದರೂ ಸತ್ತಂತೆ ಎಂದ ಅವರು, ಡಾ, ಅರ್ಚನಾ ಅವರು ಪ್ರಾರಂಭಿಸಿದ ಉಡಾನ ಸಂಸ್ಥೆಯ 3000 ಮಕ್ಕಳು ಇದ್ದಾರೆ. ಅವರ ಮಾದರಿ ಕಾರ್ಯದಂತೆ ಉಡಾನ ಯೋಜನೆಯನ್ನು ಬೆಳಗಾವಿಯಲ್ಲಿಯೂ ಪ್ರಾರಂಭಿಸಲು ಉತ್ಸುಕರಾಗಿದ್ದೇವೆ. ನಮ್ಮ ಕೇಂದ್ರದಲ್ಲಿ 512 ಮಕ್ಕಳು, 12 ಮೊಮ್ಮಕ್ಕಳು ಇದ್ದಾರೆ. ಮಧುಮೇಹ ಇದ್ದರೂ ಕೂಡ ಮದುವೆಯಾಗಬಹುದು. ಸುರತ, ಗೋವಾ ಹಾಗೂ ಮಹಾರಾಷ್ಟ್ರದಿಂದ ಮಕ್ಕಳು ಚಿಕಿತ್ಸೆಗಾಗಿ ಆಗಮಿಸುತ್ತಿದ್ದಾರೆ. 10 ತಿಂಗಳೊಳಗಿನ ಮಧುಮೇಹ ಪೀಡಿತ ಮಕ್ಕಳಿಗೆ ವಿಶೇಷ ಕಾಳಜಿವಹಿಸಲಾಗುತ್ತಿದೆ ಎಂದು ತಿಳಿಸಿದರು.

ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರಾದ ಡಾ. (ಕರ್ನಲ್) ಎಂ ದಯಾನಂದ ಅವರು ಮಾತನಾಡಿ, ಮಧುಮೇಹ ತಪಾಸಣೆ ಮತ್ತು ಚಿಕಿತ್ಸೆಯ ಯೋಜನೆಯನ್ನು ವಿಸ್ತರಿಸಿ ಎಲ್ಲರಿಗೂ ಚಿಕಿತ್ಸೆ ದೊರೆಯುವಂತೆ ಯೋಜನೆ ರೂಪಿಸಬೇಕಾಗಿದೆ. ಅದಕ್ಕೆ ಅವಶ್ಯವಿರುವ ಸಹಕಾರವನ್ನು ನೀಡಲಾಗುತ್ತದೆ ಎಂದು ತಿಳಿಸಿದರು. ಕಾಹೇರನ ಉಪಕುಲಪತಿ ಡಾ. ನಿತಿನ ಗಂಗಾನೆ, ಹಿರಿಯ ಮಧುಮೇಹ ತಜ್ಞವೈದ್ಯರಾದ ಡಾ. ಎಂ ವಿ ಜಾಲಿ ಡಾ. ವಿ ಡಿ ಪಾಟೀಲ ಅವರು ಮಾತನಾಡಿದರು. ಡಾ. ತನ್ಮಯಾ ಮೆಟಗುಡ ಅವರು ಉಪಸ್ಥಿತರಿದ್ದರು. ಡಾ.ಪ್ರಾಚಿ ಹಾಗೂ ಡಾ. ಜ್ಯೋತಿ ನಿರೂಪಿಸಿದರು. ಡಾ. ಸಂಜಯ ಕಂಬಾರ ವಂದಿಸಿದರು.

ಮಧುಮೇಹ ವನ್ನು ನಿಂತ್ರಣದಲ್ಲಿಟ್ಟುಕೊಂಡಿರುವ ಸ್ವರಾಜ ಶಿಂದೆ, ಶ್ರೀದೇವಿ ಹೆಗ್ಗನ್ನವರ ಹಾಗೂ ಬೆಸ್ಟ ಮದರ ಭಾರತಿ ಜೈನ ಅವರಿಗೆ ಸ್ವರ್ಣ ಪದಕ ನೀಡಿ ಗೌರವಿಸಲಾಯಿತು. ಶಿಬಿರದಲ್ಲಿ ರಸಪ್ರಶ್ನೆ, ಯೋಗ, ಧ್ಯಾನ, ಮಧುಮೇಹ ಅಡುಗೆ ತಯಾ–ರಿಕೆ, ಆಹಾರ ಪದ್ಧತಿ, ಶಿಕ್ಷಣ ಸೇ–ರಿದಂತೆ ವಿವಿಧ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿತ್ತು. ಶಿಬಿರದಲ್ಲಿ ಸುಮಾರು 140 ಕ್ಕೂ ಅಧಿಕ ಮಕ್ಕಳು ಪಾಲ್ಗೊಂಡಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089